ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com  E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 75 ಸಂಚಿಕೆ- 75 | PAGE- 8 ಪುಟ-8 | ಭಾನುವಾರ 27.04.2025 | RS.2/- ಬೆಲೆ 2/-

# ಸ್ವಾಂತಂತ್ರ್ಯ ಹೋರಾಟದಲ್ಲಿ ಭಾಗವಹಿಸದ ಸಂಘ ಪರಿವಾರ ದೇಶಭಕ್ತಿ ಬಗ್ಗೆ ಮಾತಾಡುತ್ತದೆ



ಮಲ್ಲಮ್ಮ ನುಡಿ ವಾರ್ತೆ ಮೈಸೂರು:ಏ.26: ಸಂಘ ಪರಿವಾರ ಯಾವತ್ತೂ ಸ್ವಾತಂತ್ರ್ಯ ಹೋರಾಟಕ್ಕೆ ಬರಲೇ ಇಲ್ಲ. ಈಗವರು ದೇಶಭಕ್ತಿ ಬಗ್ಗೆ ಮಾತಾಡುತ್ತಾರೆ. ಸಾವರ್ಕರ್ ಮತ್ತು ಗೋಲ್ವಾಲ್ಕರರು ಅಂಬೇಡ್ಕರ್ ಅವರ ಸಂವಿಧಾನದ ವಿರುದ್ಧ ಇದ್ದವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶನಿವಾರ ಹೇಳಿದರು.

ಯುವ ಕಾಂಗ್ರೆಸ್ ಆಯೋಜಿಸಿದ್ದ 'ಯುವ ಕ್ರಾಂತಿ' ತರಬೇತಿ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಮುಖ್ಯಮಂತ್ರಿ, ಸ್ವಾತಂತ್ರ್ಯ ಹೋರಾಟ ಮತ್ತು ಆಧುನಿಕ ಭಾರತ ನಿರ್ಮಾಣದಲ್ಲಿ ಕಾಂಗ್ರೆಸ್ ನ ತ್ಯಾಗ-ಬಲಿದಾನ ಮಹತ್ವದ ಪಾತ್ರ ನಿರ್ವಹಿಸಿದೆ. ದೇಶಕ್ಕೆ ನಾಗರಿಕ ಹಕ್ಕು ಮತ್ತು ಸಾಮಾಜಿಕ ನ್ಯಾಯ ಒದಗಿಸಲು ಹುಟ್ಟಿದ ಪಕ್ಷ ಕಾಂಗ್ರೆಸ್. ಸಂಘ ಪರಿವಾರ ಯಾವತ್ತೂ ಸ್ವಾತಂತ್ರ್ಯ ಹೋರಾಟಕ್ಕೆ ಬರಲೇ ಇಲ್ಲ.ಆದರೆ ಈಗ ಇವರು ನಮಗೆ ದೇಶ ಭಕ್ತಿ ಬಗ್ಗೆ ಮಾತನಾಡುತ್ತಾರೆ ಎಂದರು.

ಗಾಂಧಿ ಅವರು ಸ್ವಾತಂತ್ರ್ಯ ಹೋರಾಟದ ನೇತೃತ್ವವಹಿಸಿದಂತೆ, ಭಾರತದಲ್ಲಿ ಅಂಬೇಡ್ಕರ್ ಅವರ ಸಂವಿಧಾನಕ್ಕೆ ಭದ್ರ ಬುನಾದಿ ಹಾಕಿದವರು ನೆಹರೂರವರು. ಬಹುತ್ವ ಭಾರತದ ನೆಲದಲ್ಲಿ ಏಕತೆ ಮೂಡಿಸಿ ಸಹಿಷ್ಣುತೆಯನ್ನು ಆಚರಣೆಗೆ ತರಲು ನೆಹರೂ ಕೊಡುಗೆ ಅಪಾರ. ಮನುಸ್ಮೃತಿ ಪ್ರೇರಿತ ಜಾತಿ ವ್ಯವಸ್ಥೆ ಭಾರತ ಸಮಾಜವನ್ನು ಜಾತಿ ಆಧಾರದಲ್ಲಿ ಒಡೆಯಿತು. ಈ ಇತಿಹಾಸ ನಿಮಗೆ ಗೊತ್ತಿರಬೇಕು ಎಂದು ತಿಳಿಸಿದರು.

ಯುವ ಕಾಂಗ್ರೆಸ್ ಅಂದರೆ ಭಾರತದ ಸಂವಿಧಾನ ಮತ್ತು ಬಹುತ್ವದ ರಕ್ಷಣೆಗೆ ನಿಂತ ಯುವ ಸೈನ್ಯ. ನಾವು ಏಕೆ ಕಾಂಗ್ರೆಸ್ ಕಟ್ಟುತ್ತಿದ್ದೇವೆ, ಆರ್.ಎಸ್. ಎಸ್ ಮತ್ತು ಸಂಘ ಪರಿವಾರ ಹೇಗೆ ಭಾರತದ ಬಹುತ್ವ ಮತ್ತು ಸಂವಿಧಾನ ವಿರೋಧಿ ಎನ್ನುವ ಸ್ಪಷ್ಟತೆ ನಿಮಗೆ ಇರಬೇಕು. ಈ ಸ್ಪಷ್ಟತೆ ಇಲ್ಲದವರು ಬಹಳ ವರ್ಷ ಕಾಂಗ್ರೆಸ್ ನಲ್ಲಿ ಉಳೀತಾರೆ ಎನ್ನುವುದು ಅನುಮಾನ. ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ, ಸಹಿಷ್ಣುತೆ ಹಾಗೂ ಸಹಬಾಳ್ವೆ ನಮ್ಮ ಸಂವಿಧಾನದ ಉಸಿರು. ಇದೇ ಭಾರತದ ಉಸಿರು ಕೂಡ ಆಗಿದೆ ಎಂದರು.

"ಅಧಿಕಾರ ಬಲಾಢ್ಯರ ಕೈಯಲ್ಲಿ ಇರಬಾರದು. ಜನಸಾಮಾನ್ಯರ ಕೈಯಲ್ಲಿ ಇರಬೇಕು" ಎಂದು ಅಂಬೇಡ್ಕರ್ ಹೇಳಿದ್ದರು. ಕಾಂಗ್ರೆಸ್ ಜನರ ಕೈಗೆ ಅಧಿಕಾರ ಮತ್ತು ಅವಕಾಶಗಳನ್ನು ನೀಡುತ್ತಿದೆ. ಬಿಜೆಪಿ ಬಲಾಢ್ಯರಿಗೆ ಅಧಿಕಾರ ಮತ್ತು ಅವಕಾಶ ನೀಡುತ್ತಿದೆ. ಇದು ಸಂವಿಧಾನ ವಿರೋಧಿ. ನಾನು ಎರಡು ಬಾರಿ ಮುಖ್ಯಮಂತ್ರಿಯಾಗಿ ಅಸಮಾನತೆಯನ್ನು ಕಡಿಮೆ ಮಾಡುವ ಕಾರ್ಯಕ್ರಮಗಳನ್ನು ರೂಪಿಸಿ ಜಾರಿ ಮಾಡಿದ್ದೇನೆ. ಸ್ವಾತಂತ್ರ್ಯ ದೊರೆತದ್ದು ಸಾರ್ಥಕ ಆಗಬೇಕಾದರೆ ಪ್ರತಿಯೊಬ್ಬರೂ ಆರ್ಥಿಕ ಮತ್ತು ಸಾಮಾಜಿಕ ಸಬಲತೆ ಪಡೆದುಕೊಳ್ಳಬೇಕು. ಕಟ್ಟ ಕಡೆಯ ಮನುಷ್ಯನಿಗೆ ಶಕ್ತಿ ಕೊಡುವುದೇ ಸರ್ವೋದಯದ ಆಶಯ ಎಂದು ತಿಳಿಸಿದರು.

ಮೌಢ್ಯ, ಕಂದಾಚಾರ, ಕರ್ಮ ಸಿದ್ಧಾಂತವನ್ನು ಕೃತಕವಾಗಿ ಸೃಷ್ಟಿಸಿ ನೀರು ಗೊಬ್ಬರ ಹಾಕಿ ಗಟ್ಟಿ ಮಾಡಿಟ್ಟಿದ್ದಾರೆ. ದೇವರು ಒಬ್ಬರಿಗೊಂದು, ಮತ್ತೊಬ್ಬರಿಗೊಂದು ಮಾಡುವುದಿಲ್ಲ. ದೇವರ ಹೆಸರಲ್ಲಿ ಮೌಢ್ಯಗಳನ್ನು ಬಿತ್ತುವವರ ಬಗ್ಗೆ ಎಚ್ಚರವಿರಲಿ.

ಶರಣ ಬಸವಣ್ಣ ಹೇಳಿದ ರೀತಿಯಲ್ಲಿ ದೇವರು ಇದ್ದಾನೆ. ಬಸವಣ್ಣರ ರೀತಿಯಲ್ಲಿ ದೇವರನ್ನು ಕಾಣಬೇಕು. ಮಾಡಬಾರದ ಪಾಪಗಳನ್ನೆಲ್ಲಾ ಮಾಡಿ ದೇವರಿಗೆ ಕೈ ಮುಗಿದರೆ ಪಾಪ ಹೋಗುವುದಿಲ್ಲ. ಬಿಜೆಪಿ ದೇವರು, ಧರ್ಮದ ಹೆಸರಲ್ಲಿ ಬರೀ ಸುಳ್ಳು ಹರಡುತ್ತದೆ. ಈ ಬಗ್ಗೆ ದೇಶದ ಜನರ ತಿಳಿವಳಿಕೆ ಹೆಚ್ಚಿಸುವ ಕೆಲಸ ಆಗಬೇಕಿದೆ. ತನ್ನನ್ನು ಚುನಾವಣೆಯಲ್ಲಿ ಸೋಲಿಸಿದ್ದು ಸಾವರ್ಕರ್ ಮತ್ತು ಡಾಂಗೆ ಎಂದು ಅಂಬೇಡ್ಕರ್ ಅವರೇ ಸ್ಪಷ್ಟವಾಗಿ ಬರೆದಿದ್ದಾರೆ. ನಿಮಗೆ ಇಂಥಾ ವಿಷಯಗಳಲ್ಲಿ ಸ್ಪಷ್ಟತೆ ಮತ್ತು ಬದ್ಧತೆ ಇದ್ದರೆ ಯಾರು ಏನೇ ಮಾಡಿದರೂ ನೀವು ಬದಲಾಗಲ್ಲ ಎಂದರು.

ರಾಜೀವ್ ಗಾಂಧಿ ಅವರು ಕೊಟ್ಟ ಮೀಸಲಾತಿಯನ್ನು ವಿರೋಧಿಸಿ ನ್ಯಾಯಾಲಯದ ಮೆಟ್ಟಿಲೇರಿದ್ದು ಬಿಜೆಪಿಯ ರಾಮಾ ಜೋಯಿಸ್. ಆದರೆ ನ್ಯಾಯಾಲಯ ರಾಜೀವ್ ಗಾಂಧಿ ಅವರು ತಂದ ತಿದ್ದುಪಡಿಯನ್ನು ಎತ್ತಿ ಹಿಡಿದು, ಇದು ಸಂವಿಧಾನ ಬದ್ಧವಾಗಿದೆ ಎಂದು ಹೇಳಿತು. ಮೀಸಲಾತಿಯನ್ನು ವಿರೋಧಿಸಿದ್ದ ಬಿಜೆಪಿ ಮಂಡಲ್ ವರದಿಯನ್ನೂ ವಿರೋಧಿಸಿತು. ಹೀಗಾಗಿ ಇತಿಹಾಸ ಮತ್ತು ಸಿದ್ಧಾಂತದ ಬಗ್ಗೆ ನಿಮಗೆ ಸ್ಪಷ್ಟತೆ ಇದ್ದರೆ ಮುಂದೆ ಉತ್ತಮ ನಾಯಕರಾಗಿ ಬೆಳೆಯುತ್ತೀರಿ ಎಂದು ತಿಳಿಸಿದರು.

ಯುವ ಕಾಂಗ್ರೆಸ್ ಇಂದು ಇಲ್ಲಿ ಆಯೋಜಿಸಿರುವ ಇಂತಹ ಕಾರ್ಯಾಗಾರಗಳು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ನಡೆಯಬೇಕು ಎಂದು ಮುಖ್ಯಮಂತ್ರಿ ಕರೆ ನೀಡಿದರು.

## ಕಾಶ್ಮೀರ ಭದ್ರತಾ ಸಿಬ್ಬಂದಿ ಕಾರ್ಯಾಚರಣೆ : 175ಕ್ಕೂ ಹೆಚ್ಚು ಮಂದಿ ವಶಕ್ಕೆ

ಮಲ್ಲಮ್ಮ ನುಡಿ ವಾರ್ತೆ ಶ್ರೀನಗರ:ಏ.26: ಪಹಲ್ಗಾಮ್ ನ ಬೈಸರನ್ ಕಣಿವೆಯಲ್ಲಿ ನೆತ್ತರು ಹರಿಸಿದ್ದ ಉಗ್ರರ ವಿರುದ್ಧ ಭಾರತೀಯ ಸೇನೆಯ ಕಾರ್ಯಾಚರಣೆ ಶುರುವಾಗಿದೆ. ಇನ್ನೂ ಉಗ್ರರಿಗೆ ಹಣಕಾಸು ಸಹಾಯ ಮಾಡಿರುವ ಶಂಕೆಯಲ್ಲಿ ಅನಂತನಾಗ್ ಜಿಲ್ಲೆಯಲ್ಲಿ 175 ಮಂದಿಯನ್ನ ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಇದೇ ವೇಳೆ ಕುಪ್ವಾರದಲ್ಲಿ ಕೂಂಬಿಂಗ್ ವೇಳೆ 8 ಎಕೆ 47 ಸೇರಿದಂತೆ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನ ಜಪ್ತಿ ಮಾಡಲಾಗಿದೆ. ಇನ್ನೂ ಪಾಕಿಸ್ತಾನ ಪ್ರಜೆಗಳು ದೇಶ ತೊರೆಯಲು ಕೇಂದ್ರ ಸರ್ಕಾರ 48 ಗಂಟೆ ಗಡುವು ನೀಡಿತ್ತು. ಈ ಬೆನ್ನಲ್ಲೇ ಭಾರತಕ್ಕೆ ಭೇಟಿ ನೀಡಿದ ಒಟ್ಟು 191 ಪಾಕಿಸ್ತಾನಿ ಪ್ರಜೆಗಳು ಪಂಜಾಬ್ ನ ಅಮೃತಸರದ ಅಟ್ಟಾರಿ-ವಾಘಾ ಭೂಮಾರ್ಗದ ಮೂಲಕ

(2ನೇ ಪುಟ ನೋಡಿ)

## ಗುಂಡು ಹೊಡೆದು ಎಟಿಎಂ ದರೋಡೆಕೋರರ ಬಂಧನ







ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಏ.26: ನಗರದ ಕಾಕಡೆ ಚೌಕ ಸಮೀಪದ ಎಟಿಎಂ ದರೋಡೆ ಮಾಡಿ ಪರಾರಿಯಾಗಿದ್ದ ಹರಿಯಾಣ ಮೂಲದ ಇಬ್ಬರನ್ನು ಪೊಲೀಸರು ಗುಂಡು ಹೊಡೆದು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ತಸ್ಲೀಂ ಮತ್ತು ಶರೀಫ್ ಬಂಧಿತರು. ಕಲಬುರಗಿ ಹೊರವಲಯದ ಬೇಲೂರ್ ಕ್ರಾಸ್ ಬಳಿ ಆರೋಪಿಗಳು ಇರುವ ಕುರಿತು ಮಾಹಿತಿ ಸಂಗ್ರಹಿಸಿದ್ದ ಸಬ್ ಅರ್ಬನ್ ಠಾಣೆಯ ಸಿಪಿಐ ಸಂತೋಷ್ ತಟ್ಟೆಪಲ್ಲಿ ಹಾಗೂ ಪಿ.ಎಸ್.ಐ ಬಸವರಾಜ ಆರೋಪಿಗಳನ್ನು ಶರಣಾಗುವಂತೆ ಸೂಚಿಸಿದಾಗ ಬದಲಿಗೆ ಇಬ್ಬರ ಮೇಲೂ ಆರೋಪಿಗಳು ಚಾಕುವಿನಿಂದ ಹಲ್ಲೆ ನಡೆಸಲು ಮುಂದಾಗಿದ್ದಾರೆ. ಹೀಗಾಗಿ ಸ್ವರಕ್ಷಣೆಯ ದೃಷ್ಟಿಯಿಂದ ಆರೋಪಿಗಳ ಮೇಲೆ ಗುಂಡು ಹಾರಿಸಲಾಗಿದೆ. ಅವರೊಂದಿಗೆ ಕಾರಿನಲ್ಲಿದ್ದ ಇತರ ಇಬ್ಬರನ್ನು ಸಹ ಬಂಧಿಸಲಾಗಿದೆ ಎಂದು ನಗರ ಪೊಲೀಸ್ ಕಮಿಷನರ್ ಶರಣಪ್ಪ ಡಗೆ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯಾದ್ಯಂತ ಎಟಿಎಂ ದರೋಡೆಯನ್ನೇ ವೃತ್ತಿಯಾಗಿಸಿಕೊಂಡಿದ್ದ ಈ ಇಬ್ಬರೂ ಇತರ ಸಹಚರರೊಂದಿಗೆ ಏ.9 ರಂದು ಗ್ಯಾಸ್ ಕಟರ್ ಬಳಸಿ ಮಧ್ಯರಾತ್ರಿ ಕಾಕಡೆ ಚೌಕ ಸಮೀಪದ ಎಸ್.ಬಿ.ಐ ಎಟಿಎಂ ದರೋಡೆ ನಡೆಸಿ 18 ಲಕ್ಷ ರೂ ದೋಚಿದ್ದರು.

ಬೇಲೂರು ಕ್ರಾಸ್ ಬಳಿ ಆರೋಪಿಗಳ ಚಲನವಲನದ ಕುರಿತು ಮಾಹಿತಿ ಸಂಗ್ರಹಿಸಿದ ಪೊಲೀಸರು ಅವರನ್ನು ಬಂಧಿಸಲು ತೆರಳಿದ್ದ ವೇಳೆ ಚಾಕುವಿನಿಂದ ಪೊಲೀಸರ ಮೇಲೆ ಹಲ್ಲೆ ನಡೆಸಲು ಮುಂದಾಗಿದ್ದಾರೆ. ಈ ವೇಳೆ ಪಿ.ಎಸ್.ಐ ಬಸವರಾಜ ಹಾಗೂ ಮೂವರು ಪೇದೆಗಳು ಗಾಯಗೊಂಡಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ದರೋಡೆ ನಡೆಸುವ ವೇಳೆ ಎಟಿಎಂ ಮುಂಭಾಗದಿಂದ ಐ20 ಬಿಳಿಬಣ್ಣದ ಕಾರು ಹಾದು ಹೋಗಿದ್ದನ್ನು ಪೊಲೀಸರು ತನಿಖೆ ವೇಳೆ ಪತ್ತೆ ಹಚ್ಚಿದ್ದರು. ಈ ಸುಳಿವು ಆಧರಿಸಿ ಆರೋಪಿಗಳ ಬಂಧನಕ್ಕೆ ಜಾಲ ಬೀಸಲಾಗಿತ್ತು ಎಂದರು.

ಗಾಯಗೊಂಡಿರುವ ಆರೋಪಿಗಳಾದ ಶರೀಫ್ ಹಾಗೂ ತಸ್ಲೀಂನನ್ನು ಜಿಮ್ಸ್ ಟ್ರಾಮಾ ಕೇರ್ ಸೆಂಟರ್ ಗೆ ದಾಖಲಿಸಲಾಗಿದೆ.

ಈ ಪೈಕಿ ತಸ್ಲೀಂ ವಿರುದ್ಧ ಬೇರೆ ಬೇರೆ ಠಾಣೆಗಳಲ್ಲಿ ಎಂಟು ಹಾಗೂ ಶರೀಫ್ ವಿರುದ್ಧ ಮೂರು ಪ್ರಕರಣಗಳು ದಾಖಲಾಗಿವೆ

(2ನೇ ಪುಟ ನೋಡಿ)

## ಜಿಲ್ಲಾ ಕ್ರೀಡಾಂಗಣದ ಈಜುಗೋಳದಲ್ಲಿ ಯುವಕ ಸಾವು



ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :ಏ.26: ತಾಲೂಕು ಇಂದರಗಿ ಗ್ರಾಮದ ಮೂರು ಜನ ಯುವಕರು ಈಜಲು ಬಂದ ಸಂದರ್ಭದಲ್ಲಿ ಜಿಲ್ಲಾ ಕ್ರೀಡಾಂಗಣದ ಈಜುಕೊಳ್ಳದಲ್ಲಿ ಇಂದ್ರೇಶ್ ಎಂಬ ಯುವಕ ಸಾವನ್ನಪ್ಪಿದ ದುರ್ಘಟನೆ ನಡೆದಿದೆ. ಇಂದರಗಿ ಗ್ರಾಮದ ಸರಿಸುಮಾರು 16 ವರ್ಷದ ಯುವಕ ಇಂದ್ರೇಶ 12.45 ಕ್ಕೆ ಈಜುಕೊಳದಲ್ಲಿ ಮೃತಪಟ್ಟ ಘಟನೆ ನಡೆದಿದೆ ಈಜುಗೊಳದಲ್ಲಿ ಯಾವುದೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸದೆ ಇರುವುದು ಘಟನೆಗೆ ಕಾರಣ ಎಂದು ಈಜಲು ಬಂದ ಯುವಕರು ಆರೋಪಿಸಿದ್ದಾರೆ.

ಈ ಬಗ್ಗೆ ಅಧಿಕಾರಿ ಅಪರ ಜಿಲ್ಲಾಧಿಕಾರಿ ಸಿದ್ದರಾಮೇಶ್ವರ ಅವರು ಮಾತನಾಡಿ ಜಿಲ್ಲಾಸ್ಪತ್ರೆಯಲ್ಲಿ ಮರೋಣತ್ತರ ಪರೀಕ್ಷೆ ನಡೆಸಲಾಗುತ್ತಿದೆ ಆ ನಂತರ ಸಾವಿಗೆ ಕಾರಣ ತಿಳಿದು ಬರಲಿದೆ ಎಂದು ತಿಳಿಸಿದ್ದಾರೆ.

## ರಾಜ್ಯದಲ್ಲಿರುವ ಪಾಕಿಸ್ತಾನಿ ಪ್ರಜೆಗಳನ್ನು ವಾಪಸ್ಸು ಕಳಿಸಲು ಕ್ರಮ :ಸಿದ್ದರಾಮಯ್ಯ



ಬೆಂಗಳೂರಿನಲ್ಲಿ ಪಾಕಿಸ್ತಾನಿಗಳ ಹೆಚ್ಚಿನ ಸಂಖ್ಯೆಯಲ್ಲಿದ್ದು, ಈ ಬಗ್ಗೆ ಮಾಹಿತಿ ಪಡೆಯಲಾಗವುದು ಎಂದರು.

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ಏ.26 :ಕೇಂದ್ರ ಸರ್ಕಾರದ ಸೂಚನೆಯಂತೆ, ಕರ್ನಾಟಕ ರಾಜ್ಯದಲ್ಲಿರಬಹುದಾದ ಪಾಕಿಸ್ತಾನಿ ಪ್ರಜೆಗಳ ಬಗ್ಗೆ ಮಾಹಿತಿ ಕಲೆಹಾಕಿ, ಅವರನ್ನು ವಾಪಸ್ಸು ಕಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಮೈಸೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಾ, ರಾಜ್ಯದ ವಿವಿಧ ನಗರಗಳಲ್ಲಿ ಪಾಕಿಸ್ತಾನಿಗಳ ಸಂಖ್ಯೆ ಬಗ್ಗೆ ಹಾಗೂ

ಕಾಶ್ಮೀರದ ಉಗ್ರರ ದಾಳಿ ಘಟನೆಯಲ್ಲಿ ಭದ್ರತಾ ವೈಫಲ್ಯವನ್ನು ಕೇಂದ್ರ ಸರ್ಕಾರ ಒಪ್ಪಿಕೊಂಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುವ ಸ್ಥಳಕ್ಕೆ ಹೆಚ್ಚಿನ ಭದ್ರತೆಯನ್ನು ಒದಗಿಸಬೇಕಿತ್ತು. ಹಿಂದೆ ಪುಲ್ವಾಮಾದಲ್ಲಿಯೂ 40 ಜನ ಯೋಧರು ಪ್ರಾಣ ಕಳೆದುಕೊಂಡಿದ್ದರು. ಈ ಘಟನೆಯಲ್ಲಿ ಭದ್ರತಾ ವೈಫಲ್ಯವಾಗಿದೆ. ಕೇಂದ್ರ ಸರ್ಕಾರದವರನ್ನು ನಂಬಿ ಪ್ರವಾಸಿಗರು ಹೋಗಿದ್ದರು ಹಾಗೂ ಈಗ ಯಾವುದೇ

(2ನೇ ಪುಟ ನೋಡಿ)

## ಸರ್ವಪಕ್ಷ ಸಭೆಗೆ ಹಾಜರಾಗದ ಪ್ರಧಾನಿ ವರ್ತನೆಗೆ ಖರ್ಗೆ ಕಿಡಿ




ಅಂಬೇಡ್ಕರ್ ಪುತ್ಥಳಿ ಅನಾವರಣ ಕಾರ್ಯಕ್ರಮದಲ್ಲಿ ಮಾತನಾಡಿದ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಏ.26: ಸರ್ಕಾರ ಒಂದು ಸಭೆ ಕರೆದ ನಂತರ ಸರ್ಕಾರದ ವತಿಯಿಂದ ಪ್ರಧಾನ ಮಂತ್ರಿ ಹಾಜರಿರಬೇಕಿತ್ತು. ಆದರೆ, ಅವರ ಹಾಜರಾತಿ ಇರಲಿಲ್ಲ. ಪ್ರಧಾನ ಮಂತ್ರಿಗಳ ಈ ವರ್ತನೆ ಸರಿಯಿಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕಿಡಿಕಾರಿದರು.

ನಗರದ ಕೆಜೆ ಹಳ್ಳಿಯ ಅಂಬೇಡ್ಕರ್ ಮೆಡಿಕಲ್ ಕಾಲೇಜು ಆವರಣದಲ್ಲಿ ಅವರು, ಪೆಹಲ್ಗಾಮ್ ದಾಳಿ ವಿಚಾರವಾಗಿ ಪ್ರಧಾನ ಮಂತ್ರಿಗಳು ಸರ್ವ ಪಕ್ಷಗಳ ಸಭೆ ಕರೆದಿದ್ದರು. ನಾವು ಎಲ್ಲರೂ ಹೋಗಿದ್ದೆವು. ಎಲ್ಲರೂ ಭಾಗಿಯಾಗಿದ್ದೆವು. ಲೋಕಸಭೆ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಕೂಡ ಇದ್ದರು. ಸರ್ಕಾರ ಒಂದು ಸಭೆಯನ್ನ ಕರೆದ ನಂತರ ಸರ್ಕಾರದ ವತಿಯಿಂದ ಪ್ರಧಾನ ಮಂತ್ರಿ ಹಾಜರಿರಬೇಕಿತ್ತು. ಆದರೆ, ಅವರ ಹಾಜರಾತಿ ಇರಲಿಲ್ಲ. ಈ

(2ನೇ ಪುಟ ನೋಡಿ)

## ಪೊಲೀಸ್ ಇಲಾಖೆ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಕೆಲಸ ಮಾಡಬೇಕು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 26 : ಬೀದರ್ ನಲ್ಲಿ ಗನ್ ತೋರಿಸಿ ಮನೆ ದರೋಡೆ ಹಾಗೂ ಕಲಬುರಗಿಯಲ್ಲಿ ಎಟಿಎಂ ದರೋಡೆ ಖಾಕಿ ಮೇಲೆ ಫೈರಿಂಗ್ ವಿಚಾರ ಬೀದರ ನಲ್ಲಿ ಸಚಿವ ಈಶ್ವರ್ ಖಂಡ್ರೆ ಪ್ರತಿಕ್ರಿಯೆ ನೀಡಿದರು.

ಬೀದರ್ ಹಾಗೂ ಕಲಬುರಗಿಯಲ್ಲಿ ದರೋಡೆ ಆಗಿದೆ. ಇದಕ್ಕೆ ಪೋಲಿಸರು ಹೆಚ್ಚಿನ ರೀತಿಯಲ್ಲಿ ಶ್ರಮ ಮಾಡಿ ಕಲಬುರಗಿಯಲ್ಲಿ ಆರೋಪಿಗಳಿಗೆ ಪೊಲೀಸರು ಬಂಧಿಸಿದ್ದಾರೆ.

ಬೀದರ ನಲ್ಲಿ ದೊಡ್ಡ ದರೋಡೆ ಆಗಿದ್ದೆ ಎಂಬುದು ನನ್ನ ಗಮನಕ್ಕೆ ಬಂದಿದೆ. ಇದು ಅತ್ಯಂತ ಗಂಬೀರ ಪ್ರಕರಣವಾಗಿದೆ. ಪೋಲಿಸ್ ಇಲಾಖೆ ಈ ದರೋಡೆಕೋರರು ಯಾರೆ ಇರಲಿ ಎಲ್ಲೆ ಇರಲಿ ಅವರನ್ನು ಬಂಧಿಸಿ ದರೋಡೆಕೋರರ ಬಂಧಿಸಬೇಕು. ದರೋಡೆಕೋರರಿಗೆ ಅತ್ಯಂತ ಕಠಿಣ ಶಿಕ್ಷೆ ನೀಡಬೇಕು. ಪೊಲೀಸ್ ಇಲಾಖೆ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಕೆಲಸ ಮಾಡಬೇಕು ಎಂದರು.

## ಹಿಂದೂಗಳ ನರಮೇಧದ ವಿರುದ್ಧ ಪ್ರತಿಕಾರ, ಐದು ಉಗ್ರರ ಮನೆ ನೆಲಸಮ



ಮಲ್ಲಮ್ಮ ನುಡಿ ವಾರ್ತೆ ಶ್ರೀನಗರ,ಏ.26: ಪ್ರವಾಸಿಗರ ಮಾರಣಹೋಮ ನಡೆಸಿ ಅಟ್ಟಹಾಸ ಮೆರೆದಿದ್ದ ಉಗ್ರಗಾಮಿಗಳ ವಿರುದ್ಧ ಸಮರವನ್ನೆ ಸಾರಿರುವ ಕೇಂದ್ರ ಸರ್ಕಾರ, ಮತ್ತೆ ಜಮ್ಮು ಮತ್ತು ಕಾಶ್ಮೀರದಾದ್ಯಂತ ಲಷ್ಕರ್-ಎ-ತೊಯ್ಬಾ (ಎಲ್ಇಟಿ) ಕಮಾಂಡರ್ ಸೇರಿದಂತೆ ಐದು ಭಯೋತ್ಪಾದಕರಿಗೆ ಸೇರಿದ ಮನೆಗಳನ್ನು ನೆಲಸಮ ಮಾಡಿದೆ.

ಶುಕ್ರವಾರವಷ್ಟೆ ಇಬ್ಬರು ಉಗ್ರರ ಮನೆಗಳನ್ನು ಧ್ವಂಸ ಮಾಡಿದ ಬೆನ್ನಲ್ಲೆ ಜಮ್ಮು ಮತ್ತು ಕಾಶ್ಮೀರ ಸರ್ಕಾರ ಹಾಗೂ ಸೇನಾಪಡೆಗಳು ಶನಿವಾರ ಹಲವಾರು ಭಯೋತ್ಪಾದಕರ

(2ನೇ ಪುಟ ನೋಡಿ)

## ದುರ್ಗಾನಗರದಲ್ಲಿ ಸಿಲಿಂಡರ್ ಸ್ಫೋಟ ಮನೆ ಬೆಂಕಿಗಾಹುತಿ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಏ.26:ಅವರು ಕೂಲಿ ಕೆಲಸ ಮಾಡಿ ನೆಮ್ಮದಿ ಬದುಕು ಸಾಗಿಸುತ್ತಿದ್ದರು.ಹೊಸ ಮನೆಯ ಗೃಹ ಪ್ರವೇಶ ಮಾಡಲು ಮುಂದಾಗಿದ್ರು.

(2ನೇ ಪುಟ ನೋಡಿ)

## ರಾಜ್ಯದಲ್ಲಿರುವ ಪಾಕ್ ಪ್ರಜೆಗಳ ಗುರುತಿಸುವ ಹೊಣೆ ಎಸ್.ಪಿ ಗಳಿಗೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.26:ರಾಜ್ಯದಲ್ಲಿರುವ ಪಾಕಿಸ್ತಾನದ ಪ್ರಜೆಗಳನ್ನು ಪತ್ತೆ ಹಚ್ಚಲು ಸಂಬಂಧಪಟ್ಟ ರಾಜ್ಯದ ಎಲ್ಲಾ ಎಸ್ ಪಿಗಳಿಗೆ ಜವಾಬ್ದಾರಿ ನೀಡಲಾಗಿದೆ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ಹೇಳಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

# ದರೋಡೆಕೋರರ ಬಂಧನ

ಎಂದರು.ನಂತರ ನಗರದ ಪೊಲೀಸ ಕಮೀಷನರ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಾ.ಶರಣಪ್ಪ ಅವರು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹರಿಯಾಣ್ ಮೂಲದ ಮೆವಾತ್ ಗ್ಯಾಂಗ್‌ನ ತಸ್ಲೀಮ್ ಅಲಿಯಾಸ್ ತಸಿ ತಂದೆ ಉದಬವ ಖಾನ್ (28), ಶರೀಫ್ ತಂದೆ ನೂರ್ ಅಹ್ಮದ್ (20), ಹೈದ್ರಾಬಾದನ ಅಮೀರ್ ತಂದೆ ಮಹ್ಮದ್ ಫರೀದ್ (25) ಮತ್ತು ಹರಿಯಾಣದ ಶಾಹೀದ್ ತಂದೆ ಹರೀದ್ (27) ಎಂಬುವವರನ್ನು ಬಂಧಿಸಿ ಐ–20 ಬಿಳಿ ಬಣ್ಣದ ಕಾರು, ಗ್ಯಾಸ್ ಸಿಲಿಂಡರ್ ಕಟರ್ ಹಾಗೂ ಕೃತ್ಯಕ್ಕೆ ಬಳಸಿದ ಇತರೆ ವಸ್ತುಗಳನ್ನು ಜಪ್ತಿ ಮಾಡಲಾಗಿದೆ ಎಂದು ತಿಳಿಸಿದರು.

ಎಸ್‌ಬಿಐ ಎಟಿಎಂ ಮಷೀನ್‌ನನ್ನು ಗ್ಯಾಸ್ ಕಟರ್‌ನಿಂದ ಕತ್ತರಿಸಿ ಹಣ ಕಳ್ಳತನ ಮಾಡಿದ ಪ್ರಕರಣದ ಕುರಿತು ತನಿಖೆ ನಡೆಸಲು ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್, ಸಬ್–ಅರ್ಬನ್ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಡಿ.ಜಿ.ರಾಜಣ್ಣ, ಸಿಇಎನ್ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಮಡೋಳಪ್ಪ ಅವರ ಮಾರ್ಗದರ್ಶನದಲ್ಲಿ ಸಬ್–ಅರ್ಬನ್ ಠಾಣೆ ಪಿಐ ಸಂತೋಷ ಎಲ್.ತಟ್ಟೆಪಳ್ಳಿ, ವಿಶ್ವವಿದ್ಯಾಲಯ ಪೊಲೀಸ್ ಠಾಣೆ ಪಿಐ ಸುಶೀಲಕುಮಾರ ಅವರ ನೇತೃತ್ವದಲ್ಲಿ ಪಿಎಸ್‌ಐ ಬಸವರಾಜ, ಸಿಬ್ಬಂದಿಗಳಾದ ಮಂಜುನಾಥ, ಫಿರೋಜ್, ಶಶಿಕಾಂತ, ವಿಠ್ಠಲ, ಭೀಮಾ ನಾಯಕ, ರಾಜಕುಮಾರ, ರಾಜು ಟಾಕಳಿ, ಗುರುರಾಜ, ಅನೀಲ ರಾಠೋಡ್, ನಾಗೇಂದ್ರ, ಚನ್ನವೀರೇಶ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು ಎಂದರು.

ಪೊಲೀಸ ಅಧಿಕಾರಿಗಳ ಸಾಹಸಿಕ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಲ್ಲದೇ ತನಿಖಾ ತಂಡಕ್ಕೆ ನಗದು ಬಹುಮಾನ ನೀಡಿ ಗೌರವಿಸಿದರು.

# ವಾಪಸ್ಸು ಕಳಿಸಲು ಕ್ರಮ :ಸಿದ್ದರಾಮಯ್ಯ

ಕ್ರಮಗಳನ್ನು ಕೇಂದ್ರ ಕೈಗೊಂಡರೂ, ಪ್ರಾಣ ಕಳೆದುಕೊಂಡ 26 ಜನ ಮತ್ತೆ ಬದುಕಿ ಬರಲು ಸಾಧ್ಯವೇ ? ಕಾಶ್ಮೀರದಲ್ಲಿ ಸಿಲುಕಿದ್ದ ಕನ್ನಡಿಗರ ರಕ್ಷಣೆಗೆ ಸಚಿವ ಸಂತೋಷ್ ಲಾಡ್ ಅವರನ್ನು ನಿಯೋಜಿಸಿದ್ದು, ಅವರು ಎಲ್ಲ ಕನ್ನಡಿಗರನ್ನು ಸುರಕ್ಷಿತವಾಗಿ ರಾಜ್ಯಕ್ಕೆ ಕರೆತಂದಿದ್ದಾರೆ ಎಂದರು.

ನಾವು ಯುದ್ಧದ ಪರ ಇಲ್ಲ :

ಉಗ್ರರ ದಾಳಿಗೆ ಸಂಬಂಧಿಸಿದಂತೆ, ಪಾಕಿಸ್ತಾನದ ಮೇಲೆ ಯುದ್ಧ ಸಾರುವ ಅನಿವಾರ್ಯತೆ ಇದೆಯೇ ಎಂಬ ಬಗ್ಗೆ ಪ್ರತಿಕ್ರಿಯೆ ನೀಡಿ, ಪಾಕಿಸ್ತಾನದ ಮೇಲೆ ಯುದ್ಧ ಸಾರುವ ಅಗತ್ಯವಿಲ್ಲ. ಕಾಶ್ಮೀರದ ಪ್ರದೇಶದಲ್ಲಿ ಭದ್ರತಾ ಕ್ರಮಗಳನ್ನು ಬಿಗಿಗೊಳಿಸಲು ಕ್ರಮ ಕೈಗೊಳ್ಳಬೇಕು. ನಾವು ಯುದ್ಧದ ಪರ ಇಲ್ಲ. ಕಾಶ್ಮೀರದಲ್ಲಿ ಶಾಂತಿ ನೆಲೆಸಲು ಕೇಂದ್ರಸರ್ಕಾರ ಭದ್ರತೆಯನ್ನು ಹೆಚ್ಚಿಸಬೇಕು ಎಂದರು.

ಕಾಶ್ಮೀರದ ಉಗ್ರರ ದಾಳಿಗೆ ಸಂಭಂಧಿಸಿದಂತೆ ಕರೆಯಲಾಗಿದ್ದ ಸರ್ವಪಕ್ಷ ಸಭೆಯಲ್ಲಿ ಪ್ರಧಾನಿಯವರು ಭಾಗವಹಿಸದಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಇದು ಮಹತ್ವಯುತ ಸಭೆಯಾಗಿದ್ದು, ಪ್ರಧಾನಿಯವರು ಈ ಸಭೆಯಲ್ಲಿ ಹಾಜರಿರಬೇಕಿತ್ತು. ಆದರೆ ಅವರಿಗೆ ಈ ಸಭೆಗಿಂತ ಬಿಹಾರದ ಚುನಾವಣಾ ಪ್ರಚಾರವೇ ಮುಖ್ಯವೆಂದು ಕಾಣುತ್ತದೆ ಎಂದು ತಿಳಿಸಿದರು.

ಚಾಮರಾಜನಗರಕ್ಕೆ 20 ಬಾರಿ ಮುಖ್ಯಮಂತ್ರಿಯಾಗಿ ಭೇಟಿ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಚಾಮರಾಜನಗರಕ್ಕೆ ಮೊದಲ ಬಾರಿ ಭೇಟಿ ನೀಡಿದಾಗಲೇ, ಅಲ್ಲಿಗೆ ಭೇಟಿ ನೀಡಿದರೆ ಅಧಿಕಾರ ಹೋಗುತ್ತದೆಂಬ ಕಳಂಕ ತೊಡೆದುಹೋಯಿತು ಎಂದು ಹೇಳಿದರು.

# ಪ್ರಧಾನಿ ವರ್ತನೆಗೆ ಖರ್ಗೆ ಕಿಡಿ

ನಡೆ ಸರಿಯಲ್ಲ. ಇಂತಹ ಘಟನೆ ನಡೆದಿದೆ. ಸುಮಾರು 26 ಜನರು ಮೃತಪಟ್ಟಿದ್ದಾರೆ. ಅನೇಕ ಜನರು ಗಾಯಾಳುಗಳಾಗಿದ್ದಾರೆ. ಪ್ರಧಾನ ಮಂತ್ರಿಗಳ ಈ ಆಟಿಟ್ಯೂಡ್ ಸರಿ ಇಲ್ಲ ಎಂದು ಅಸಮಾಧಾನ ಹೊರಹಾಕಿದರು.

ಚುನಾವಣಾ ಭಾಷಣ ಮಾಡಲು ಬಿಹಾರಕ್ಕೆ ಹೋಗಿದ್ದೀರಿ. ದೆಹಲಿಯಲ್ಲಿ ಬರಲು ಆಗುವುದಿಲ್ಲ. ಅವರು ಸೀರಿಯಸ್ ಇಲ್ಲ ಅಂತ ಅರ್ಥ. ಅವರು ಇಂಗ್ಲಿಷ್ ಹಾಗೂ ಹಿಂದಿಯಲ್ಲಿ ಬೇರೆ ಕಡೆ ಭಾಷಣ ಮಾಡುವ ಬದಲು ಇಲ್ಲಿ ಬಂದು ಸಮಜಾಯಿಷಿ ಹೇಳಬೇಕಿತ್ತು. ಏನೇನು ಘಟನೆ ನಡೆಯಿತು, ಯಾಕೆ ನಡೆಯಿತು, ಯಾರು ಹೊಣೆ ಹೊತ್ತಿದ್ದಾರೆ? ಸೆಕ್ಯೂರಿಟಿ ಲ್ಯಾಪ್ಸ್ ಆಗಿದೆಯಾ? ಇಂಟೆಲಿಜೆನ್ಸ್ ಲ್ಯಾಪ್ಸ್ ಆಗಿದೆಯಾ? ಐಬಿ ಲ್ಯಾಪ್ಸ್ ಆಗಿದೆಯಾ? ಇನ್ಫಾರ್ಮರ್ಸ್ ಲ್ಯಾಪ್ಸ್ ಆಗಿದೆಯಾ, ಪೊಲೀಸರ ಲ್ಯಾಪ್ಸ್ ಆಗಿದೆಯಾ? ಯಾರದ್ದು ಅನ್ನೋದು ನಮಗೆ ತಿಳಿಸಬೇಕು. ಆದರೆ, ಅವರು ಬರಲೇ ಇಲ್ಲ. ಅದಕ್ಕೆ ರಾಜನಾಥ ಸಿಂಗ್ ನೇತೃತ್ವದಲ್ಲಿ ಸಭೆ ನಡೆಯಿತು ಎಂದು ಬೇಸರಿಸಿದರು.

ಪಹಲ್ಗಾಮ್‌ನಲ್ಲಿ ಏನಾಯ್ತು? ಜಾತಿ ಕೇಳಿ, ಧರ್ಮ ಕೇಳಿ ಬಲಿ ಹಾಕಿದರು. ಆ ರೀತಿ ನಡೆಯಬಾರದು. ಈ ರಾಜ್ಯದಲ್ಲೂ ಕೂಡ ಕೆಲವರು ಜಾತಿಯನ್ನು ಆಧರಿಸಿ, ಧರ್ಮವನ್ನೇ ಆಧರಿಸಿ ಮಾತನಾಡುತ್ತಾರೆ. ಅದು ಯಾವುದೇ ಕಾರಣಕ್ಕೂ ನಡೆಯಬಾರದು. ಶಿಕ್ಷಣ ಸಂಸ್ಥೆಯಲ್ಲಿ ನಾನು ಜಾತಿ ಧರ್ಮದ ಬಗ್ಗೆ ಮಾತನಾಡುವುದಿಲ್ಲ. ನೀವು ವಿದ್ಯಾರ್ಥಿಗಳು ಕೂಡ ಜಾತಿ–ಧರ್ಮದ ಬಗ್ಗೆ ಮಾತನಾಡಬಾರದು ಎಂದರು.

ಸ್ವತಃ ಕೇಂದ್ರ ಸರ್ಕಾರವೇ ಒಪ್ಪಿಕೊಂಡಿದೆ. ಇದು ಸೆಕ್ಯೂರಿಟಿ ಲ್ಯಾಪ್ಸ್ ಅಂತ. ಆ ಕಾರಣಕ್ಕಾಗಿ ಸಭೆ ಕರೆದಿದ್ದೇವೆ ಅಂತ ಅಮಿತ್ ಶಾ ಹೇಳಿದ್ದಾರೆ. ಇದನ್ನು ಸವಾಲಾಗಿ ಸ್ವೀಕರಿಸಿ ಎಂದು ಕೇಂದ್ರ ಗೃಹ ಸಚಿವರಿಗೆ ಹೇಳಿದ್ದೇವೆ. ಎಲ್ಲವನ್ನೂ ವ್ಯವಸ್ಥೆ ಮಾಡಬೇಕಿತ್ತು. ನೀವು ವ್ಯವಸ್ಥೆ ಮಾಡದೆ ಇರುವುದರಿಂದಲೇ ಈ ಸ್ಥಿತಿಗೆ ಬಂದಿರೋದು. ಇನ್ಮುಂದೆ ಈ ರೀತಿ ಆಗೋದಿಲ್ಲ ಅಂತ ಅಮಿತ್ ಶಾ ತಿಳಿಸಿದ್ದಾರೆ. ಮೂರು ಹಂತಗಳ ಸೆಕ್ಯೂರಿಟಿ ಇದ್ದರೂ ಕೂಡ ಇಷ್ಟು ಜನರಿಗೆ ರಕ್ಷಣೆ ಕೊಡಲು ಆಗಲಿಲ್ಲ. ಏನೇ ಆದರೂ ಕೂಡ ದೇಶದ ದೃಷ್ಟಿಯಿಂದ ದೇಶದ ಒಗ್ಗಟ್ಟಿನ ದೃಷ್ಟಿಯಿಂದ ನಾವೆಲ್ಲರೂ ಕೂಡ ಒಂದಾಗಿ ರಕ್ಷಣೆ ಮಾಡೋಣ ಅಂತ ತಿಳಿಸಿದ್ದೇವೆ. ಸರ್ಕಾರದ ನಿರ್ಣಯಕ್ಕೆ ನಾವು ಕೂಡ ಬೆಂಬಲ ಸೂಚಿಸುತ್ತೇವೆ ಅಂತ ತಿಳಿಸಿದ್ದೇವೆ ಎಂದರು.

# ಸ್ಫೋಟ ಮನೆ ಬೆಂಕಿಗಾಹುತಿ

ಆದರೆ,ಹಳೆಯ ಮನೆಯು ಈಗ ಸಿಲಿಂಡರ್ ಸ್ಫೋಟಗೊಂಡ ಪರಿಣಾಮ ಸಂಪೂರ್ಣ ಸುಟ್ಟು ಕರಕಲಾಗಿದೆ.

ಯಾದಗಿರಿಯ ದುರ್ಗಾನಗರದ ಶನಿವಾರ ಘಟನೆ ಜರುಗಿದೆ. ಮಲ್ಲಯ್ಯ ಹಾಗೂ ಅಕ್ಕಮ್ಮ ದಂಪತಿಗಳು ವಾಸ ಮಾಡುತ್ತಿದ್ದ ಶೇಡ್ ಮನೆಯು ಬೆಂಕಿಗಾಹುತಿಯಾಗಿದೆ.ಮನೆಯಲ್ಲಿಟ್ಟಿರುವ 7 ಲಕ್ಷ ರೂಪಾಯಿ ಹಣ,100 ಗ್ರಾಂ ಚಿನ್ನ,150 ಗ್ರಾಂ ಬೆಳ್ಳಿಯು ಸುಟ್ಟು ಕರಕಲಾಗಿದೆ. ಮನೆಯಲ್ಲಿಟ್ಟಿರುವ ಆಹಾರ ಧಾನ್ಯ ಸೇರಿ ಬೆಲೆ ಬಾಳುವ ವಸ್ತುಗಳು ಹಾನಿಯಾಗಿವೆ.ಮಲ್ಲಯ್ಯ ಹಾಗೂ ಅಕ್ಕಮ್ಮ ದಂಪತಿಗಳು ಈಗ ಕಣ್ಣೀರಲ್ಲಿ ತೊಳೆಯುತ್ತಿದ್ದಾರೆ.

ಮನೆಯಿಂದ ದಂಪತಿಗಳು ಹೊರಗಡೆ ತೆರಳಿದಾಗ ಈ ಘಟನೆ ಜರುಗಿದೆ.

ಸ್ಥಳಕ್ಕೆ ಕಂದಾಯ ಅಧಿಕಾರಿ ಗಿರೀಶ್ ಅವರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಮನೆ ಸುಟ್ಟ ಹಿನ್ನೆಲೆ ದಂಪತಿಗಳು ಕಣ್ಣೀರು ಹಾಕುವಂತಾಗಿದೆ.ಹೆಚ್ಚಿನ ಪರಿಹಾರ ನೀಡುವಂತೆ ಒತ್ತಾಯ ಮಾಡಿದ್ದಾರೆ.

ಈ ವೇಳೆ ಕಂದಾಯ ಅಧಿಕಾರಿ ಗಿರೀಶ್ ,ನಿಂಗಣ್ಣ ಜಾಲಗಾರ,ಬಸವರಾಜ ಸೇರಿದಂತೆ ಅನೇಕರು ಇದ್ದರು.

# ಗುರುತಿಸುವ ಹೊಣೆ ಎಸ್.ಪಿ ಗಳಿಗೆ

ಸರ್ಕಾರದಿಂದ ಪಾಕ್ ಪ್ರಜೆಗಳನ್ನು ಗುರುತಿಸಿ ಅವರನ್ನು ಪಾಕಿಸ್ತಾನಕ್ಕೆ ರವಾನಿಸಬೇಕೆಂದು ನಿನ್ನೆಯಷ್ಟೇ ಸೂಚನೆ ಬಂದಿದೆ. ಅದರ ಪ್ರಕಾರ ಪಾಕ್ ಪ್ರಜೆಗಳನ್ನು ಪತ್ತೆ ಹಚ್ಚಲಾಗುವುದು. ದೀರ್ಘ ಕಾಲದ ವೀಸಾ ಹೊಂದಿರುವ ಪಾಕ್ ಪ್ರಜೆಗಳಿಗೆ ಕೇಂದ್ರ ಸರ್ಕಾರವೇ ವಿನಾಯಿತಿ ನೀಡಿದೆ ಎಂದು ಪ್ರಶ್ನೆಯೊಂದಕ್ಕೆ ಪರಮೇಶ್ವರ್ ಉತ್ತರಿಸಿದ್ದಾರೆ.

# ದೀಪಕ ಪಾಟೀಲ ಆರೋಪ ನಿರಾಧಾರ, ಅರ್ಥಹೀನ

ಬೀದರ. ಏ. 26 : ಔರಾದ್ 'ಶಾಸಕ ಪ್ರಭು ಚವಾಣ್ ಕುರಿತು ಚಾಂದೋರಿ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ದೀಪಕ ಪಾಟೀಲ ಮಾಡಿದ ಆರೋಪ ನಿರಾಧಾರ ಹಾಗೂ ಅರ್ಥಹೀನ' ಎಂದು ತಾಲ್ಲೂಕಿನ ಮರಾಠಾ ಮುಖಂಡರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಮುಖಂಡ ಶಿವಾಜಿರಾವ ಪಾಟೀಲ ಮುಂಗನಾಳ, ಪಟ್ಟಣ ಪಂಚಾಯತ್ ಮಾಜಿ ಅಧ್ಯ–ಕ್ಷೆ ಅಂಬಿಕಾ ಕೇರಬಾ ಪವಾರ್, ಚಂದೋರಿ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಪ್ರವೀಣ ಕಾರಬಾರಿ ಸೇರಿದಂತೆ 14 ಜನರು ಜಂಟಿ ಪತ್ರಿಕಾ ಪ್ರಕಟಣೆ ನೀಡಿ ದೀಪಕ ಪಾಟೀಲ ಹೇಳಿಕೆಗೆ ತಿರುಗೇಟು ನೀಡಿದ್ದಾರೆ. 'ಶಾಸಕ ಪ್ರಭು ಚವಾಣ್ ಅವರ ಬಗ್ಗೆ ಕ್ಷೇತ್ರದ ಜನರಿಗೆ ಚೆನ್ನಾಗಿ ಗೊತ್ತಿದೆ. ಅಭಿವೃದ್ಧಿ ವಿಷಯದಲ್ಲಿ ಅವರ ನಿಲುವು ಗಟ್ಟಿಯಾಗಿದೆ. ಅಕ್ರಮ ಹಾಗೂ ನಿಯಮಬಾಹಿರ ಕಾಮಗಾರಿಗಳಿಗೆ ಅವರು ಎಂದೂ ಅವಕಾಶ ಕೊಟ್ಟಿಲ್ಲ. ಈ ವಿಷಯದಲ್ಲಿ ಯಾರೂ ಬೇಕಾದರೂ ಪ್ರಶ್ನೆ ಮಾಡಬಹುದು, ತಡೆಯಬಹುದು ಎಂದು ಬಹಿರಂಗವಾಗಿಯೇ ಹೇಳಿದ್ದಾರೆ' ಎಂದು ಅವರು ತಿಳಿಸಿದ್ದಾರೆ. 'ದೀಪಕ ಪಾಟೀಲ ಅವರು ಪದೇ ಪದೇ ಶಾಸಕ ಚವಾಣ್ ವಿರುದ್ಧ ಆರೋಪ ಮಾಡಿ ತಾವೊಬ್ಬ ಪ್ರಾಮಾಣಿಕ ವ್ಯಕ್ತಿ ಎಂದು ಪ್ರಚಾರ ಗಿಟ್ಟಿಸಿಕೊಳ್ಳುತ್ತಿದ್ದಾರೆ. ಆದರೆ ಅವರು ಏನು, ಮೊದಲು ಎಲ್ಲಿದ್ದರು, ಈಗ ಏನಾಗಿದ್ದಾರೆ ಎಂಬುದು ಜಿಲ್ಲೆಯ ಜನರಿಗೆ ಚೆನ್ನಾಗಿ ಗೊತ್ತಿದೆ. ಹೀಗಾಗಿ ಅವರು ಮೊತ್ತೊಬ್ಬರ ಮುಖಕ್ಕೆ ಮಸಿ ಬಳಿದು ಚಾರಿತ್ರ್ಯ ಹಾಳು ಮಾಡುವ ಮೊದಲು ತನ್ನ ಚಾರಿತ್ರ್ಯ ಏನಿದೆ ಎಂದು ತಿಳಿದುಕೊಂಡು ಆರೋಪ ಮಾಡಬೇಕು' ಎಂದು ಪ್ರತಿಕ್ರಿಯೆ ನೀಡಿದ್ದಾರೆ.

# ಪದಾಧಿಕಾರಿಗಳ ಆಯ್ಕೆ

ಕಲಬುರಗಿ: ಏ.26:ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಅಧ್ಯಕ್ಷ ಶರಣಕುಮಾರ ಮೋದಿ,ಪ್ರಧಾನ ಕಾರ್ಯದರ್ಶಿ ಸೋಮಶೇಖರ ಹಿರೇಮಠ ಮತ್ತು ಜಿಲ್ಲಾ ಯುವ ಅಧ್ಯಕ್ಷರಾದ ಉದಯ ಪಾಟೀಲ ಆದೇಶದ ಮೇರೆಗೆ ಕಲಬುರಗಿ ನಗರ ಯುವ ಘಟಕಗಳ ಪದಾಧಿಕಾರಿಗಳನ್ನು 2024–29ರ ನೇಮಕ ಮಾಡಲಾಗಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ನಗರ ಯುವ ಘಟಕ ಅಧ್ಯಕ್ಷ ಶಾಂತರೆಡ್ಡಿ ಪೇಠಶಿರೂರ ತಿಳಿಸಿದ್ದಾರೆ.

(ದತ್ತು ಪಾಟೀಲ ಗೌಡಗೌಂವ ಮಂಜುನಾಥ ಕಾಳೆ,ಸಂತೋಷ ನಂದ್ಯಳ, ಸಿದ್ದು ತುಪ್ಪದ, ಮಂಜುನಾಥ ಜೆ.ಹುಲಿ, ಪ್ರಶಾಂತ ರೆಡ್ಡಿ, ಸಚಿನ್ ನಂದ್ಯಳ, ಶರಣಪ್ಪ ಅವಂಟಿಗಿ ಉಪಾಧ್ಯಕ್ಷರು), (ಲಿಂಗರಾಜ ಈಶ್ವರಪ್ಪ ಭಾವಿಕಟ್ಟಿ ಪ್ರಧಾನ ಕಾರ್ಯದರ್ಶಿ), (ಪ್ರಭವ ಕೆ. ಪಟ್ಟಣಕರ್ ಕಾರ್ಯದರ್ಶಿ), (ಮಹಾಂತೇಶ್ ರೋಜೆ ಸಂಘಟನಾ ಕಾರ್ಯದರ್ಶಿ), (ಮಹಾದೇವ ಶಹಾಬಾದಿ ಸಹ ಕಾರ್ಯದರ್ಶಿ), (ಮಂಜುನಾಥ ಅಣಕಲ್ ಖಜಾಂಚಿ) ಆಯ್ಕೆಯಾಗಿದ್ದಾರೆ. ಈ ಸಂದರ್ಭದಲ್ಲಿ ಸಮಾಜದ ಮುಖಮಡರು ಇದ್ದರು.

# ಪ್ರತಿಕಾರ, ಐದು ಉಗ್ರರ ಮನೆ ನೆಲಸಮ

ಮನೆಗಳನ್ನು ನೆಲಸಮಗೊಳಿಸಿದೆ.ಒಂದು ಮೂಲದ ಪ್ರಕಾರ ಪಾಕಿಸ್ತಾನಕ್ಕೆ ಕಾನೂನುಬದ್ಧವಾಗಿ ಪ್ರಯಾಣಿಸಿದ್ದ ಇವರು, ಕಳೆದ ವರ್ಷ ಜಮು ಮತ್ತು ಕಾಶ್ಮೀರಕ್ಕೆ ನುಸುಳುವ ಮೊದಲು ದೇಶದೊಳಗೆ ಭಯೋತ್ಪಾದನಾ ಚಟುವಟಿಕೆ ಸೇರಿದಂತೆ ವಿಧ್ವಂಸಕ ಕೃತ್ಯ ನಡೆಸಲು ತರಬೇತಿ ಪಡೆದಿದ್ದರು. ಮಾರಣಾಂತಿಕ ಪಹಲ್ಗಾಮ್ ದಾಳಿಯ ಯೋಜನೆ ಮತ್ತು ಕಾರ್ಯಗತಗೊಳಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದರು ಎನ್ನಲಾಗಿದೆ.

ಶೋಪಿಯಾನ್, ಕುಲ್ಗಾಮ್ ಮತ್ತು ಪುಲ್ವಾಮಾ ಜಿಲ್ಲೆಗಳಲ್ಲಿ ಭದ್ರತಾ ಪಡೆಗಳು ಎಲ್‌ಇಟಿ ಕಾರ್ಯಕರ್ತರು ಮತ್ತು ಪಹಲ್ಗಾಮ್ ದಾಳಿಗೆ ಸಂಬಂಧಿಸಿದ ಶಂಕಿತರ ಮೇಲೆ ಕಠಿಣ ಕ್ರಮ ತೆಗೆದುಕೊಂಡಿವೆ. ಶೋಪಿಯಾನ್‌ನ ಚೋಟಿಪೋರಾ ಗ್ರಾಮದಲ್ಲಿ, ಎಲ್‌ಇಟಿ ಕಮಾಂಡರ್ ಶಾಹಿದ್ ಅಹದ್ ಕುಟ್ಟೆ ಅವರ ಮನೆಯನ್ನು ನೆಲಸಮ ಮಾಡಲಾಗಿದೆ. ಕುಟ್ಟೆ ಕಳೆದ ಮೂರರಿಂದ ನಾಲ್ಕು ವರ್ಷಗಳಿಂದ ಭಯೋತ್ಪಾದನಾ ಸಂಬಂಧಿತ ಚಟುವಟಿಕೆಗಳಲ್ಲಿ ಸಕ್ರಿಯನಾಗಿದ್ದಾನೆ ಮತ್ತು ರಾಷ್ಟ್ರವಿರೋಧಿ ಕಾರ್ಯಾಚರಣೆಗಳನ್ನು ಸಂಘಟಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪುಲ್ವಾಮಾದ ಮುರ್ರಾನ್ ಪ್ರದೇಶದಲ್ಲಿ ಭಯೋತ್ಪಾದಕ ಅಹ್ಸಾನ್ ಉಲ್ ಹಕ್ ಮನೆಯನ್ನು ಸ್ಫೋಟಗೊಳಿಸಿ ನೆಲಸಮ ಮಾಡಲಾಗಿದೆ.2018 ರಲ್ಲಿ ಪಾಕಿಸ್ತಾನದಲ್ಲಿ ಭಯೋತ್ಪಾದನಾ ತರಬೇತಿ ಪಡೆದಿದ್ದ ಅಹ್ಸಾನ್ ಇತ್ತೀಚೆಗೆ ಕಣಿವೆಗೆ ಮತ್ತೆ ಬಂದು ಸಕ್ರಿಯನಾಗಿದ್ದ. ಜೂನ್ 2023 ರಿಂದ ಸಕ್ರಿಯವಾಗಿರುವ ಎಲ್‌ಇಟಿ ಭಯೋತ್ಪಾದಕ ಎಹ್ಸಾನ್ ಅಹದ್ ಶೇಖ್‌ನ ಮತ್ತೊಂದು ಎರಡು ಅಂತಸ್ತಿನ ಮನೆಯನ್ನು ಕೆಡವಲಾಯಿತು. ಪುಲ್ವಾಮಾದ ಕಚಿಪೋರಾ ಪ್ರದೇಶದಲ್ಲಿ ನಡೆದ ಸ್ಫೋ?ಟದಲ್ಲಿ 2023 ರಿಂದ ಸಕ್ರಿಯವಾಗಿರುವ ಐದನೇ ಭಯೋತ್ಪಾದಕ ಹರಿಸ್ ಅಹದ್‌ನ ನಿವಾಸವನ್ನು ಧ್ವಂಸಗೊಳಿಸಲಾಯಿತು.

ಈತ ಪಹಲ್ಗಾಮ್ ದಾಳಿಯಲ್ಲೂ ಶಂಕಿತನಾಗಿದ್ದಾನೆ ಎಂದು ಹೇಳಲಾಗುತ್ತಿದೆ. ಎಲ್ಲಾ ಭಯೋತ್ಪಾದಕರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಇಲ್ಲಿಯವರೆಗೆ ಭದ್ರತಾ ಪಡೆ ಐವರು ಉಗ್ರರ ಮನೆಗಳನ್ನು ಧ್ವಂಸ ಮಾಡಿದ್ದು, ಈ ಪ್ರದೇಶದಲ್ಲಿ ಉಗ್ರರ ಶೋಧ ಕಾರ್ಯ ಮುಂದುವರೆದಿದೆ.

ಇದಕ್ಕೆ ಮುಂಚೆ ಅಂದರೆ ದಕ್ಷಿಣ ಕಾಶಿ?ರದ ಟ್ರಾಲ್‌ನ ಮೊಂಘಮಾ ಗ್ರಾಮದಲ್ಲಿ ಭದ್ರತಾ ಪಡೆಗಳು ನಡೆಸಿದ ಶೋಧ ಕಾರ್ಯಾಚರಣೆಯಲ್ಲಿ ಆಸಿಫ್ ಶೇಖ್ ಮನೆಯನ್ನು ಸ್ಫೋಟಿಸಿ, ಧ್ವಂಸಗೊಳಿಸಲಾಗಿತ್ತು. ಆಸಿಫ್ ಶೇಖ್ ಉಗ್ರ ಸಂಘಟನೆಯಲ್ಲಿ ತೊಡಗಿಸಿಕೊಂಡಿದ್ದು, ಪಹಲ್ಗಾಮ್ ದಾಳಿಯಲ್ಲಿ ಈತನ ಹೆಸರೂ ಕೇಳಿಬರುತ್ತಿದೆ. ಈ ಮಧ್ಯೆ, ಅನಂತ್‌ನಾಗ್ ಜಿಲ್ಲೆಯ ಬಿಜ್‌ಬೆಹರಾದಲ್ಲಿ ಆದಿಲ್ ಥೋಕರ್ ಎಂಬ ಉಗ್ರನ ಮನೆಯನ್ನು ಧ್ವಂಸ ಮಾಡಲಾಗಿದೆ.

ಗುರುವಾರ ರಾತ್ರಿ, ಪಹಲ್ಗಾಮ್ ದಾಳಿಯ ಹಿಂದಿನ ಇಬ್ಬರು ಎಲ್‌ಇಟಿ ಭಯೋತ್ಪಾದಕರಾದ ಆದಿಲ್ ಹುಸೇನ್ ಥೋಕರ್ ಮತ್ತು ಆಸಿಫ್ ಶೇಖ್ ಮನೆಗಳು ಪ್ರತ್ಯೇಕ ಸ್ಫೋಟಗಳಲ್ಲಿ ಧ್ವಂಸಗೊಂಡಿದ್ದವು. ಕೆಲವು ಸ್ಫೋಟಕಗಳನ್ನು ಉಗ್ರರ ಮನೆಗಳಲ್ಲಿ ಇರಿಸಿ ಅದನ್ನು ಸ್ಫೋಟಿಸಲಾಗಿತ್ತು.

ಈಗಾಗಲೇ ಪಹಲ್ಗಾಮ್ ದಾಳಿಯಲ್ಲಿ ಭಾಗಿಯಾಗಿರುವ ಶಂಕಿತ ಥೋಕರ್ ಮತ್ತು ಇತರ ಇಬ್ಬರು ಭಯೋತ್ಪಾದಕರ ರೇಖಾಚಿತ್ರಗಳನ್ನು ಅನಂತನಾಗ್ ಪೊಲೀಸರು ಗುರುವಾರ ಬಿಡುಗಡೆ ಮಾಡಿದ್ದರು. ಇತರ ಇಬ್ಬರು ಶಂಕಿತರಾದ ಹಾಶಿಮ್ ಮೂಸಾ ಅಲಿಯಾಸ್ ಸುಲೇಮಾನ್ ಮತ್ತು ಅಲಿ ಭಾಯ್ ಅಲಿಯಾಸ್ ತಲ್ಹಾ ಭಾಯ್ ಪಾಕಿಸ್ತಾನಿ ಪ್ರಜೆಗಳಾಗಿದ್ದು, ಅವರ ಬಂಧನಕ್ಕೆ ತಲಾ 20 ಲಕ್ಷ ರೂ. ಬಹುಮಾನ ನೀಡುವುದಾಗಿ ಅಧಿಕಾರಿಗಳು ಘೋಷಿಸಿದ್ದಾರೆ.

ಮೋದಿ ಸರ್ಕಾರ ಈ ಘಟನೆ ನಂತರ ಸೇನೆಗೆ ಮುಕ್ತವಾಗಿ ಕೆಲಸ ಮಾಡುವಂತೆ ಅವಕಾಶವನ್ನು ನೀಡಿದೆ. ಇದೀಗ ಭಾರತದ ಸೇನೆ ಪಾಕ್ ಉಗ್ರರಿಗೆ ಒಂದರಂತೆ ಹೊಡೆತವನ್ನು ನೀಡುತ್ತಿದೆ. ಬಹುದೊಡ್ಡ ಕಾರ್ಯಾಚರಣೆಯನ್ನು ಸೇನೆ ಮಾಡುತ್ತಿದೆ. ಉಗ್ರರು ನೆಲೆಸಿರುವ ಪ್ರದೇಶಕ್ಕೆ ನುಗ್ಗಿ ಭಾರತೀಯ ಸೇನೆ ಹೊಡೆಯುತ್ತಿದೆ.

ಇತ್ತ ಉಗ್ರರ ಪತ್ತೆಗೆ ತೀವ್ರ ಶೋಧ ಕಾರ್ಯ ನಡೆದಿದೆ. ಇನ್ನು ಪಾಕಿಸ್ತಾನಿ ಉಗ್ರರಿಗೆ ಕುಮಕ್ಕು ನೀಡಿದ ಜಮು ಮತ್ತು ಕಾಶ್ಮೀರ ನಿವಾಸಿಗಳಾದ ಉಗ್ರರ ಮನೆಯನ್ನು ಧ್ವಂಸ ಮಾಡಲಾಗಿದೆ, ಸ್ಥಳೀಯರನ್ನು ವಶಕ್ಕೆ ಪಡೆಯಲಾಗಿದೆ.ಒಟ್ಟಾರೆಯಾಗಿ, ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಸಕ್ರಿಯ ಲಷ್ಕರ್ ಕಾರ್ಯಕರ್ತರ ಐದು ಮನೆಗಳನ್ನು ನೆಲಸಮ ಮಾಡಲಾಗಿದೆ.


ಮಂಗಳವಾರ ಮಧ್ಯಾಹ್ನ, ಪಹಲ್ಗಾಮ್‌ನಿಂದ ಸುಮಾರು 5 ಕಿಮೀ ದೂರದಲ್ಲಿರುವ ಬೈಸರನ್ ಹುಲ್ಲುಗಾವಲಿನಲ್ಲಿ ಐದರಿಂದ ಆರು ಭಯೋತ್ಪಾದಕರು ಪ್ರವಾಸಿಗರ ಗುಂಪಿನ ಮೇಲೆ ಗುಂಡಿನ ದಾಳಿ ನಡೆಸಿ ಮಾರಣ ಹೋಮ ನಡೆಸಿದ್ದರು. ಇದನ್ನು ಮಿನಿ ಸ್ವಿಟ್ಜರ್ಲೆಂಡ್‌ಎಂದೂ ಕರೆಯುತ್ತಾರೆ – ಕಾಲ್ನಡಿಗೆಯ ಮೂಲಕ ಅಥವಾ ಕುದು–ರೆಯ ಮೂಲಕ ಮಾತ್ರ ಪ್ರವೇಶಿಸಬಹುದು. ಪಹಲ್ಗಾಮ್ ಹತ್ಯಾಕಾಂಡವು ಇತ್ತಿ?ಚಿನ ವರ್ಷಗಳಲ್ಲಿ ಕಾಶ್ಮೀರ ಕಣಿವೆಯಲ್ಲಿ ನಡೆದ ಅತ್ಯಂತ ಭೀಕರ ನಾಗರಿಕ ದಾಳಿಗಳಲ್ಲಿ ಒಂದಾಗಿದೆ.ಮ ಲಷ್ಕರ್–ಎ–ತೊಯ್ಬಾದ ಶಾಖೆ–ಯಾದ ರೆಸಿಸ್ಟೆನ್ ಫ್ರಂಟ್ ದಾಳಿಯ ಹೊಣೆಯನ್ನು ಹೊತ್ತುಕೊಂಡಿದೆ. ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರು ಇತ್ತೀಚಿನ ವರ್ಷಗಳಲ್ಲಿ ನಾಗರಿಕರನ್ನು ಗುರಿಯಾಗಿಸಿಕೊಂಡು ನಾವು ನೋಡಿದ್ದಕ್ಕಿಂತ ದೊಡ್ಡದಾದ ದಾಳಿ ಎಂದು ಹೇಳಿದ್ದಾರೆ.

# 175ಕ್ಕೂ ಹೆಚ್ಚು ಮಂದಿ ವಶಕ್ಕೆ

ವಾಪಸ್ ಮರಳಿದ್ದಾರೆ. ಪಾಕಿಸ್ತಾನಕ್ಕೆ ಭೇಟಿ ನೀಡಿದ್ದ 287 ಭಾರತೀಯ ಪ್ರಜೆಗಳು ಸಹ ಹಿಂತಿರುಗಿದ್ದಾರೆ ಎಂದು ಗೃಹ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಕರ್ನಾಟಕದಲ್ಲಿರುವ 98 ಜನ ಪಾಕಿಸ್ತಾನ ಪ್ರಜೆಗಳಿಗೂ ದೇಶ ತೊರೆಯುವಂತೆ ಸೂಚಿಸಲಾಗಿದೆ.

ಈ ಮಧ್ಯೆ, ವಾಘಾ ಗಡಿ ಬಂದ್ ಆದ ಕಾರಣ ಪಾಕ್ ವಧು–ರಾಜಸ್ಥಾನದ ವರ ಮದುವೆ ಅತಂತ್ರಗೊಂಡಿದೆ. ಈ ಮಧ್ಯೆ, ಉಗ್ರರ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆಗಳು ಮುಂದುವರಿದಿವೆ.

# ಧರಣಿ ಸತ್ಯಾಗ್ರಹದಲ್ಲಿ ತೇಲ್ಕೂರ ಭಾಗಿ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಏ.26: ರಾಜಶ್ರೀ ಅಲ್ಟಾಟೆಕ್ ಸಿಮೆಂಟ್ ಕಾರ್ಖಾನೆಯ ಪ್ಯಾಕಿಂಗ್ ಮತ್ತು ಲೋಡಿಂಗ್ ಆಧಾರದ ಮೇಲೆ ಕಾರ್ಮಿಕರಿಗೆ ಮೂಲಭೂತ ಸೌಲಭ್ಯಗಳನ್ನು ನೀಡುವುದು ಮತ್ತು ಕಾರ್ಮಿಕರಿಗೆ ಡ್ಯೂಟಿ ಶಿಫ್ಟ್ ಸೇರಿದಂತೆ ಹಲವಾರು ಬೇಡಿಕೆಗಳನ್ನು ಈಡೇರಿಸಬೇಕೆಂದು ಒತ್ತಾಯಿಸಿ ಅಂಬೇಡ್ಕರ್ ಸೇವಾ ಸಮಿತಿ ಕರ್ನಾಟಕ ವತಿಯಿಂದ ನಗರದ ಡಿಸಿ ಕಚೇರಿ ಮುಂದೆ 7ನೇ ಅನಿರ್ದಿಷ್ಟ ಧರಣಿ ಸತ್ಯಾಗ್ರಹದಲ್ಲಿ ಸೇಡಂ ಮಾಜಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ ಅವರು ಕಾರ್ಮಿಕರ ಸಮಸ್ಯೆ ಕುರಿತು ನಡೆದ ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿ ಚರ್ಚಿಸಿದರು.

ಜಿಲ್ಲೆಯ ಸೇಡಂ ತಾಲೂಕಿನ ಮಳಖೇಡ ಗ್ರಾಮದಲ್ಲಿರುವ ರಾಜಶ್ರೀ ಅಲ್ಟಾಟೆಕ್ ಸಿಮೆಂಟ್ ಕಾರ್ಖಾನೆಯ ಪ್ಯಾಕಿಂಗ್ ಮತ್ತು ಲೋಡಿಂಗ್ ಆದರದ ಮೇಲೆ ಕೆಲಸ ಮಾಡುವ ಕಾರ್ಮಿಕರಿಗೆ ಸುಮಾರು ವರ್ಷಗಳಿಂದ ಆಗುತ್ತಿರುವ ಸಮಸ್ಯೆಗಳ ಕುರಿತು ಸಂಬಂಧಪಟ್ಟ ಕಾರ್ಮಿಕ ಕಚೇರಿ (ಲೇಬರ್ ಆಫೀಸ್) ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಎದುರುಗಡೆ ಹೋರಾಟ ಮಾಡಿದರು ಕೂಡ ಯಾವುದೇ ಅಧಿಕಾರಿಗಳು ಗಮನಹರಿಸುತ್ತಿಲ್ಲ. ದಿನೇ ದಿನೇ ಕಾರ್ಮಿಕರ ಮೇಲೆ ಕಂಪನಿಯಲ್ಲಿ ಕೆಲಸ ಮಾಡುವ ಸೂಪರ್ವೈಸರ್ ಹಾಗೂ ಅಲ್ಲಿರುವ ಕೆಲವು ವ್ಯಕ್ತಿಗಳಿಂದ ಮನಬಂದಂತೆ ಕಾರ್ಮಿಕರ ಮೇಲೆ ದೌರ್ಜನ್ಯ ಮಾಡುತ್ತಿದ್ದಾರೆ.ರಾಜಶ್ರೀ ಅಲ್ಟಾಟೆಕ್ ಸಿಮೆಂಟ್ ಕಾರ್ಖಾನೆಯ ಹೆಚ್.ಆರ್. ನಾರಾಯಣ ಇವರಿಗೆ ಹಲವಾರು ಬಾರಿ ಭೇಟಿಯಾಗಿ ಮನವಿ ಪತ್ರ ನೀಡಿದರೂ ಸಹ ಯಾವುದೇ ಪ್ರಯೋಜನವಾಗಿರುವುದಿಲ್ಲ.

ಆದಷ್ಟು ಬೇಗ ಕಾರ್ಮಿಕರಿಗೆ ಸಂಬಂಧಪಟ್ಟ ಅಧಿಕಾರಿಗಳು ಆದಷ್ಟು ಬೇಗ ಸಮಸ್ಯೆ ಬಗೆಹರಿಸಬೇಕು ಹಾಗೂ ಅರ್ಜುನ್ ರೋಡ್ ವೈಸ್ ಮತ್ತು ಮಹಾರಾಜ ಗ್ರೂಪ್ ಇವರ ಕಾಂಟಾಕ್ಟ್ ಲೈಸೆನ್ಸ್ ರದ್ದು ಮಾಡಿ ಕಪ್ಪುಪಟ್ಟಿಯಲ್ಲಿ ಹಾಕಬೇಕು ಹಾಗೂ ಇವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಈ ಕಂಪನಿಯಲ್ಲಿ ಸೂಪರ್ವೈಸರ್ ವರ್ಕ್ ಮಾಡುತ್ತಿರುವ ಕೆಲವು ವ್ಯಕ್ತಿಗಳ ಮೇಲೆ ಆದಷ್ಟು ಬೇಗ ಕಾನೂನು ಕ್ರಮ ಕೈಗೊಳ್ಳಬೇಕು. ಎಂದು ಅಂಬೇಡ್ಕರ್ ಸೇವಾ ಸಮಿತಿ ಯುವ ಘಟಕ ಅಧ್ಯಕ್ಷ ಎನ್.ಕೆ. ಅರ್ಜುನ ಅವರು ಮಾಜಿ ಶಾಸಕರಿಗೆ ತಿಳಿಸಿದ್ದರು.

ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಸಂದೀಪ ಭರಣಿ, ಬುದ್ದೇಶ್ ಸಿಂಗೆ, ಬಾಗೇಶ್, ಪ್ರಿಯದರ್ಶಿನಿ,ಅಭಿಮನ್ಯಯು, ಮಲ್ಲಿಕಾರ್ಜುನ ಕಟ್ಟೆ ಸೇರಿದಂತೆ ಕಾರ್ಮಿಕರು ಇದ್ದರು.

# ದೇಶ ವಿದೇಶಗಳಲ್ಲಿ ಅಭ್ಯಾಸ ಮಾಡಿ ಸಂವಿಧಾನ ಬರೆದ ಡಾ,ಅಂಬೇಡ್ಕರರು ಸರ್ವ ಶ್ರೇಷ್ಠರು: ಸಚಿವ ದರ್ಶನಾಪುರ



ತಾಲುಕಾ ಕೇಂದ್ರ ಸ್ಥಳದಲ್ಲೆ ಆಯಕಟ್ಟಿನ ಜಾಗದಲ್ಲಿ ಡಾ,ಬಾಬಾಸಾಹೇಬರ ಮೂರ್ತಿ ಪ್ರತಿಸ್ಥಾಪನೆಗೆ ಸಿದ್ದವಾಗಿದ್ದು ಮುಂದಿನ ದಿನಗಳಲ್ಲಿ ಎಐಸಿಸಿ ರಾಷ್ಟ್ರೀಯ ಅಧ್ಯಕ್ಷರಾದ ಡಾ, ಮಲ್ಲಿಕಾರ್ಜುನ ಖರ್ಗೆಜೀಯವರುನ್ನು ಮುಖ್ಯಮಂತ್ರಿ ಸಿದ್ರಾಮಯ್ಯನವರನ್ನು ಹಾಗೂ ಡಾ,ಎಚ್,ಸಿ,ಮಾಹಾ ದೇವಪ್ಪನವರನ್ನು ಅಹ್ವಾನಿಸಿ ಹಳೆ ಬಸ್ ನಿಲ್ದಾಣದಲ್ಲಿ ಡಾ,ಬಿ,ಆರ್,ಅಂಬೇಡ್ಕರವರ ಪ್ರತಿಮೆ ಲೋಕಾರ್ಪಣೆ ಮಾಡಲಾಗುತ್ತದೆ, ಕಾನೂನಾತ್ಮಕವಾಗಿ 14 ತಿಂಗಳ ಕಾಲ ಸತತ ಪ್ರತಯತ್ನಗಳಿಂದ ಸಚಿವ ಸಂಪುಟದಲ್ಲಿ ಚರ್ಚಿಸಿ, ನ್ಯಾಯಸಮ್ಮತವಾಗಿ ಅವಕಾಶ ಕಲ್ಪಿಸಿಕೊಡಲಾಯಿತು, ಈ ದಿಸೆಯಲ್ಲಿ ದಲಿತ ಮುಖಂಡರ ಪ್ರಯತ್ನಗಳು ಮರೆಯಲಾಗದು, ಶಿಘ್ರದಲ್ಲೆ ಪ್ರತಿಮೆ ಅನಾವರಣಕ್ಕೆ ಸಜ್ಜುಗೊಳಿಸಲಾಗುತ್ತದೆ.

ಶರಣಬಸ್ಸಪ್ಪಗೌಡ ದರ್ಶನಾಪುರ ಸಣ್ಣ ಕೈಗಾರಿಕಾ ಸಾರ್ವತ್ರಿಕ ಉದ್ಯಮಗಳ ಮಂತ್ರಿಗಳು

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಏ.26:ಸಂವಿಧಾನ ಕರಡು ಸಮಿತಿ ಅಧ್ಯಕ್ಷರಾಗಿ ನೇಮಗೊಂಡು ಯಾರ ಸಹಕಾರಗಳಿಲ್ಲದೆ ದೇಶ ವಿದೇಶಗಳಲ್ಲಿ ಅಭ್ಯಾಸ ಮಾಡಿ ಪಾಂಡತ್ಯವನ್ನು ಪಡೆದುಕೊಂಡು ಭಾರತ ದೇಶಕ್ಕೆ ವಿಶ್ವಕ್ಕೆ ಮಾದರಿಯದ ಸಂವಿಧಾನ ನೀಡಿ ಸರ್ವ ಶ್ರೇಷ್ಠರೆನಿಸಿದ್ದಾರೆ, ಅವರ ಹಾದಿಯಲ್ಲಿ ಇಂದು ಭಾರತ ಮುನ್ನಡೆಯುತ್ತಿದ್ದು,ಪ್ರತಿಯೊಬ್ಬರು ಡಾ.ಬಿ,ಆರ್,ಅಂಬೇಡ್ಕರವರ ಆದರ್ಶಗಳು ಸರ್ವರು ಅರ್ಥೈಹಿಸಿಕೊಳ್ಳಬೇಕು ಎಂದು ಸಣ್ಣ ಕೈಗಾರಿಕಾ ಸಾರ್ವಜನಿಕ ಉಧ್ಯಮಗಳ ಮಂತ್ರಿಗಳಾದ ಶರಣಬಸ್ಸಪ್ಪಗೌಡ ದರ್ಶನಾಪುರವರು ಕರೆನೀಡಿದರು, ಅವರು ತಾಲುಕಿನ ರಸ್ತಾಪುರ ಗ್ರಾಮದಲ್ಲಿ ಡಾ,ಬಾಬಾಸಾಹೇಬ್ ಅಂಬೇಡ್ಕರವರ ಪ್ರತಿಮೆ ಅನಾವರಣ ಮಾಡಿ ಮಾತನಾಡಿದರು, ಮುಂದುವರೆದು ಮಾತನಾಡಿದ ಅವರು, ಶೈಕ್ಷಣಿಕ,ರಾಜಕೀಯ, ಮತ್ತು ಸಾಮಾಜಿಕವಾಗಿ ಬೇಳೆಯಲು ಶಿಕ್ಷಣಕ್ಕೆ ಹೆಚ್ಚು ಆಸಕ್ತಿ ನೀಡಬೇಕು, ಕಲಂ, 371 ಜೆ ಜಾರಿಗೆ ತಂದು ಕಲ್ಯಾಣ ಕರ್ನಾಟಕಕ್ಕೆ ಕೊಡುಗೆ ನೀಡಿದ, ಎಐಸಿಸಿ ಅಧ್ಯಕ್ಷರಾದ ಡಾ, ಮಲ್ಲಿಕಾರ್ಜುನ ಖರ್ಗೆಯವರ ಕಾರ್ಯ ಶ್ಲಾಘನೀಯವಾಗಿದ್ದು ಇಂದು ಹಿಂದುಳಿದ ಹೈದ್ರಬಾದ ಕರ್ನಾಟಕ ವಿಭಾಗಕ್ಕೆ ಉದ್ಯೋಗ ಮತ್ತು ಶೈಕ್ಷಣಿಕವಾಗಿ ಶಕ್ತಿಯಾಗಿ ನೀಡಿದ್ದಾರೆ, ಎಂದ ಸಚಿವ ದರ್ಶನಾಪುರ ನುಡಿದರು, ಜಯಂತಿ ಉತ್ಸವಗಳು ಕೇವಲ ಕಾಟಚಾರಕ್ಕೆ ಸೀಮಿತವಾಗಬಾರದು ಅತ್ಯಂತ ಹಿಂದೆ ಉಳಿದ ಸಮಾಜದ ಕುಟುಂಬಗಳಿಗೆ ಪರಸ್ಪರ ಸಹಕಾರ ನೀಡಿ ಶೈಕ್ಷಣಿಕವಾಗಿ ಮುಂದೆ ಸಾಗಿಸಬೇಕು,ಅಂತರಿಕ ಕಲಹಗಳನ್ನು ಮರೆತು ಸಮಾಜಿಕ ಅಭ್ಯುಧ್ಯಯಕ್ಕೆ ಮುಂದಾಗಿ ನಿಲ್ಲಬೇಕು ಎಂದು ಅವರು ತಿಳಿಸಿದರು, ಪೂಜ್ಯಮೆಂತಪಾಲ ಬಂತೇಜೀಯರು ಹಾಗೂ ಪರಮಪೂಜ್ಯಶ್ರೀ ಶರಭಯ್ಯ ಮಾಹಾಸ್ವಾಮೀಗಳು ದಿವ್ಯ ಸಾನಿಧ್ಯವಹಿಸಿದ್ದರು, ಮುಖ್ಯ ಅಥಿತಿಗಳಾಗಿ ಶರಬಣ್ಣಗೌಡ ಮಾ,ಪಾಟೀಲ,ಅಭ್ರಣ್ಣ ಸಾಹು. ಶರಬಣ್ಣ ಸಾಹು, ನಾಗಣ್ಣ ಪೂಜಾರಿ,ಹಯ್ಯಾಳಪ್ಪ ಟಣಿ–ಕೆದಾರ,ನಾಗಣಗೌಡ ಪಾಟೀಲ್, ಗ್ರಾ,ಪಂ, ಅಧ್ಯಕ್ಷರಾದ ಶ್ರೀಮತಿ ಶ್ರೀದೇವಿ ಜೇಗಿರಿ ತಾಲುಕಾ ಡಾ,ಬಿ,ಆರ್,ಅಂಬೇಡ್ಕರ ಜಯಂತೋತ್ಸವ ಸಮಿತಿ ಅಧ್ಯಕ್ಷರಾದ ಹೊನ್ನಪ್ಪ ರಸ್ತಾಪುರ,,ಬ್ಲಾಕ್ ಕಾಂಗ್ರಸ್ ಅಧ್ಯಕ್ಷರಾದ ಶಿವಮಾಂತಪ್ಪ ಸಾಹು ದಲಿತ ಮುಖಂಡರಾದ ನೀಲಕಂಠ ಬಡಿಗೇರ, ಮಲ್ಲಪ್ಪ ಗೋಗಿ,ಶ್ರೀಶೈಲ್ ಹೊಸಮನಿ, ಮಲ್ಲಿಕಾರ್ಜುನ ಪೂಜಾರಿ ಶಿವುಪುತ್ರ ಜವಳಿ, ನಾಗಣ್ಣ ಬಡಿಗೇರ.ಸೇರಿದ್ದಂತೆ ಅನೇಕರು ಹಾಜರಿದ್ದರು, ಸಮಾರಂಭದ ಅಧ್ಯಕ್ಷತೆಯನ್ನು ಭೀಮರಾಯ ಜೇಗಿರಿ ವಹಿಸಿದ್ದರು, ಗೌರವಾಧ್ಯಕ್ಷರಾದ ಚಂದ್ರಕಾಂತ ಬಜೇರಿ, ಕಾಯಾಧ್ಯಕ್ಷರಾದ ಸಂತೋಷ ಮೆತ್ರಿ, ಮಾನಪ್ಪ ಜೇಗಿರಿ,ರಾಘವೇಂದ್ರ ದೇವಿಕೇರಿ, ಅಯ್ಯಪ್ಪ ಕೊಂಬಿನ,ಬಸವರಾಜ ಅಯ್ಯಪ್ಪನೋರ್. ಶರಬಣ್ಣ ಕಜ್ಜಾ ವಿಭಿಧ ಸಮಿತಿಗಳ ಅಧ್ಯಕ್ಷರು ಪಧಾಧಿಕಾರಿಗಳು ಪಾಲ್ಗೊಂಡಿದ್ದರು,ಭೀಮಾಶಂಕರ್ ಅಯ್ಯಪನೋರ್ ಸರ್ವರನ್ನು ಸ್ವಾಗತಿಸಿದರು,ಭೀಮರಾಯ ಜೇಗ್ರಿರಿ ಕಾರ್ಯಕ್ರಮ ನಿರೂಪಿಸಿದರು, ಮಲ್ಲಿಕಾರ್ಜುನ ಆರಬೋಳ ವಂದಿಸಿದರು,

## ಮೂಲಭೂತ ಸೌಕರ್ಯಗಳು ಒದಗಿಸಲು ಮಠದ ಪೀಠಾಧಿಪತಿ ಡಾ. ವೀರಪ್ರಭು ಪಂಡಿತರಾದ್ಯ ಶಿವಾಚಾರ್ಯರು ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ತಾಲ್ಲೂಕಿನ ಕೊಡಂಬಲ,ಮುದ್ನಾಳ ಗ್ರಾಮದ ಹೊರವಲಯದಲ್ಲಿರುವ ಶ್ರೀ ರೇವಣಸಿದ್ಧೇಶ್ವರ ರಥೋತ್ಸವ ಉದ್ಘಾಟನಾ ಸಮಾರಂಭ ಹಾಗೂ ಜಾತ್ರಾಮಹೋತ್ಸವ ಏ.28ರಂದು ಅದ್ದೂರಿಯಾಗಿ ಜರುಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ನಾಡಿನ ಮಠಾದೀಶರು, ರಾಜಕೀಯ ಧುರೀಣರು ಆಗಮಿಸುತ್ತಿದ್ದಾರೆ. ಇಗಾಗಲೇ ಪ್ರಾಯಗ್‌ರಾಜ್ ದಿಂದ ಶ್ರೀ ಶ್ರೀ ಶ್ರೀ ಬಾಬಾ ಕಾಶಿಪುರಿ ಮಹಾರಾಜರು, ಅಖೀಲೇಶ್ ಪುರಿ ಮಾಹಾರಾಜರು, ಕೃಷ್ಣಪುರಿ ಮಾಹಾರಾಜರು ಆಗಮಿಸುತ್ತಿದ್ದಾರೆ, ಶ್ರೀ ಮಠ ಸ್ಥಾಪನೆಗೊಂಡು 25 ವರ್ಷ ಪೂರೈಸಿದೆ. ದಿನನಿತ್ಯ ಮಠಕ್ಕೆ ನೂರಾರು ಭಕ್ತರಕ್ಕಿಂತಲ್ಲೂ ರೋಗಿಗಳೇ ಹೆಚ್ಚು ಬರುತ್ತಿರುತ್ತಾರೆ. ಕಾರಣ ಆಯುರ್ವೇದಿಕ ಔಷಧಿ ನೀಡುತ್ತೇವೆ. ಕ್ಯಾನ್ಸ್, ಏಡ್ಸ್, ಹಾರ್ಟ್, ಬಿ.ಪಿ, ಶುಗರ್ ಸೇರಿದಂತೆ ಅನೇಕ ರೋಗಗಳಿಗೆ ಗುಣಮಟ್ಟದ ಆಯುರ್ವೇದಿಕ ಔಷಧಿಗಳನ್ನು ನೀಡುತ್ತೇವೆ ಎಂದು ಮಠದ ಉತ್ತರಾಧಿಕಾರಿಯಾಗಿ 10 ವರ್ಷ ಪೂರೈಸುತ್ತಿದೆ. ಆದರೆ ಇಲ್ಲಿಯವರೆಗೆ ಸಕಾರದ ಒಂದು ಪೈಸೆ ಕೂಡ ಮಠದ ಅಭಿವೃದ್ಧಿಗೆ ಬಂದಿಲ್ಲ. ಶ್ರೀ ರೇವಣಸಿದ್ಧೇಶ್ವರ ಮಠದ ಸುತ್ತಮುತ್ತಲ್ಲೂ ಹಾಗೂ ಮಠದ ಒಳಗಡೆ ವಿದ್ಯುತ್ ದೀಪ, ನೀರಿನ ಸಮಸ್ಯೆ, ಸಮುದಾಯ ಭವನ ಸೇರಿದಂತೆ ಮೂಲಭೂತ ಸೌಕರ್ಯಗಳು ಕ್ಷೇತ್ರದ ಶಾಸಕರು, ವಿಧಾನ ಪರಿಷತ್ ಸದಸ್ಯರು, ಸಂಸದರು ಸಕಾರದ ಮೇಲೆ ಒತ್ತಡ ಹೇರಿ ಸ್ಪಂದಿಸಬೇಕೆಂದು ಮಠದ ಪೀಠಾಧಿಪತಿ ಡಾ.ವೀರಪ್ರಭು. ಪಂಡಿತರಾದ್ಯ ಶಿವಾಚಾರ್ಯರು, ಡಾ.ಕೃಷ್ಣರೆಡ್ಡಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಸಮಾಜ ಕಾರ್ಯಕರ್ತರ ಮಹಮ್ಮದ್ ಅಸ್ಲಾಂಮಿಯಾ, ಗೋಪಾಲ್ ರೆಡ್ಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಶಾಮಸುದ್ದೀನ್ ಇನಾಮದಾರರವರಿಗೆ ಸಮಾಜ ಸೇವಾ ರತ್ನ ಪ್ರಶಸ್ತಿ ಪ್ರಧಾನ.



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಶ್ರೀ ವಿರಕೇಶ್ವರ ಭರತನಾಟ್ಯ ತರಬೇತಿ ಸಂಸ್ಥೆ(ರಿ) ತಾಳಿಕೋಟಿ ಸಂಸ್ಥೆ 6ನೇಯ ವಾರ್ಷಿಕೋತ್ಸವ ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ರಾಜ್ಯಮಟ್ಟದ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ.

ಈ ಸಂಸ್ಥೆಯು 2 ತಿಂಗಳ ಉಚಿತನೃತ್ಯತರಬೇತಿ ಸಮಾರೋಪ ಸಮಾರಂಭ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಂಡಿದ್ದು

ಕನ್ನಡ ನಾಡಿನ ನೆಲ ಜಲ ಭಾಷೆ ಸಾಹಿತ್ಯ, ಸಂಗೀತ, ನೃತ್ಯ, ಶಿಕ್ಷಣ, ಮಾಧ್ಯಮ, ಚಿತ್ರಕಲೆ ಸಮಾಜ ಸೇವೆ ರಂಗಭೂಮಿ ಕ್ರೀಡೆ, ವೈದ್ಯಕೀಯ ಜನಪದ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲಲ್ಲಿ ಸಾಧನೆಗೈಯಿತ್ತಿರುವ ಸನ್ಮಾನ ಹಾಗೂ ಪ್ರಶಸ್ತಿ ಪ್ರಧಾನ

ದಿನಾಂಕ 03-05-2025 ರಂದು ಶ್ರೀ ವಿಠಲ ಮಂದಿರ ಸಭಾಭವನ ತಾಳಿಕೋಟಿಯಲ್ಲಿ ನಾಡಿನ ಪೂಜ್ಯರು ಹಾಗೂ ಗಣ್ಯ ಮಾನ್ಯರ ಸಮ್ಮುಖದಲ್ಲಿ ಶ್ರೀ ಸಿದ್ದಗಂಗಾ ಶಿಕ್ಷಣ ಸಂಸ್ಥೆ ಕಲಕೇರಿ ಸಂಸ್ಥಾಪಕರಾದ ಶಮಸುದ್ದೀನ್ ಇನಾಮದಾರರವರಿಗೆ ಸಮಾಜ ಸೇವೆಯನ್ನು ಗುರುತಿಸಿ ರಾಜ್ಯಮಟ್ಟದ "ಸಮಾಜ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗುವುದು.

ಫಾತ್ಮಪುರ; ಪಡಿತರ ಆಹಾರ ಧಾನ್ಯ ವಿತರಣೆ ನಿನ್ನೆಯಿಂದ ಆರಂಭ

## ಸಂತೋಷಗೊಂಡ ಸಾರ್ವಜನಿಕರು



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣದ 23ನೇ ವಾರ್ಡಿನ ಫಾತ್ಮಪುರ್ ಮತ್ತು 22ನೇ ವಾರ್ಡಿನ ಪ್ರಿಯದರ್ಶಿನಿ ಕಾಲೋನಿಯ ವಾರದ 8 ದಿನ ಪಡಿತರ ಧಾನ್ಯ ನೀಡಬೇಕು ಎಂದು ಇತ್ತೀಚಿಗೆ ಕನ್ನಡ ಸೇನೆ ಕರ್ನಾಟಕ ಸಂಘಟನೆ ಮನವಿ ಮಾಡಿತ್ತು. ಮನವಿಗೆ ಸ್ಪಂದಿಸಿ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಉಪನಿರ್ದೇಶಕರ ನಿರ್ದೇಶನದಂತೆ ಏಪ್ರಿಲ್ 21ರಂದು ಫಾತ್ಮಪುರ್ ಮತ್ತು ಪ್ರಿಯದರ್ಶಿನಿ ಕಾಲೋನಿಯಯಲ್ಲಿ ವಾರದ 8 ದಿನ ನ್ಯಾಯ ಬೆಲೆ ಅಂಗಡಿ ಸಂಖ್ಯೆ 1963 ಶ್ರೀದೇವಿ ಸ್ತ್ರೀ ಶಕ್ತಿ ಸಂಘ ಮತ್ತು ನ್ಯಾಯ ಬೆಲೆ ಅಂಗಡಿ ಸಂಖ್ಯೆ 124 ವಿ.ಎಸ್. ಎಸ್.ಎನ್ ನ್ಯಾಯ ಬೆಲೆ ಅಂಗಡಿ ಪಡಿತರ ವಿತರಣೆ ವರ್ತಕರು 23ನೇ ವಾರ್ಡಿನಲ್ಲಿ (ಪಿಒಎಸ್) ಮುಖಾಂತರ ವಾರ್ಡಿನಲ್ಲಿ ಪ್ರತ್ಯೇಕ ಮಳಿಗೆ ಮಾಡಿ ಪಡಿತರ ಆಹಾರ ಧಾನ್ಯಗಳನ್ನು ವಿತರಣೆ ಮಾಡಬೇಕು ಎಂದು ಚಿಟಗುಪ್ಪ ತಹಶೀಲ್ದಾರರು ಆದೇಶ ಹೊರಡಿಸಿದ ನಿಮಿತ್ಯ ಫಾತ್ಮಪುರನಲ್ಲಿ ಶನಿವಾರ ಪಡಿತರ ಆಹಾರ ಧಾನ್ಯಗಳು ನೀಡುವ ಮಳಿಗೆಗೆ ಹಿರಿಯರಾದ ಅಶೋಕ ಸ್ವಾಮಿ ಪೂಜೆ ಸಲ್ಲಿಸಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾರುತಿ ಶಾಖಾ, ಪಿಕೆಪಿಎಸ್ ಅಧ್ಯಕ್ಷ ಸಿದ್ದರೋಡ ಒಂಟೆನೋರ್, ನಿರ್ದೇಶಕರಾದ ಮಹಾರುದ್ರಯ್ಯ ಸ್ವಾಮಿ, ಅಂಬಾದಾಸ್, ಮುಖ್ಯ ಕಾರ್ಯನಿರ್ವಾಹಕ ಸಂಗ್ರಾಮ ಪಡಗಿ, ಸಿಬ್ಬಂದಿಗಳಾದ ಶ್ರೀಶೈಲ ಸಾದಾ, ರಮೇಶ ಬಿರಾದಾರ್, ರಾಚಪ್ಪ ಮಜಗೆ, ಮಹಮ್ಮದ್ ಮದರ್, ಪ್ರಮುಖರಾದ ರವೀಂದ್ರರೆಡ್ಡಿ ರಾಂಪುರ, ವೆಂಕಟ ಪೂಜಾರಿ, ಮಲ್ಲಿಕಾರ್ಜುನ ಮಟ್ಟಿ, ಜಗನಾಥ ಗೋಣಗಿ, ಕರೆಪ್ಪಸ್ವಾಮಿ, ಅಶೋಕ ಪಂಚಾಳ, ಸಂಗಮ್ಮಾ ಗೋಣಗಿ, ಮಲ್ಲಿಕಾರ್ಜುನ ಸೀತಾಳಗೇರಾ, ದಿಲೀಪ್ ಪಂಚಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ತಾಳಿಕೋಟಿ ಸಮುದಾಯ ಆರೋಗ್ಯ ಕೇಂದ್ರ ವೈದ್ಯರೇ ಸರಿಯಾದ ಸಮಯಕ್ಕೆ ಬರುತ್ತಿಲ್ಲ.




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿಯ ಆರೋಗ್ಯ ಸಮುದಾಯ ಕೇಂದ್ರದ ಆಡಳಿತದ ಪರಸ್ಥಿತಿ ದುರಾಡಳಿತ ಸಂಪೂರ್ಣ ಅದೇಗೆಟ್ಟು ಹೋಗಿದೆ ಕೇಳವರು ಯಾರು ಇಲ್ಲ.

ಇದು ವಿಜಯಪುರ ಜಿಲ್ಲೆಯ ತಾಳಿಕೋಟಿಯ ಆರೋಗ್ಯ ಸಮುದಾಯ ಕೇಂದ್ರದ ಸದ್ಯದ ಪರಸ್ಥಿತಿ ಏನಾಗಿದೆ ಅಂದ್ರೆ ಡಾಕ್ಟರಗಳು ಸರ್ಕಾರ ನಿಗದಿ ಪಡಿಸಿದ ಸಮಯಕ್ಕೆ ಬರುವುದೇ ಇಲ್ಲ. 11 ಗಂಟೆಗೆ ಬಂದು 1 ಗಂಟೆಗೆ ಹೋದವರು ಕಾಣೆ ಆಗಿಬಿಡುತ್ತಾರೆ ಎಂದು.ಸಾರ್ವಜನಿಕರು ತರಾಟೆಗೆ ತಗೆದು ಕೊಂಡಿದ್ದರು. ಖಿಲೂಔ.ಡಾ.ಸತೀಶ ತಿವಾರಿ ಇವರು ಸಮುದಾಯ ಅರೋಗ್ಯ ಕೇಂದ್ರದಲ್ಲಿ ಆಡಳಿತದ ಸಿಬ್ಬಂದಿಗಳು ಸರಿಯಾದ ಸಮಯಕ್ಕೆ ನೌಕರಿಗೆ ಹಾಜರಾಗುತ್ತಾರೋ ಇಲ್ಲೋ ಎಂಬವುದನ್ನು ವೀಕ್ಷಿಸುವುದಿಲ್ಲ ನಿರ್ಲಕ್ಷದಿಂದ ಜವಾಬ್ದಾರಿಯನ್ನು ಮರೆತು ಬಿಟ್ಟಿದ್ದಾರೆ. ಮತ್ತು ಈ ಸರ್ಕಾರಿ ದವಾಖಾನೆಗೆ ಆಂಬುಲೆನ್ಸ್.ನಗು ಮಗು. ವಾಹನ ಲಭ್ಯವಿರುದಿಲ್ಲ ಬಾಣತಿಯರು ಆಟೋ ಕಾರುಗಳನ್ನು ಬಾಡಿಗೆ ಮಾಡಿಕೊಂಡು ತಮ್ಮ ಸ್ಥಳಕ್ಕೆ ಹೋಗಬೇಕು. ಈ ಆರೋಗ್ಯ ಕೇಂದ್ರದ ಸದ್ಯದ ಪರಸ್ಥಿತಿ ಚಿಂತಾ ಜನಕವಾಗಿದೆ.ಈ ಬೇಸಿಗೆ ದಿನಕ್ಕೆ ಬಹಳ ಹೃದಯಘಾತಕ್ಕೆ ಸಂಬಂಧಿಸಿದ ರೋಗಿಗಳು ಬಂದ್ರೆ ಅವರಿಗೆ ಯಾವುದೇ ತರಹದ ಚಿಕಿತ್ಸೆ ಲಭಿಸುವ ಔಷಧಿ ವ್ಯವಸ್ಥೆ ಇಲ್ಲ. ಆಕ್ಸಿಜನ್ ಒಂದು ಟೈಮ್ ಇರುತ್ತೆ ಕೆಲವೊಂದು ಟೈಮ್ ಇರುವುದಿಲ್ಲ. ಶಸ್ತ್ರ ಚಿಕಿತ್ಸೆಗೆ ಬೇಕಾದ ವಸ್ತುಗಳು ಕೊಡಾ ಇಲ್ಲ. ಮತ್ತು ಕೈ ಕಾಲು ಮುರಿದರೆ ಎಕ್ಸರೆ ಮಾಡಲು ಮಷಿನ್ ಇದ್ರೂ ಕೊಡಾ ಬಹಳ ದಿನದಿಂದ ಕೆಟ್ಟು ಹೋಗಿದೆ. ಅದನ್ನು ಸಾರ್ವಜನಿಕರೇ ರಿಪೇರಿ ಮಾಡಿಸುವಂತ ಸಂಧರ್ಭ ಉಂಟಾಗಿದೆ. ಖಾಸಗಿ ಆಸ್ಪತ್ರೆಗೆ ಹೋಗಿ ಎಂದು ಕಳಿಸುವ ವಿಧಾನ ಈ ತಾಳಿಕೋಟಿಯ ಅರೋಗ್ಯ ಸಮುದಾಯ ಕೇಂದ್ರದಲ್ಲಿ ಇನ್ನು ಜೀವಂತವಿದೆ ಎಂದು ಆಸ್ಪತ್ರೆಗೆ ಬಂದ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದರು.

## ಅಪಾಯ ತಡೆಗಟ್ಟಲು ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ ಅರಿವು, ಅಣಕು ಪ್ರದರ್ಶನ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏ 26: ಆಕಸ್ಮಿಕವಾಗಿ ಆಸ್ಪತ್ರೆಯಲ್ಲಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಬೆಂಕಿ ಅವಗಡ ಸಂಭವಿಸಿದಾಗ ಆಗುವ ದುರ್ಘಟನೆ ಹಾಗೂ ಅಪಾಯ ತಡೆಗಟ್ಟಲು ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ ಅರಿವು ಹಾಗೂ ಅಣಕು ಪ್ರದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ ಬಿರದಾರ ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಆಸ್ಪತ್ರೆ (ಯಿಮ್ಸ), ಜಿಲ್ಲಾ ಮಲೇರಿಯಾ ಅಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ಯಾದಗಿರಿ ಜಿಲ್ಲಾ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿ ಅಗ್ನಿಶಾಮಕ ಸೇವಾ ಸಪ್ತಾಹದ ಅರಿವು ಅಣಕು ಪ್ರದರ್ಶನ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಅಗ್ನಿ ಸುರಕ್ಷತಾ ಕ್ರಮಗಳನ್ನು ಎಲ್ಲರೂ ಅಳವಡಿಸಿಕೊಂಡು ಅಮೂಲ್ಯವಾದ ಜೀವವನ್ನು, ಸಸ್ಯ ಸಂಪತ್ತನ್ನು ಬೆಂಕಿಯಿಂದ ರಕ್ಷಿಸಿಕೊಳ್ಳಬೇಕು ಹಾಗೂ ಅಗ್ನಿ ಅವಘಡ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕೆಂದು, ಆಕಸ್ಮಿಕವಾಗಿ ಆಸ್ಪತ್ರೆಯಲ್ಲಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಬೆಂಕಿ ಅವಗಡ ಸಂಭವಿಸಿದಾಗ ಆಗುವ ದುರ್ಘಟನೆ ಹಾಗೂ ಅಪಾಯ ತಡೆಗಟ್ಟಲು ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ ತಿಳಿಸಿದರು.

ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿಗಳಾದ ಡಾ.ಸಾಜೀದ್ ಅವರು ಮಾತನಾಡಿ, ಏ.14 ರಿಂದ ಏ.20 ರ ವರೆಗೆ, ಸುರಕ್ಷಿತ ಭಾರತವನ್ನು ಹುಟ್ಟು ಹಾಕಲು ಒಂದಾಗೋಣ, ಎಂಬ ಘೋಷ ವಾಕ್ಯದೊಂದಿಗೆ ಅರಿವು ಸಪ್ತಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಅಗ್ನಿಶಾಮಕ ಸಿಬ್ಬಂದಿ ಹಾಗೂ ಅಧಿಕಾರಿಗಳು ಆಕಸ್ಮಿಕ ಬೆಂಕಿ ಸಂಭವಿಸಿದ ಕಡೆ ಹಾಗೂ ತುರ್ತು ಸಂದರ್ಭಗಳಲ್ಲಿ ತಕ್ಷಣ ಧಾವಿಸಿ ತಮ್ಮ ಜೀವದ ಹಂಗು ತೊ-ರೆದು ರಕ್ಷಣಾ ಕಾರ್ಯದಲ್ಲಿ ತೊಡಗಿಸಿಕೊಳ್ಳುತ್ತಿರುವುದು ಶ್ಲಾಘನಿಯ ಈ ಕಾರ್ಯಕ್ರಮದ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳಾದ ಶ್ರೀ ವಿರೇಶ್ ಅವರು ಮಾತನಾಡಿ, ಅಗ್ನಿ ಅವಘಡಗಳ ಸಂದರ್ಭದಲ್ಲಿ ಅಗ್ನಿ ಶಾಮಕ ಇಲಾಖೆಯಿಂದ ಕೈಗೊಳ್ಳುವ ಕ್ರಮಗಳು ಹಾಗೂ ಇಲಾಖೆ ಬಳಸುವ ಉಪಕರಣಗಳ ಬಗ್ಗೆ ಮಾಹಿತಿ ಜೊತೆಗೆ ಸಾರ್ವಜನಿಕರು ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಕುರಿತು ತಿಳಿಸಿದರು. ನಂತರ ಅಗ್ನಿ ಶಾಮಕ ದಳದ ಸಿಬ್ಬಂದಿಗಳು ಅಣುಕು ಪ್ರದರ್ಶನ ತೊರಿಸುವುದರ ಮೂಲಕ ವೈದ್ಯರಿಗೆ ಹಾಗೂ ಅಧಿಕಾರಿ ಸಿಬ್ಬಂದಿಗಳಿಗೆ ಹಾಗೂ ನೆರೆದಿದ್ದ ಸಾರ್ವಜನಿಕರಿಗೆ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ವೈದ್ಯಕೀಯ ಅಧೀಕ್ಷಕರಾದ ಡಾ.ಸಂತೋಶ್, ಜಿಲ್ಲಾ ವಿಬಿಡಿ ಸಲಹೆಗಾರರಾದ ಶ್ರೀ ಬಸವರಾಜ್ ಕಾಂತ, ಹಿರಿಯ ಆರೋಗ್ಯನಿರಕ್ಷಾಣಾದಿಕಾರಿಗಳಾದ ಶ್ರೀ ಹಿರಾಲಾಲ್ ಚೌವ್ಹಾಣ, ಆರೋಗ್ಯನಿರಕ್ಷಣಾಧಿಕಾರಿಗಳಾದ ಶ್ರೀ ಖುರ್ಶೀದ್, ಶ್ರೀ ಉಮೇಶ್, ಶ್ರೀ ಕಾಳಪ್ಪ ಪತ್ತಾರ, ಸಂತೋಶ್ ಜಾದವ್, ಎಂಟಿಎಸ್ ಗಳಾದ ಶ್ರೀ ವಿ.ಎಮ್.ಪಾಟಿಲ್, ಶ್ರೀ ಖಲಿಮುದ್ದಿನ್, ಹಾಗೂ ಆಸ್ಪತ್ರೆಯ ವೈದ್ಯರು, ಸಿಬ್ಬಂದಿಗಳು, ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇನ್ನಿತರರು ಉಪಸ್ಥಿತರಿದ್ದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ತುಳಸಿರಾಮ ಚವ್ಹಾಣ ಸ್ವಾಗತ ಹಾಗೂ ವಂದನಾರ್ಪಣೆ ವಂದಿಸಿದರು.

## ನಕಲಿ ನೋಟು ಚಲಾವಣೆ ಇಬ್ಬರ ಬಂಧನ

ರಾಯಚೂರು,ವಾ.26- ಹೋಟೆಲ್‌ನಲ್ಲಿ ಬಿರಿಯಾನಿ ತಿಂದು ನಕಲಿ 500 ರೂ ನೋಟು ಚಲಾವಣೆ ಮಾಡಿದ್ದ ಇಬ್ಬರು ಆರೋಪಿಗಳನ್ನು ನಗರ ಪೊಲೀಸರು ಬಂಧಿಸಿದ್ದಾರೆ.

500 ರೂ. ಮುಖಬೆಲೆಯ ನಕಲಿ ನೋಟು ಚಲಾವಣೆಗೆ ಮುಂದಾಗಿದ್ದ ಮಂಜುನಾಥ ಹಾಗೂ ರಮೇಶ್ ಬಂಧಿತ ಆರೋಪಿಗಳಾಗಿದ್ದಾರೆ, ಆರೋಪಿಗಳು ನಗರದ ಬಿರಿಯಾನಿ ಹೋಟೆಲ್ ವೊಂದರಲ್ಲಿ ಚಿಕನ್ ಬಿರಿಯಾನಿ ತಿಂದು 500 ರೂ. ಬಿಲ್ ಪಾವತಿಸಿದ್ದರು. ಸ್ವಲ್ಪ ಹೊತ್ತಿನ ಬಳಿಕ ಅನುಮಾನ ಬಂದು ಹೋಟೆಲ್ ಮಾಲೀಕ ನೋಟು ಪರಿಶೀಲಿಸಿದಾಗ ಅಸಲಿಯತ್ತು ಬಯಲಾಗಿದೆ.

ಮನೋರಂಜನೆಗಾಗಿ ಬಳಸುವ ಚಿಲ್ಡ್ರನ್ ಬ್ಯಾಂಕ್ ಆಫ್ ಇಂಡಿಯಾ ಎಂದು ನಮೂದಿಸಿದ್ದ ನಕಲಿ ನೋಟನ್ನು ಆರೋಪಿಗಳು ಬಿಲ್ ಪಾವತಿಗೆ ಬಳಸಿದ್ದರು. ಹೋಟೆಲ್ ಮಾಲೀಕ ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು. ಇಬ್ಬರು ಆರೋಪಿಗಳನ್ನ ಪೊಲೀಸರು ನ್ಯಾಯಾಂಗಬಂಧನಕ್ಕೆ ಒಪ್ಪಿಸಿದ್ದಾರೆ.

## ವ್ಯವಸ್ಥಿತವಾಗಿ ರಾಜ್ಯ ಸರ್ಕಾರಿ ನೌಕರರ ದಿನಾಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಏ.26: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಜ್ಯ ಸರ್ಕಾರಿ ನೌಕರರ ಸಂಘ ಇವರ ಸಹಯೋಗದಲ್ಲಿ ನಗರದಲ್ಲಿ ಇದೇ ಏಪ್ರಿಲ್ 29 ರಂದು ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ರಾಜ್ಯಸರ್ಕಾರಿ ನೌಕರರ ದಿನಾಚರಣೆ ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿ ವಿತರಣಾ ಸಮಾರಂಭದ ಹಮ್ಮಿಕೊಳ್ಳುವ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಇದೇ ಏಪ್ರಿಲ್ 29 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಪದವಿ ಕಾಲೇಜು ಸಭಾಂಗಣದಲ್ಲಿ ಹಮ್ಮಿಕೊಳ್ಳಲು ನಿರ್ಧರಿಸಲಾಗಿದ್ದು, ಅವಶ್ಯಕ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅಂದು ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಉಸ್ತುವಾರಿ ಸಚಿವರು ಕಾರ್ಯಕ್ರಮ ಉದ್ಘಾಟಿಸುವರು. ಅದರಂತೆ ಶಿಷ್ಟಾಚಾರದಂತೆ ಇತರ ಅತಿಥಿ ಗಣ್ಯರನ್ನು ಆಹ್ವಾನಿಸಲು, ಆಹ್ವಾನ ಪತ್ರಿಕೆ, ವೇದಿಕೆ ಸಿದ್ದತೆ.ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನಕ್ಕೆ ಸಿದ್ದತೆ ಮಾಡಿಕೊಳ್ಳುವಂತೆ ಹಾಗೂ ನುರಿತ ಉಪನ್ಯಾಸಕರನ್ನು ಆಹ್ವಾನಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.


ಈ ಕಾರ್ಯಕ್ರಮ ದಲ್ಲಿ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಈ ಕಾರ್ಯಕ್ರಮದಲ್ಲಿ ಹಾಜರಿರಬೇಕು. ಸೂಕ್ತ ಪೊಲೀಸ್ ಬಂದೋಬಸ್ತ್, ಕುಡಿಯುವ ನೀರಿನ ವ್ಯವಸ್ಥೆ, ಸ್ವಚ್ಛತೆ ಸೇರಿದಂತೆ ಇನ್ನಿತರ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ಮಾಡಲು ಅವರು ಸೂಚಿಸಿದರು. ಎಲ್ಲ ಸಿದ್ಧತೆ ವ್ಯವಸ್ಥಿತವಾಗಿ ಮಾಡಲು ವೇದಿಕೆ, ಊಟೋಪಹಾರ ಹಾಗೂ ಸನ್ಮಾನಕ್ಕೆ ವಿವಿಧ ಅಧಿಕಾರಿಗಳನ್ನು ಒಳಗೊಂಡ ಸಮಿತಿ ರಚಿಸಲು ನಿರ್ಧರಿಸಲಾಯಿತು.

ಸಭೆಯಲ್ಲಿ ಡಿವೈಎಸ್ಪಿ ಅರುಣಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವೀರಣ್ಣಗೌಡ, ರಾಜ್ಯ ಸರ್ಕಾರಿ ನೌಕರರ ಸಂಘ,ಜಿಲ್ಲಾ ಘಟಕ, ಅಧ್ಯಕ್ಷ ರಾಯಪ್ಪ ಜಿ.ಹುಡೆದ, ಯುವ ಜನಸೇವಾ ಹಾಗೂ ಕ್ರೀಡಾಧಿಕಾರಿ ರಾಜು ಬಾವಿಹಳ್ಳಿ,ಡಿಡಿಪಿಐ ಶ್ರೀ ಮುಧೋಳ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ರೈಲ್ವೇ ಅಭಿವೃದ್ಧಿಗೆ ಮನವಿ

ಬಳ್ಳಾರಿ:ಏ.26- ಈ ಭಾಗದಲ್ಲಿ ಓಡಾಡುತ್ತಿದ್ದ ಕೆಲ ರೈಲುಗಳನ್ನು ಬಂದ್ ಮಾಡಲಾಗಿದೆ ಅವನ್ನು ಪುನಃ ಆರಂಭಿಸಬೇಕು.

ಒಂದೇ ಭಾರತ್ ಸೇರಿದಂತೆ ಹೊಸ ರೈಲುಗಳನ್ನು ಆರಂಭಿಸಬೇಕು. ನೆನೆಗುದಿಗೆ ಬಿದ್ದಿರುವ ಬಳ್ಳಾರಿ ರೈಲು ನಿಲ್ದಾಣದ ಅಭಿವೃದ್ಧಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಹುಬ್ಬಳ್ಳಿ ರೈಲ್ವೇ ವಿಭಾಗದ ಬಳಕೆದಾರರ ಸಲಹಾ ಸಮಿತಿಯ ಸದಸ್ಯರಾದ ಆರ್. ಗೋಪಾಲಕೃಷ್ಣ, ಸೊಂತ ಗಿರಿಧರ ಅವರು ಹೊಬ್ಬಳ್ಳಿಯಲ್ಲಿನ ವಿಭಾಗೀಯ ರೈಲ್ವೇ ಮ್ಯಾನೇಜರ್ ಬಿ.ಮೀನಾ ಅವರನ್ನು ಭೇಟಿ ಮಾಡಿ ಮನವಿ ಮಾಡಿದ್ದಾರೆ.



ಬಸವಕಲ್ಯಾಣ :- ತಾಲೂಕಿನ ಹಾರಕೂಡ ಶ್ರೀ ಚನ್ನಬಸವೇಶ್ವರ ಸಂಸ್ಥಾನ ಹಿರೇಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ಪಟ್ಟಾಧಿಕಾರದ 30ನೇ ವಾರ್ಷಿಕೋತ್ಸವವನ್ನು ಶ್ರೀಮಠದ ದಾಸೋಹ ಮನೆಯಲ್ಲಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಹೇಮಲತಾ ಎಂ. ಹಿರೇಮಠ, ಕಾರ್ತಿಕ ಸ್ವಾಮಿ ಯಲದಗುಂಡಿ, ಅಲ್ಲಮಪ್ರಭು ಹಿರೇಮಠ, ನಿವೇದಿತ ಹಿರೇಮಠ, ಕಲ್ಲಯ್ಯ ಹಿರೇಮಠ, ಚನ್ನಬಸಯ್ಯ ದೇವಣಗಾಂವ ಮುಂತಾದವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

## ವಿಶ್ವಸಂಸ್ಥೆ ಕಾರ್ಮಿಕನ ಮೇಲೆ ದಾಳಿ ನಡೆಸಿದ್ದು ಇಸ್ರೇಲ್ ಸೇನೆ



ನವದೆಹಲಿ,ಏ.26:- ಕಳೆದ ತಿಂಗಳು ಗಾಜಾ ಪಟ್ಟಿಯಲ್ಲಿ ನಡೆದ ಘಟನೆಯಲ್ಲಿ ವಿಶ್ವಸಂಸ್ಥೆಯ ಕೆಲಸಗಾರನೊಬ್ಬನನ್ನು ಗುಂಡು ಹಾರಿಸಿ ಹತ್ಯೆ ಮಾಡಿ ಐವರು ಗಾಯಗೊಂಡ ಪ್ರಕರಣ-ಕ್ಕೆ ಸಂಬಂಧಿಸಿದಂತೆ ದಾಳಿ ಮಾಡಿದ್ದು ನಾವೇ ಎಂದು ಇಸ್ರೇಲ್ ಸೇನೆ ಒಪ್ಪಿಕೊಂಡಿದೆ.

ಮಾರ್ಚ್ 19 ರಂದು ದೇರ್ ಅಲ್-ಬಲಾನಲ್ಲಿರುವ ವಿಶ್ವಸಂಸ್ಥೆಯ ಸಿಬ್ಬಂದಿಯೊಬ್ಬರು ಸಾವನ್ನಪ್ಪಿದ ನಂತರ, ಇಸ್ರೇಲ್ ರಕ್ಷಣಾ ಪಡೆಗಳು ಆ ಸ್ಥಳದ ಮೇಲೆ ದಾಳಿ ಮಾಡಿಲ್ಲ ಎಂದು ಹೇಳಿದ್ದು ಬರೋಬ್ಬರಿ ಒಂದು ತಿಂಗಳ ಬಳಿಕ ನಾವೇ ದಾಳಿ ಮಾಡಿದ್ದು ಎನ್ನುವುದನ್ನು ಒಪ್ಪಿಕೊಂಡಿವೆ.

ಘಟನೆಯ ತನಿಖೆಯ ಆರಂಭಿಕ ಸಂಶೋಧನೆಗಳು, ಕಟ್ಟಡ "ಶತ್ರು ಉಪಸ್ಥಿತಿ" ಹೊಂದಿದೆ ಎಂದು ತಪ್ಪಾಗಿ ಗ್ರಹಿಸಿ ನಂತರ ತನ್ನ ಪಡೆಗಳು ವಾಸ್ತವವಾಗಿ ವಿಶ್ವಸಂಸ್ಥೆಯ ಕೆಲಸಗಾರನನ್ನು ಕೊಂದಿವೆ ಎಂದು ಒಪ್ಪಿಕೊಂಡಿವೆ. ವಿಶ್ವಸಂಸ್ಥೆಯ ಕಟ್ಟಡದಲ್ಲಿ ಶತ್ರುಗಳ ಉಪಸ್ಥಿತಿ ಹೊಂದಲಾಗಿದೆ ಎಂದು ಗ್ರಹಿಸಿ ದಾಳಿ ನಡೆಸಲಾಗಿದೆ ಎಂದು ಕೊನೆಗೂ ಇಸ್ರೇಲ್ ಸೇನೆ ಒಪ್ಪಿಕೊಂಡಿದೆ.ಈ ಪ್ರಾಥಮಿಕ ಸಂಶೋಧನೆ ಮತ್ತು ತನಿಖೆಯಿಂದ ಈ ವಿಷಯ ತಿಳಿಸಿದೆ.

ಈ ಗಂಭೀರ ಘಟನೆಗೆ ಇಸ್ರೇಲ್ ಸೇನೆ ವಿಷಾದ ವ್ಯಕ್ತಪಡಿಸಿದ್ದು ಕಾರ್ಯಾಚರಣೆಯ ಪಾಠಗಳನ್ನು ಕಲಿಯಲು ಮತ್ತು ಭವಿಷ್ಯದಲ್ಲಿ ಇಂತಹ ಘಟನೆಗಳನ್ನು ತಡೆಗಟ್ಟಲು ಹೆಚ್ಚುವರಿ ಕ್ರಮಗಳನ್ನು ಮೌಲ್ಯಮಾಪನ ಮಾಡಲು ಸಂಪೂರ್ಣ ಪರಿಶೀಲನಾ ಪ್ರಕ್ರಿಯೆಗಳನ್ನು ನಡೆಸುವುದನ್ನು ಮುಂದುವರಿಸುತ್ತದೆ. ಎರಡು ತಿಂಗಳ ಕದನ ವಿರಾಮ ಮುರಿದ ನಂತರ ಇಸ್ರೇಲ್ ಹಮಾಸ್ ವಿರುದ್ಧ ತನ್ನ ದಾಳಿಯನ್ನು ಪುನರಾರಂಭಿಸಿದ ಒಂದು ದಿನದ ನಂತರ, ಬಲ್ಗೇರಿಯನ್ ವಿಶ್ವಸಂಸ್ಥೆಯ ಕಾರ್ಯಕರ್ತ ಮರಿನ್ ವ್ಯಾಲೆವ್ ಮರಿನೋವ್ ಅವರನ್ನು ಕೊಂದು ಇತರ ಐದು ವಿಶ್ವಸಂಸ್ಥೆ ಸಿಬ್ಬಂದಿಯನ್ನು ಗಂಭೀರವಾಗಿ ಗಾಯಗೊಳಿಸಿದ ಈ ಘಟನೆ ಸಂಭವಿಸಿದೆ.

ವಿಶ್ವಸಂಸ್ಥೆಯ ಮಹಾ ಪ್ರಧಾನಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಈ ಘಟನೆಯ ಬಗ್ಗೆ ಸಂಪೂರ್ಣ ತನಿಖೆಗೆ ಸೂಚಿಸಿದ್ದಾರೆ. ವಿಶ್ವಸಂಸ್ಥೆಯ ಆವರಣಗಳ ಸ್ಥಳಗಳು ಸಂಘರ್ಷದ ಪಕ್ಷಗಳಿಗೆ ತಿಳಿದಿವೆ, ಅವರು ಅವುಗಳನ್ನು ರಕ್ಷಿಸಲು ಮತ್ತು ಅವುಗಳ ಸಂಪೂರ್ಣ ಉಲ್ಲಂಘನೆ ಮಾಡುವುದನ್ನು ಸಹಿಸಲು ಆಗುವುದಿಲ್ಲ ಎಂದಿದ್ದಾರೆ.

# ಬಸವ ಜಯಂತಿಯಂದು ಪಂಚಾಚಾರ್ಯರ ಯುಗಮಾನೋತ್ಸವ ಆಚರಿಸಿದರೆ ಹೋರಾಟ: ಪಟ್ಟದ್ದೇವರು



ಬೀದರ. ಏ. 26 : ಈ ತಿಂಗಳ 30ರಂದು ಬುಧವಾರ ಕರ್ನಾಟಕರಾಜ್ಯಮಾತ್ರವಲ್ಲದೇ ಇಡೀ ದೇಶ ಬಸವ ಜಯಂತಿ ಆಚರಿಸಲು ಅಣಿಯಾಗಿರುವಾಗ ರಾಜ್ಯದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಬಸವ ಜಯಂತಿ ಜೊತೆಗೆ ಪಂಚಾಚಾರ್ಯರ ಯುಗಮಾನೋತ್ಸವ ಆಚರಿಸಲು ಹೊರಟಿರುವುದು ಸರಿಯಿಲ್ಲ. ಇದನ್ನು ವಾಪಸ್ಸು ಪಡೆಯದಿದ್ದರೆ ಬಸವ ತತ್ವದಡಿ ಗುರ್ತಿಸಿಕೊಂಡಿರುವ ಎಲ್ಲ ಮಠಾಧೀಶರು, ಜಾಗತಿಕ ಲಿಂಗಾಯತ ಮಹಾಸಭೆ ಹಾಗೂ ಬಸವಪರ ಸಂಘಟನೆಗಳಿಂದ ಹೋರಾಟ ನಡೆಸಲಾಗುವುದೆಂದು ಅನುಭವ ಮಂಟಪದ ಅಧ್ಯಕ್ಷರಾದ ನಾಡೋಜ ಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರು ಎಚ್ಚರಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶನಿವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಬಹಳಷ್ಟು ವರ್ಷಗಳಿಂದ ನಾಡಿನಾದ್ಯಂತ ಬಸವಣ್ಣನವರ ಜಯಂತಿ ಆಚರಿಸಿಕೊಂಡು ಬರಲಾಗುತ್ತಿದೆ. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯು ಕೂಡ ಬಸವ ಜಯಂತಿಯಂದು ಅಣ್ಣ ಬಸವಣ್ಣನವರ ಜಯಂತಿ ಆಚರಿಸಿಕೊಂಡು ಬರುತ್ತದೆ. ಆದರೆ ಈ ವರ್ಷ ಬಸವ ಜಯಂತಿ ದಿನದಂದು ಪಂಚಾಚಾರ್ಯರ ಯುಗಮಾನೋತ್ಸವ ಆಚರಿಸುವುದು ಹೊಸ ಸಂಪ್ರದಾಯ ಹಾಕಲು ಮಹಾಸಭೆಯ ರಾಜ್ಯಾಧ್ಯಕ್ಷ ಶಂಕರ ಬಿದರಿ ಹೊರಟಿರುವರು. ಶುಕ್ರವಾರ ರಾತ್ರಿ ತಾನು ಬಿದರಿ ಅವರಿಗೆ ದೂರವಾಣಿ ಮೂಲಕ ಸಂಪರ್ಕಿಸಿ ಅಂದು ಬಸವ ಜಯಂತಿ ಜೊತೆಗೆ ಪಂಚಾಚಾರ್ಯರ ಯುಗಮಾನೋತ್ಸವ ಆಚರಿಸಬೇಡಿ ಎಂದು ಮನವಿ ಮಾಡಿದೆ. ಆದರೂ ಅದಕ್ಕೆ ಬಿದರಿ ಅವರು ಸಕಾರಾತ್ಮಕವಾಗಿ ಸ್ಪಂದಿಸದೇ ಇರುವುದರಿಂದ ಬೀದರ್‌ನಿಂದ ಎಲ್ಲ ಬಸವಾನುಯಾಯಿಗಳು ಸೇರಿಕೊಂಡು ಅಖಿಲ ಭಾರತೀಯ ವೀರಶೈವ ಲಿಂಗಾಯತ ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷ ಶಾಮನೂರು ಶಿವಶಂಕ್ರೆಪ್ಪ, ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರಿಗೆ ಬಸವ ಜಯಂತಿಯಂದು ಪಂಚಾಚಾರ್ಯರ ಯುಗಮಾನೋತ್ಸವ ಆಚರಿಸಕೂಡದೆಂದು ಆಗ್ರಹಿಸುತ್ತೇವೆ ಎಂದರು.

ಶನಿವಾರ ಬೆಳಿಗ್ಗೆ ನಗರದ ಬಸವೇಶ್ವರ ವೃತ್ತದಲ್ಲಿ ಬಸವತತ್ವ ಆಚರಿಸಿಕೊಂಡು ಬರುತ್ತಿರುವ ಮಠಾಧೀಶರು, ಜಾಗತಿಕ ಲಿಂಗಾಯತ ಮಹಾಸಭೆ ಪದಾಧಿಕಾರಿಗಳು, ಬಸವಪರ ಸಂಘಟನೆಗಳು ಸೇರಿ ಈ ಕುರಿತು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಸಿದ್ಧರಾಮಯ್ಯನವರಿಗೆ ಮನವಿ ಸಲ್ಲಿಸಿ, ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಸರ್ಕಾರ ಘೋಷಿಸಿದ ಬಳಿಕ ಇದು ಮೊದಲನೆ ಬಸವ ಜಯಂತಿ ಆಗಿರುವ ಹಿನ್ನೆಲೆ ಅಂದು ಈ ಎರಡು ಜಯಂತಿಗಳು ಒಟ್ಟಿಗೆ ಆಚರಿಸಲು ಅ.ಭಾ.ವಿ.ಲಿ.ಮಹಾಸಭೆಗೆ ಅವಕಾಶ ನೀಡಬಾರದೆಂದು ಒತ್ತಾಯಿಸಿರುವುದಾಗಿ ಹೇಳಿದರು.

ಇನ್ನು ಕಾಲ ಮಿಂಚಿಲ್ಲ. ಶಂಕರ ಬಿದರಿ ಅವರು ಈ ನಿರ್ಣಯ ಕೈಬಿಟ್ಟು, ಕೇವಲ ಅಂದು ಬಸವ ಜಯಂತಿ ಮಾತ್ರ ಆಚರಿಸಿ, ಬೇರೆ ದಿನ ಬೇಕಿದ್ದರೆ ಪಂಚಾಚಾರ್ಯರ ಯುಗಮಾನೋತ್ಸವ ಆಚರಿಸಿಕೊಳ್ಳಿ. ತಮ್ಮ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ಬೀದರ್ ಜಿಲ್ಲೆಯಿಂದ ಬಹುಸಂಖ್ಯಾತ ಬಸವಾನುಯಾಯಿಗಳು ಬೆಂಗಳೂರಿನಲ್ಲಿ ಅಖಿಲ ಭಾರತೀಯ ವೀರಶೈವ ಲಿಂಗಾಯತ ಮಹಾಸಭೆ ಕಚೇರಿ ಮುಂದೆ ಪ್ರತಿಭಟನೆ ಹಮ್ಮಿಕೊಂಡು ಬೇಕಿದ್ದರೆ ಅಲ್ಲಿಯೇ ಬಸವ ಜಯಂತಿ ಆಚರಿಸುತ್ತೇವೆ ಎಂದು ಪಟ್ಟದ್ದೇವರು ಎಚ್ಚರಿಸಿದರು.

ನಮ್ಮ ಮಠದ ಭಕ್ತರೆ ಹೋಮ, ಹವನ ಆಚರಿಸುತ್ತಾರೆ, ಅವರಿಗೆ ತಿಳುವಳಿಕೆ ಕೊರತೆ ಇದೆ: ಪಟ್ಟದ್ದೇವರು

ನಮ್ಮ ಶ್ರೀಮಠದ ಭಕ್ತರೆ ಹೋಮ, ಹವನ ಮಾಡುತ್ತಾರೆ, ಎಲ್ಲ ಮೂಢ ನಂಬಿಕೆಗಳು ಆಚರಿಸುತ್ತಾರೆ. ಗಣೇಶ ಚತುರ್ಥಿ, ನಾಗಪಂಚಮಿ, ಹನುಮಾನ ಜಯಂತಿ ಎಲ್ಲವೂ ಆಚರಿಸುತ್ತಾರೆ. ಅವರಿಗೆ ತಿಳುವಳಿಕೆ ಕೊರತೆ ಇದೆ. ಅರಿವಿನ ಕೊರತೆಯೂ ಹೌದು. ಸ್ವಲ್ಪ ಸ್ವಲ್ಪ ಅವರಲ್ಲಿ ಜಾಗೃತಿ ಉಂಟು ಮಾಡುವ ಕಾರ್ಯ ಮಾಡುತ್ತೇವೆ. ಎಲ್ಲವೂ ಸುಧಾರಿಸುವಲ್ಲಿ ಸ್ವಲ್ಪ ಕಾಲಾವಕಾಶ ಬೇಕಾಗುತ್ತದೆ ಎಂದು ಅನುಭವ ಮಂಟಪದ ಅಧ್ಯಕ್ಷರು ಆಗಿರುವ ಭಾಲ್ಕಿ ಹಿರೇಮಠ ಸಂಸ್ಥಾನದ ಮ.ಘ.ಚ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ವೀರಶೈವ ಲಿಂಗಾಯತ ಮಹಾಸಭೆಯ ಈ ನಿರ್ಧಾರವನ್ನು ಧಿಕ್ಕರಿಸುತ್ತಿರುವ ತಾವುಗಳು ನಿಮ್ಮ ಶಿಷ್ಯಂದಿರು ಆಚರಿಸುವ ಹನುಮ ಜಯಂತಿ, ಗಣೇಶ ಚತುರ್ಥಿಗಳಿಗೆ ಏಕೆ ವಿರೋಧಿಸುತ್ತಿಲ್ಲ? ಎಂಬ ಪತ್ರಕರ್ತರೊಬ್ಬರ ಪ್ರಶ್ನೆಗೆ ಈ ರೀತಿ ಉತ್ತರಿಸಿದರು.

ಬಸವ ಪ್ರಶಸ್ತಿ ಪುರಸ್ಕೃತ ಪೂಜ್ಯ ಸಿದ್ಧರಾಮ ಶರಣರು ಬೆಲ್ದಾಳ, ಬಸವ ಗಂಗೋತ್ರಿ ಬೆಂಗಳೂರಿನ ಪೂಜ್ಯ ಡಾ.ಚನ್ನಬಸವಾನಂದ ಮಹಾಸ್ವಾಮಿಗಳು, ಬಸವ ಸೇವಾ ಪ್ರತಿಷ್ಠಾನದ ಪೂಜ್ಯ ಡಾ.ಗಂಗಾಂಬಿಕೆ ಅಕ್ಕ, ಭಾಲ್ಕಿ ಹಿರೇಮಠ ಸಂಸ್ಥಾನದ ಪೂಜ್ಯ ಮ.ಘ.ಚ ಗುರುಬಸವ ಪಟ್ಟದ್ದೇವರು, ಪೂಜ್ಯ ಶಿವಾನಂದ ಸ್ವಾಮಿಜಿ, ಪೂಜ್ಯ ಸಿದ್ರಾಮೇಶ್ವರ ಸ್ವಾಮಿಗಳು, ವಿವಿಧ ಬಸವಪರ ಸಂಘಟನೆಗಳ ಪ್ರಮುಖರಾದ ಜಯರಾಜ ಖಂಡ್ರೆ, ಶರಣಪ್ಪ ಮಿಠಾರೆ, ಕುಶಾಲರಾವ ಪಾಟೀಲ ಖಾಜಾಪುರ, ಶ್ರೀಕಾಂತ ಸ್ವಾಮಿ, ಶಿವರಾಜ ಪಾಟೀಲ ಅತಿವಾಳ, ಬಸವರಾಜ ಬುಳ್ಳಾ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.



**ಪಂಚಾಚಾರ್ಯರ ಯುಗಮಾನೋತ್ಸವ ಆಚರಣೆಗೆ ನಮ್ಮ ವಿರೋಧವಿಲ್ಲ, ಆದರೆ ಬಸವ ಜಯಂತಿಯಂದು ಆಚರಿಸುವುದು ಬೇಡ: ಬಾಬುವಾಲಿ**

ಪಂಚಾಚಾರ್ಯರ ಯುಗಮಾನೋತ್ಸವ ಆಚರಣೆಗೆ ನಮ್ಮ ತಕರಾರಿಲ್ಲ. ಆದರೆ ಬಸವ ಜಯಂತಿಯಂದು ಪಂಚಾಚಾರ್ಯರ ಯುಗಮಾನೋತ್ಸವ ಆಚರಿಸುವುದು ಸರಿಯಿಲ್ಲ. ಬೇರೆ ದಿವಸ ಬೇಕಿದ್ದರೆ ಆಚರಿಸಲಿ ನಮ್ಮ ಅಭ್ಯಂತರವಿಲ್ಲ ಎಂದು ಭಾರತೀಯ ಬಸವ ಬಳಗದ ರಾಜ್ಯಾಧ್ಯಕ್ಷರಾದ ಬಾಬು ವಾಲಿ ತಿಳಿಸಿದರು.



**ಪಂಚಾಚಾರ್ಯರ ಯುಗಮಾನೋತ್ಸವ ಆಚರಿಸಿ ಗೊಂದಲಕ್ಕೆ ಅವಕಾಶ ನೀಡಬೇಡಿ: ಧನ್ನೂರ್**

ಶತಮಾನಕ್ಕಿಂತ ಪೂರ್ವದಿಂದಲೂ ಅಖಿಲ ಭಾರತೀಯ ವೀರಶೈವ ಲಿಂಗಾಯತ ಮಹಾಸಭೆಯಿಂದ ಬಸವ ಜಯಂತಿ ಆಚರಿಸಿಕೊಂಡು ಬರುತ್ತಿರುವಾಗ ಈ ವರ್ಷ ಪಂಚಾಚಾರ್ಯರ ಯುಗಮಾನೋತ್ಸವ ಆಚರಿಸುವ ಮೂಲಕ ಲಿಂಗಾಯತರಲ್ಲಿ ಗೊಂದಲ ಸೃಷ್ಟಿಸುವುದು ಬೇಡವೆಂದು ಜಾಗತಿಕ ಲಿಂಗಾಯತ ಮಹಾಸಭೆಯ ರಾಜ್ಯ ಉಪಾಧ್ಯಕ್ಷ ಬಸವರಾಜ ಧನ್ನೂರ್ ಆಗ್ರಹಿಸಿದರು.

# ಎಲ್.ಯು.ಬಿ ದೇಶದ ಅಭ್ಯುದಯಕ್ಕಾಗಿ ಶ್ರಮಿಸುತ್ತಿದೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 26: ರಾಷ್ಟ್ರೀಯ ಸ್ವಯಂ ಸೇವಕ ಸಂಘ ದೇಶದ ಪರಮ ಉನ್ನತ ಸ್ಥಾನಕ್ಕಾಗಿ ಸ್ಥಾಪಿಸಲಾಗಿದ್ದು, ಇದರ ಅಡಿಯಲ್ಲಿ ಹತ್ತಾರು ಸಂಸ್ಥೆಗಳು ದೇಶದ ಏಕತೆಗಾಗಿ, ಅಭ್ಯುದಯಕ್ಕಾಗಿ ಶ್ರಮಿಸುತ್ತೇವೆ. ಅಂತಹ ಸಂಸ್ಥೆಗಳಲ್ಲಿ ಲಘು ಉದ್ಯೋಗ ಭಾರತಿ ಕೂಡಾ ಒಂದು ಎಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಕಲಬುರ್ಗಿ ವಿಭಾಗೀಯ ಪ್ರಚಾರಕ ಹಣಮಂತರಾವ್ ಪಾಟೀಲ್ ತಿಳಿಸಿದರು.




ನಗರದ ಕರ್ನಾಟಕ ಕಾಲೇಜಿನ ಸಭಾಂಗಣದಲ್ಲಿ ನಡೆದ ಲಘು ಉದ್ಯೋಗ ಭಾರತಿ 31ನೇ ಸ್ಥಾಪನಾ ದಿವಸ ಹಾಗೂ ಲಘು ಉದ್ಯೋಗ ಭಾರತಿ ಬೀದರ್ ಘಟಕದ ಚಾಲನೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಯುವಕರು 20–25 ಕೋಟಿಯ ವ್ಯವಹಾರ ನಡಸ್ತಿದ್ದಾರೆ ಆದರೆ ಆ ವ್ಯವಹಾರ ಪಾರ್ಟ್ನರ್ಷಿಪ್ ನಲ್ಲಿ ಇರುತ್ತದೆ.

ಪಾರ್ಟ್ನರ್ಷಿಪ್ ವ್ಯವಹಾರಕ್ಕಿಂತ ಸ್ವಂತ ಕಂಪನಿಗಳ ನಿರ್ಮಾಣಕ್ಕೆ ಯುವಕರು ಹೆಚ್ಚು ಒತ್ತು ಕೊಡಬೇಕು.

ನೀವು ಸ್ವಂತ ಕಂಪನಿ ನಿರ್ಮಾಣಕ್ಕೆ ಮುಂದಾದಾಗ ಸರ್ಕಾರ ನಿಮಗೆ ಸಹಾಯ ನೀಡುತ್ತವೆ. ಕೇವಲ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಅಷ್ಟೇ ಅಲ್ಲದೆ ಸಹಕಾರಿ ಬ್ಯಾಂಕ್‌ಗಳಲ್ಲಿಯೂ ಸಹ ಸಹಾಯ ಮಾಡಲಿವೆ.

ಆದರೆ ಎಷ್ಟೋ ಜನಕ್ಕೆ ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರ ನೀಡುವ ಸಹಾಯಹಸ್ತದ ಬಗ್ಗೆ ಮಾಹಿತಿ ಕೊರತೆ ಇದೆ ಆ ಮಾಹಿತಿಯನ್ನ ಪ್ರತಿಯೊಬ್ಬರಿಗೂ ತಿಳಿಸುವ ಕೆಲಸವನ್ನ ಲಘು ಉದ್ಯೋಗ ಭಾರತಿ ಕಳೆದ ಮೂರು ದಶಕಗಳಿಂದ ಮಾಡ್ತಾ ಬಂದಿದೆ ಎಂದರು.

ಚೇಂಬರ್ ಆಫ್ ಕಾಮರ್ಸ್ ನ ಅಧ್ಯಕ್ಷರಾದ ಬಿ.ಜಿ.ಶೇಟಗಾರ ಮಾತನಾಡಿ, ಇಂಡಸ್ಟ್ರಿ ಮಾಡೋದು ಬ್ಯೂಸನ್ಸ್ ಮಾಡಿದಂಗಲ್ಲ, ಎರಡಕ್ಕೂ ಸಾಕಷ್ಟು ವ್ಯತ್ಯಾಸವಿದೆ.

ಇಂಡಸ್ಟ್ರಿ ಮಾಡುವಾಗ ಸ್ವಲ್ಪ ಎಡುವಿದರು ಇರುವ ಆಸ್ತಿಯನ್ನು ಮಾರಿ ಬೀದಿಗೆ ಬರಬೇಕಾಗುತ್ತದೆ.

ಇಂದು ಇಂಡಸ್ಟ್ರಿ ಮಾಡಲು ಸಾಕಷ್ಟು ಸಹಕಾರ ಸಿಗುತ್ತಿದೆ, ಆದರೆ ಸಹಕಾರ ಇದ್ದರೆ ಮಾತ್ರ ಸಾಲದು ಅದರ ಬಗ್ಗೆ ಸಾಕಷ್ಟು ಅಧ್ಯಯನ ಮಾಡಬೇಕು.

ದುಡ್ಡಿದೆ ಎಂದು ಇಂಡಸ್ಟ್ರಿ ಮಾಡಿ ಕೈ ಸುಟ್ಟುಕೊಂಡ ಉದಾಹರಣೆಗಳನ್ನು ನಾನು ಕಣ್ಣಾರೆ ಕಂಡಿದ್ದೇನೆ.

ಇಂತಹ ಸಮಯದಲ್ಲಿ ಲಘು ಉದ್ಯೋಗ ಭಾರತಿ ಸಂಸ್ಥೆ ಸಹಾಯದೊಂದಿಗೆ ಸಹಕಾರವನ್ನು ಸಹ ನೀಡಿ ಸದೃಢ ಭಾರತ ನಿರ್ಮಾಣ ಮಾಡಲು ಪಣ ತೊಟ್ಟಿದೆ ಲಘು ಉದ್ಯೋಗ ಭಾರತಿ ಕಾರ್ಯವನ್ನು ಶ್ಲಾಘಿಸಿದರು.

ನಂತರ ನಗರದ ಖ್ಯಾತ ಉದ್ಯಮಿಗಳಾದ ರಮೇಶ ಹೂಗಾರ ಗಾದಗಿ, ಸಚಿನ್ ಕೊಳ್ಳುರ್, ಅಶೋಕ್ ರಿಜೆಂತಲ್, ಪುನೀತ್ ಸಿಂಗ್ ಅವರನ್ನು ಸನ್ಮಾನಿಸಿ ಗೌರವ ಸಲ್ಲಿಸಲಾಯಿತು.

ಈ ವೇಳೆ ರಾಮಕೃಷ್ಣ ಆಶ್ರಮದ ಜ್ಯೋತಿರ್ಮಯಾನಂದ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿದ್ದರು, ಡಿ.ಐ.ಸಿ ಜಂಟಿ ನಿರ್ದೇಶಕಿ ಸುರೇಖಾ ಮನೊಳಿ, ಹಿಂದೂ ಎಕನಾಮಿಕ್ ಫೋರಮ್ ನ ಬೀದರ್ ಘಟಕದ ಅಧ್ಯಕ್ಷ ಸೋಮಶೇಖರ್ ಪಾಟೀಲ್ ಗಾದಗಿ, ಲಘು ಉದ್ಯೋಗ ಭಾರತಿ ಸ್ಥಾಪಕ ಸದಸ್ಯರಾದ ಡಿ.ವಿ.ಸಿಂಧೂಲ್, ಶಿವರಾಜ್ ಹಲಶೆಟ್ಟಿ, ಲಘು ಉದ್ಯೋಗ ಭಾರತಿ ಬೀದರ್ ಘಟಕದ ಅಧ್ಯಕ್ಷರಾದ ಸಚ್ಚಿದಾನಂದ ಚಿದ್ರೆ, ಕಾರ್ಯದರ್ಶಿ ಚೇತನ್ ಡಬ್ಕೆ, ಉಪಾಧ್ಯಕ್ಷ ಬಸವರಾಜ ಬಂಡೆ, ಜಂಟಿ ಕಾರ್ಯದರ್ಶಿ ಮಂಜುನಾಥ ಹೂಗಾರ, ಕಾರ್ಯಕಾರಿ ಸಮಿತಿ ಸದಸ್ಯ ಪ್ರಥಮೇಶ್ ಹಲಶೆಟ್ಟಿ, ಅಮಯ್ ಸಿಂಧೋಲ್, ರಾಘವೇಂದ್ರ ಪಾಟೀಲ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಪುಸ್ತಕ ಬಹುಮಾನಕ್ಕಾಗಿ ಜಾನಪದ ಕೃತಿಗಳ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ: ಏ.26: ಕರ್ನಾಟಕ ಜಾನಪದ ಅಕಾಡೆಮಿಯು 2024ನೇ ಸಾಲಿನಲ್ಲಿ ದಿನಾಂಕ: 01–01–2024 ರಿಂದ 31–12–2024 ರವರೆಗೆ ಪ್ರಥಮ ಆವೃತ್ತಿಯಲ್ಲಿ ಮುದ್ರಣಗೊಂಡಿರುವ (ತಾಂತ್ರಿಕ ಹಾಗೂ ಪೂರ್ವಭಾವಿ ಪುಟಗಳನ್ನು ಹೊರತುಪಡಿಸಿ) ಕನಿಷ್ಟ 150 ಪುಟಗಳಿಗೂ ಮೇಲ್ಪಟ್ಟಿರುವಂತೆ, ಜನಪದ ಗದ್ಯ, ಜನಪದ ಪದ್ಯ, ಜನಪದ ವಿಚಾರ–ವಿಮರ್ಶೆ–ಸಂಶೋಧನೆ, ಜನಪದ ಸಂಕೀರ್ಣ ಪ್ರಕಾರಗಳ ಕುರಿತು ಅತ್ಯುತ್ತಮ ಜಾನಪದ ಕೃತಿಗಳಿಗೆ ಪುಸ್ತಕ ಬಹುಮಾನ ಯೋಜನೆಯಡಿಯಲ್ಲಿ ಆಯ್ಕೆ ಮಾಡಲು ಜಾನಪದ ಕೃತಿಗಳನ್ನು ಆಹ್ವಾನಿಸಲಾಗಿದೆ ಬೆಂಗಳೂರಿನ ಕರ್ನಾಟಕ ಜಾನಪದ ಅಕಾಡೆಮಿಯ ರಿಜಿಸ್ಟ್ರಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರಣ ಆಸಕ್ತ ಲೇಖಕರು/ಪ್ರಕಾಶಕರು/ಸಂಪಾದಕರು ತಮ್ಮ ಒಂದು ಕೃತಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ ಬೆಂಗಳೂರು–560002 ಇವರಿಗೆ ದಿನಾಂಕ: 20–05–2025 ರೊಳಗಾಗಿ ತಲುಪುವಂತೆ ಖುದ್ದಾಗಿ, ಕೊರಿಯರ್ ಅಥವಾ ಅಂಚೆ ಮೂಲಕ ಸಲ್ಲಿಸಬೇಕು. ಈಗಾಗಲೇ ಪುಸ್ತಕ ಬಹುಮಾನ ಪಡೆದ ಸಂಪಾದಕರು, ಲೇಖಕರು ಮತ್ತೆ ಪುಸ್ತಕ ಬಹುಮಾನ ಯೋಜನೆಗೆ ಕೃತಿಗಳನ್ನು ಕಳುಹಿಸಬಾರದೆಂದು ಅವರು ತಿಳಿಸಿದ್ದಾರೆ.

# ಇಸ್ಲಾಮಿಕ್ ಭಯೋತ್ಪಾದನೆಯ ವಿರುದ್ಧ ಧ್ವನಿ ಎತ್ತಿ




ಮಲ್ಲಮ್ಮನುಡಿವಾರ್ತೆ ಭಾಲ್ಕಿ: ಏ.26: ಕಾಶ್ಮೀರದಲ್ಲಿ ಆತಂಕವಾದಿಗಳು ಪ್ರವಾಸಿಗರ ಮೇಲೆ ನಡೆಸಿದ ದಾಳಿಯನ್ನು ಖಂಡಿಸಿ ಎಬಿವಿಪಿ ವತಿಯಿಂದ ಅಂಬೇಡ್ಕರ್ ವೃತ್ತದಿಂದ ತಹಶೀಲ್ದಾರ್ ಕಚೇರಿವರೆಗೆ ಪ್ರತಿಭಟನೆ ನಡೆಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಮುಖರು, 'ಜಮ್ಮು ಕಾಶ್ಮೀರ ಭಾರತದ ಅವಿಭಾಜ್ಯ ಅಂಗ.

ಕಾಶ್ಮೀರದ ಶಾಂತಿ ಮತ್ತು ಭಾರತದೊಂದಿಗಿನ ಏಕತೆಗೆ ಉಗ್ರರು (ಪ್ರತ್ಯೇಕವಾದಿಗಳು) ತೀವ್ರಸವಾಲುವೊಡ್ಡುತ್ತಿರುವುದು ಕಳವಳಕಾರಿ ಸಂಗತಿ ಆಗಿದೆ. ಕೇಂದ್ರಸರ್ಕಾರ ಉಗ್ರರ, ಉಗ್ರವಾದದ ವಿರುದ್ಧ ವ್ಯಾಪಕ ಕಠಿಣ ಕ್ರಮಗಳನ್ನು ಕೈಗೊಂಡು ತಕ್ಕ ಉತ್ತರ ನೀಡಬೇಕು' ಎಂದು ಆಗ್ರಹಿಸಿದರು. 'ಭಾರತೀಯ ನಾಗರಿಕರೆಲ್ಲರೂ ಒಗ್ಗಟ್ಟಾಗಿ ನಿಲ್ಲಬೇಕು. ಇಸ್ಲಾಮಿಕ್ ಭಯೋತ್ಪಾದನೆಯ ವಿರುದ್ಧ ಧ್ವನಿ ಎತ್ತಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಉಗ್ರರ ದಾಳಿಗೆ ಒಳಗಾಗಿರುವ ಕುಟುಂಬಗಳಿಗೆ ಸಾಂತ್ವನ ನೀಡಿ ಧೈರ್ಯ ತುಂಬಬೇಕು. ನಮ್ಮ ನೆಲದಲ್ಲಿ, ನಮ್ಮ ನಾಗರಿಕರ ಮೇಲಿನ ಇಂತಹ ದಾಳಿಗಳು ಸಹಿಸಲು ಅಸಾಧ್ಯ. ಭಯೋತ್ಪಾದಕರ ವಿರುದ್ಧ ಶೂನ್ಯ ಸಹಿಷ್ಣುತೆಯೊಂದಿಗೆ ಭಯೋತ್ಪಾದನೆಯನ್ನು ಮೂಲದಿಂದ ಕಿತ್ತೊಗೆಯಲು ಕೇಂದ್ರ ಸರ್ಕಾರ ಕ್ರಮಕೈಗೊಳ್ಳಬೇಕು' ಎಂದು ಒತ್ತಾಯಿಸಿದರು. ತಾಲ್ಲೂಕು ಅಧ್ಯಕ್ಷ ವಿಷ್ಣು ಕೋಟೆ, ಈಶ್ವರ ರುಮ್ಮಾ, ಪವನ ಕುಂಬಾರ, ರೇವಣಸಿದ್ಧಯ್ಯ ಸ್ವಾಮಿ, ಪಾಂಡುರಂಗ, ಶಿವಶರಣ ಕೋಟೆ, ಭಾಗ್ಯಶ್ರೀ, ವೈಷ್ಣವಿ, ಶಿವಲೀಲಾ, ರಮ್ಯಾ, ಸಾಕ್ಷಿ, ಪ್ರಜ್ವಲ್, ರಾಹುಲ್, ಅನಿಲ್, ಬಸವರಾಜ ಸೇರಿದಂತೆ ಇತರರು ಇದ್ದರು.

# ಅನುಭವ ಮಂಟಪ-ಬಸವಾದಿ ಶರಣರ ವೈಭವ

## ಕೂಡಲಸಂಗಮದಲ್ಲಿ ಸಾಂಸ್ಕೃತಿಕ ಉತ್ಸವ : ಸಚಿವ ತಿಮ್ಮಾಪೂರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ, ಏ.26– ವಿಶ್ವಗುರು ಬಸವಣ್ಣನವರ ಜಯಂತಿ ಅಂಗವಾಗಿ ಕೂಡಲಸಂಗಮದಲ್ಲಿ ಎಪ್ರೀಲ್ 29 ಹಾಗೂ 30 ಎರಡು ದಿನಗಳ ಕಾಲ ಅನುಭವ ಮಂಟಪ–ಬಸವಾದಿ ಶರಣರ ವೈಭವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.




ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸರಕಾರ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದ್ದು, ಈ ಹಿನ್ನಲೆಯಲ್ಲಿ ಬಸಣ್ಣನವರ ತತ್ವ, ಸಂದೇಶಗಳನ್ನು ಪ್ರಚುರಪಡಿಸುವ ನಿಟ್ಟಿನಲ್ಲಿ ಕೂಡಲಸಂಗಮದಲ್ಲಿ ಎರಡು ದಿನಗಳ ಕಾಲ ಸಾಂಸ್ಕೃತಿಕ ವೈಭವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸಾಂಸ್ಕೃತಿಕ ವೈಭವದಲ್ಲಿ ಮೊದಲ ದಿನ ಎಪ್ರೀಲ್ 29 ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ವರೆಗೆ ವಚನ ಸಾಹಿತ್ಯ – ಸಮಕಾಲಿನ ಸಂವೇದನೆ ಕುರಿತು ವಿಚಾರಗೋಷ್ಠಿ ನಡೆಯಲಿವೆ. ಗೋಷ್ಠಿ–1ರಲ್ಲಿ ಸಾಂಸ್ಕೃತಿಕ ನಾಯಕ ಬಸವಣ್ಣ–ವರ್ತಮಾನದ ಜರೂರು ವಿಷಯ ಕುರಿತು ರಂಜಾನ್ ದುರ್ಗಾ, ಡಾ.ತಾರಿಣಿ ಶುಭದಾಯಿನಿ, ಡಾ.ವಿಕ್ರಂ ವಸಾಜಿ ವಿಷಯ ಮಂಡನೆ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಪ್ರೊ.ಎಸ್.ಜಿ. ಸಿದ್ದರಾಮಯ್ಯ ವಹಿಸುವರು. ಗೋಷ್ಠಿ–2ರಲ್ಲಿ ವಚನ ಸಾಹಿತ್ಯ ಮತ್ತು ಭಾರತದ ಸಂವಿಧಾನ ಕುರಿತು ಡಾ.ಕೆ.ನೀಲಾ, ಪ್ರೊ. ಎಂ.ಎಸ್.ಶೇಖರ್ ಮಂಡನೆ ಮಾಡಲಿದ್ದಾರೆ.

ಗೋಷ್ಠಿ–3ರಲ್ಲಿ ವಚನ ಸಾಹಿತ್ಯ ಮತ್ತು ಮಹಿಳೆ ಕುರಿತು ಡಾ.ಬಸವರಾಜ ಸಾದರ್, ಡಾ.ಸಚಿತಾ ಬನ್ನಾಡಿ, ಡಾ.ಪ್ರಜ್ಞಾ ಮತ್ತಿಹಳ್ಳಿ ವಿಷಯ ಮಂಡನೆ ಮಾಡಿದರೆ, ಗೋಷ್ಠಿ 4ರಲ್ಲಿ ವಿಶ್ವಶಾಂತಿ ಹಾಗೂ ಸಾಮರಸ್ಯ ಕುರಿತು ಡಾ.ಮೀನಾಕ್ಷಿ ಬಾಳಿ, ಡಾ.ಡೊಮಿನಿಕ್, ಡಾ.ಮೈಸೂರು ಉಮೇಶ್ ಮಂಡನೆ ಮಾಡಲಿದ್ದಾರೆ. ಗೋಷ್ಠಿಯ ಅಧ್ಯಕ್ಷತೆಯನ್ನು ಡಾ.ಸವಿತಾ ನಾಗಭೂಷಣ, ಪ್ರೊ.ಕಾಳೇಗೌಡ ನಾಗವಾರ ವಹಿಸಲಿದ್ದಾರೆ ಎಂದು ಸಚಿವರು ತಿಳಿಸಿದರು.

ಎರಡನೇ ದಿನ ಎಪ್ರೀಲ್ 30 ಬೆಳಿಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮದ ಉದ್ಘಾಟಿಸಲಿದ್ದು, ಬಸವ ರಾಷ್ಟ್ರೀಯ ಪುರಸ್ಕಾರ ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆ. ವಿಶ್ವಗುರು ಬಸವಣ್ಣ ಸಾಂಸ್ಕೃತಿಕ ನಾಯಕ ಪುಸ್ತಕವನ್ನು ಉಪಮುಖ್ಯಮಂತ್ರಿ ಡಿ.ಕೆ.ಶವಕುಮಾರ ಬಿಡುಗಡೆ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ ವಹಿಸಲಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಸಭಾಪತಿ ಯು.ಟಿ.ಖಾದರ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಚಿವರಾದ ಶಿವರಾಜ ತಂಗಡಗಿ, ಆರ್.ಬಿ.ತಿಮ್ಮಾಪೂರ ಸೇರಿದಂತೆ ಇತರೆ ಸಚಿವ ಸಂಪುಟದ ಸಚಿವರು, ವಿಧಾನಸಭೆ ಶಾಸಕರು, ವಿಧಾನ ಪರಿಷತ್ ಶಾಸಕರು ಹಾಗೂ ಗಣ್ಯಮಾನ್ಯರು, ಸಾಹಿತಿಗಳು, ವಿದ್ವಾಂಸರು ಭಾಗವಹಿಸಲಿದ್ದಾರೆಂದು ತಿಮ್ಮಾಪೂರ ತಿಳಿಸಿದರು.

30 ರಂದು ಬೆಳಿಗ್ಗೆ ಕೂಡಲಸಂಗಮೇಶ್ವರದೇವಸ್ಥಾನದಿಂದ ಸಭಾಮಂಟಪದವರೆಗೆ ವಿವಿಧ ಜಾನಪದ ಕಲಾತಂಡಗಳ ಮೆರವಣಿಗೆ ಹಾಗೂ 29 ಮತ್ತು 30 ರಂದು ಸಂಜೆ 9 ರಿಂದ ವಿವಿಧ ಸಾಂಸ್ಕೃತಿ ಕಾರ್ಯಕ್ರಮಗಳು ಸಹ ಜರುಗಲಿವೆ. ಈ ಎರಡು ದಿನಗಳ ಕಾಲ ಜರಗುವ ಸಾಂಸ್ಕೃತಿಕ ವೈಭವ ಕಾರ್ಯಕ್ರಮಕ್ಕೆ ನಾಡಿನ ಹಾಗೂ ಜಿಲ್ಲೆಯ ಜನತೆ ಸಾಕಷ್ಟು ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಸಚಿವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಪೀರಪ್ಪ ಮ್ಯಾಗೇರಿ ಉಪಸ್ಥಿತರಿದ್ದರು.

# ಬಸವ ಜಯಂತಿ ಸಂಭ್ರಮದಿಂದ ಆಚರಿಸಿ:ಡಾ.ಬಸವಲಿಂಗ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.26: ಪಟ್ಟಣದಲ್ಲಿ ವಿಶ್ವಗುರು ಬಸವಣ್ಣನವರ ಜಯಂತ್ಯುತ್ಸವ ಅರ್ಥಪೂರ್ಣವಾಗಿ ಆಚರಿಸಲು ಬಸವ ಭಕ್ತರು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.



ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಈಚೆಗೆ ನಡೆದ ಪೂರ್ವಭಾವಿ ಸಭೆಯ ದಿವ್ಯಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. 12ನೆಯ ಶತಮಾನದಲ್ಲಿ ಬಸವಣ್ಣನವರು ವಿಶ್ವಕ್ಕೆ ಸಮಾನತೆ ಸಂದೇಶ ಸಾರಿದ್ದರು. ಜಾತಿರಹಿತ ಸಮಸಮಾಜ ಕಟ್ಟಿದ್ದರು. ಮೇಲುಕೀಳು ಎನ್ನದೇ ಅನುಭವ ಮಂಟಪದಲ್ಲಿ ಎಲ್ಲ ವರ್ಗದವರಿಗೆ ಆಶ್ರಯ ನೀಡಿದ್ದರು.

ಅಂತಹ ಮಹಾತ್ಮರ ವಿಚಾರಧಾರೆ ಜಗದಗಲ ತಲುಪಿಸುವ ಜವಾಬ್ದಾರಿ ಎಲ್ಲ ಬಸವ ಭಕ್ತರ ಮೇಲಿದೆ.

ಪಟ್ಟಣದಲ್ಲಿ ಏ.30 ರಂದು ಆಚರಿಸಲಾಗುವ ಬಸವ ಜಯಂತಿಗೆ ಹಿಂದಿಗಿಂತಲೂ ಹೆಚ್ಚಿನ ಮೆರಗು ಬರಬೇಕು. ಆ ನಿಟ್ಟಿನಲ್ಲಿ ಎಲ್ಲರೂ ಸಿದ್ಧತೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿದ್ದರು. ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷರಾದ ಸಿದ್ರಾಮಪ್ಪ ವಂಕೆ, ಚಂದ್ರಕಾಂತ ಪಾಟೀಲ್, ಪ್ರಮುಖರಾದ ಪ್ರಕಾಶ ಮಾಶೆಟ್ಟೆ, ಕಿರಣ ಖಂಡ್ರೆ, ಅಶೋಕ ಬಾವುಗೆ, ಡಾ.ಅಮಿತ ಅಷ್ಟೂರೆ, ಗುಂಡಪ್ಪ ಸಂಗಮಕರ್, ಸಂತೋಷ ಹಡಪದ, ರೇಖಾ ಮಹಾಜನ, ಮಲ್ಲಮ್ಮ ಆರ್ ಪಾಟೀಲ್, ಸುನಿತಾ ಮಮ್ಮಾ ಸೇರಿದಂತೆ ಹಲವರು ಇದ್ದರು.

**ಸ್ವಾಗತ ಸಮಿತಿಗೆ ಆಯ್ಕೆ**

ಇದೇ ವೇಳೆ ಬಸವ ಜಯಂತಿ ಅರ್ಥಪೂರ್ಣ ಆಚರಣೆಗೆ ಸ್ವಾಗತ ಸಮಿತಿ ರಚಿಸಲಾಯಿತು. ಸ್ವಾಗತ ಸಮಿತಿ ಅಧ್ಯಕ್ಷರನ್ನಾಗಿ ಶಿವು ಲೋಖಂಡೆ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಆಯ್ಕೆಯಾದ ಶಿವು ಲೋಖಂಡೆ ಅವರನ್ನು ಉಭಯ ಪೂಜ್ಯರು ಸನ್ಮಾನಿಸಿ, ಆಶೀರ್ವದಿಸಿದರು.

# ಮಾವು ಹಣ್ಣು ಮಾಗಿಸುವ ನೂತನ ತಂತ್ರಜ್ಞಾನ : ರೈತರಿಗೆ ವರದಾನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಕೊಪ್ಪಳಜಿಲ್ಲೆಯಾದ್ಯಂತ ಮಾವು ಬೆಳೆ ಈಗ ಕಟಾವಿಗೆ ಸಿದ್ದವಾಗಿದೆ. ರೈತರಿಗೆ ಉತ್ತಮ ಬೆಲೆ ದೊರೆಯುವ ನಿರೀಕ್ಷೆಯಿದ್ದು, ವೈಜ್ಞಾನಿಕವಾಗಿ ಹಣ್ಣು ಮಾಗಿಸಿದಲ್ಲಿ ಹೆಚ್ಚಿನ ಲಾಭ ಪಡೆಯಬಹುದಾಗಿದೆ ಎಂದು ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಜ್ಞಾನಿಗಳು ರೈತರಿಗೆ ಸಲಹೆ ನೀಡಿರುತ್ತಾರೆ.

ಮಾವು ಕಟಾವು ಮೊದಲು ರೈತರು ಮ್ಯಾಚುರಿಟಿ ಇಂಡೆಕ್ಸ್ ಅಂದರೆ, ಹಣ್ಣಿನ ಆಕಾರ, ಗಾತ್ರ ಮತ್ತು ಬಣ್ಣ ಆಧರಿಸಿ ಹಣ್ಣುಗಳು ಕಟಾವಿಗೆ ಬಂದಿದೆ, ಹಣ್ಣುಗಳ ಬುಜಗಳು ಎತ್ತರವಾಗಿ ಕಿತ್ತಳೆ ಬಣ್ಣಕ್ಕೆ ತಿರುಗುತ್ತವೆ ಎನ್ನುವ ಸೂಚನೆ ಕುರಿತು ತಿಳಿದುಕೊಂಡಿರಬೇಕು. ಸಾಮಾನ್ಯವಾಗಿ ತಳಿಯನ್ನಾಧರಿಸಿ ಕಾಯಿ ಕಚ್ಚಿದ ನಂತರ 15 ರಿಂದ 16 ವಾರಗಳಲ್ಲಿ ಕಾಯಿಗಳು ಕಟಾವಿಗೆ ಬರುತ್ತವೆ. ಈ ಸಮಯದಲ್ಲಿ 6 ರಿಂದ 8 ಕಾಯಿಗಳು ಉದುರಿ ಬೀಳುತ್ತವೆ. ಇವೆಲ್ಲವುಗಳನ್ನು ಗಮನಿಸಿ ಸೂಕ್ತ ಸಮಯದಲ್ಲಿ ಕೊಯ್ಲು ಮಾಡಬೇಕು. ಕಟಾವು ಮಾಡುವಾಗ ಸುಮಾರು 1 ರಿಂದ 1.5 ಇಂಚಿನಷ್ಟು ದೇಟಿನೊಂದಿಗೆ ಕಟಾವು ಮಾಡಿ ನೆರಳಿನಲ್ಲಿ ಆರಿಸಬೇಕು.

ಮಾವು ಮಾಗಿಸುವ ಪ್ಲಾಸ್ಟಿಕ್ ಟೆಂಟ್ ವಿವರಣೆ:ಮಾವು ಮಾಗಿಸುವ ಟೆಂಟುಗಳು ಕಡಿಮೆ ಬೆಲೆಯಲ್ಲಿ ಲಭ್ಯವಿದ್ದು, ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ, ಹೇಸರಘಟ್ಟ, ಬೆಂಗಳೂರುನಲ್ಲಿ ಲಭ್ಯವಿರುತ್ತವೆ(ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸುವ ದೂ.ಸಂ: 080-28446815). ಈ ಟೆಂಟುಗಳು 200 ಮೈಕ್ರಾನ್ ಪ್ಲಾಸ್ಟಿಕ್‌ನಿಂದ ತಯಾರಿಸಲಾಗಿದ್ದು, ಸುಮಾರು 4 ಘನ ಮೀಟರ ಅಳತೆಯುಳ್ಳದ್ದಾಗಿದೆ ಮತ್ತು ಒಂದು ಟನ್‌ನಷ್ಟು ಹಣ್ಣುಗಳನ್ನು ಮಾಗಿಸುವ ಸಾಮರ್ಥ್ಯವನ್ನು ಹೊಂದಿದೆ. ಇದರ ಒಳಗಡೆ ಸುಮಾರು 750 ಕೆ.ಜಿ. ಹಣ್ಣುಗಳನ್ನು ಪ್ಲಾಸ್ಟಿಕ್ ಟ್ರೇಗಳಲ್ಲಿ ಅಳವಡಿಸಿ ನಂತರ 5 ಲೀಟರ್ ನೀರಿಗೆ 10 ಮಿ.ಲೀ. ಇಥ್ರೇಲ್ ಜೊತೆಗೆ 2 ಗ್ರಾಂ. ಸೋಡಿಯಂ ಹೈಡ್ರಾಕ್ಸೈಡ್ ಹರಳುಗಳನ್ನು ಮಿಶ್ರಣಮಾಡಿ ಈ ಟೆಂಟನಲ್ಲಿಟ್ಟು ತಕ್ಷಣ ಗಾಳಿಯಾಡದಂತೆ ಸೀಲ್ ಮಾಡಬೇಕು. ಇದರ ಜೊತೆ-ಗೆ ಒಂದು ಬ್ಯಾಟರಿ ಚಾಲಿತ ಫ್ಯಾನ್ ಇಡುವುದು ಹೆಚ್ಚು ಸೂಕ್ತ. ಈ ರೀತಿ ಉಪಚಾರ ಮಾಡಿದ 24 ಗಂಟೆಗಳ ನಂತರ ಟ್ರೇಗಳನ್ನು ಹೊರಗಡೆ ತೆಗೆದಿಡಬೇಕು.

ಈ ರೀತಿ ಉಪಚರಿಸಿದ ಹಣ್ಣುಗಳು 4 ರಿಂದ 5 ದಿನಗಳಲ್ಲಿ ಏಕರೂಪವಾಗಿ ಪಕ್ವಗೊಳ್ಳುತ್ತವೆ. ಇಂತಹ ಹಣ್ಣುಗಳಿಗೆ ಮಾರುಕಟ್ಟೆಯಲ್ಲಿ ಹೆಚ್ಚಿನ ಬೆಲೆ ಸಿಗುವ ಸಾಧ್ಯತೆ ಇದೆ.

ಈ ಟೆಂಟಗಳ ಬೆಲೆ ಸುಮಾರು ರೂ. 4,000 ಇದ್ದು, ಈಗಾಗಲೇ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ನೆಲೊಗಲ್ ಗ್ರಾಮದ ಶ್ರೀನಿವಾಸ ಜಾಲಿಹಾಳ ರವರ ತೋಟದಲ್ಲಿ ಲಭ್ಯವಿದ್ದು, ಪ್ರಾತ್ಯಕ್ಷಿಕವಾಗಿ ರೈತರು ಇದರ ಬಗ್ಗೆ ಮಾಹಿತಿ ಪಡೆದುಕೊಳ್ಳಬಹುದಾಗಿದೆ . (ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಲು ಮೊ.ಸಂ. 8310431243). ಇಂತಹ ಹಣ್ಣುಗಳನ್ನು ಎ.ಬಿ.ಸಿ. ಎಂದು ವರ್ಗಿಕರಿಸಿ 45x 6 ಥ 17 ಸೆಂ.ಮೀ. ಅಥವಾ 32x27x10 ಸೆಂ.ಮೀ. ಗಾತ್ರದ ಪೆಟ್ಟಿಗೆಗಳಲ್ಲಿ ಮೆತ್ತನೆಯ ಹಾಸು (ಪೇಪರ್ ತುಂಡು ಅಥವಾ ಕಟ್ಟಿಗೆ ಹೊಟ್ಟು) ಹಾಕಿ ದೂರದ ಊರುಗಳಿಗೆ ಸಾಗಿಸಬಹುದಾಗಿದೆ. ನಿಲೋಗಲ್ ಗ್ರಾಮದಲ್ಲಿ ಮಾವು ಮಾಗಿಸುವ ಪ್ಲಾಸ್ಟಿಕ್ ಟೆಂಟ್ ಬಗ್ಗೆ ವಿಧಾನ ಪ್ರಾತ್ಯಕ್ಷಿಕೆ ಯನ್ನು ಮಾಡಿ ರೈತರಿಗೆ ತೋರಿಸಲಾಗಿದ್ದು, ಇದರ ಪ್ರಾಮುಖ್ಯತೆಯನ್ನು ಹೆಚ್ಚಿನ ರೈತರು ತಿಳಿದುಕೊಂಡು ಆದಾಯವನ್ನು ಹೆಚ್ಚಿಸಬೇಕೆಂದು ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಯ ಸದಸ್ಯರಾದ ತಿಮ್ಮಣ್ಣ ಚವಡಿ ಅವರು ತಿಳಿಸಿದ್ದಾರೆ.

# ವಿಧ್ಯಾರ್ಥಿಗಳಲ್ಲಿರುವ ಆಸಕ್ತಿಗಳನ್ನು ಗಮನಿಸಿ, ಗುರಿ ಮೂಡಿಸಿ : ಶಾಸಕ ತುನ್ನೂರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಪ್ರಸಕ್ತ ದಿನಗಳಲ್ಲಿ ಶಾಲಾ ಕಾಲೇಜುಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿ ಹಲವಾರು ಪ್ರತಿಭೆಗಳಿರುತ್ತವೆ, ಶಿಕ್ಷಕರು, ಉಪನ್ಯಾಸಕರು ಅವರ ಆಸಕ್ತಿಗಳನ್ನು ಗಮನಿಸಿ, ಗುರಿ ಮೂಡಿಸಿ, ಸೂಕ್ತ ಪ್ರೋತ್ಸಾಹಿಸಬೇಕು, ಅಂದಾಗ ಅವರು ಗುರಿ ತಲುಪಿ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡುತ್ತಾರೆ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಹೇಳಿದರು.

ನಗರದ ಗ್ರಾಮೀಣ ಪೊಲೀಸ್ ಠಾಣೆ ಹತ್ತಿರ ನೂತನವಾಗಿ ಆರಂಭಗೊಂಡ ಶಾಹಿನ್ ವಿಜನ್ ಪಿಯು ಕಾಲೇಜ್ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಕನ್ನಡ ಮಾಧ್ಯಮ ಅಭ್ಯಾಸ ಮಾಡಿರುವ ವಿದ್ಯಾರ್ಥಿಗಳು ಕೂಡ ಅಪಾರ ಜ್ಞಾನ, ಆತ್ಮವಿಶ್ವಾಸ ಹೊಂದಿರುತ್ತಾರೆ, ಕಾರಣ ಆಡಳಿತ ಮಂಡಳಿಯವರು ಮಾತೃಭಾಷೆ ಕನ್ನಡ ಭಾಷೆಗೂ ಕೂಡ ಹೆಚ್ಚಿನ ಗಮನ ಹರಿಸಬೇಕೆಂದು ಸಲಹೆ ನೀಡಿದರು.

ಶಾಹಿನ್ ಶಿಕ್ಷಣ ಸಂಸ್ಥೆಯವರು ದೇಶದ 23 ರಾಜ್ಯಗಳಲ್ಲಿ 107 ಪಿಯು ಕಾಲೇಜ್‌ಗಳನ್ನು ಸ್ಥಾಪಿಸಿದ್ದಾರೆ, ಅಲ್ಲದೇ ಸೌಧಿ ಅರೇಬಿಯಾದಲ್ಲಿ ಕೂಡ ಕಾಲೇಜ್ ತೆರೆದಿದ್ದಾರೆ, ಇದು ಉತ್ತಮ ಶಿಕ್ಷಣ ನೀಡುವ ಮೂಲಕ ಶೈಕ್ಷಣಿಕ ಕ್ರಾಂತಿ ಮಾಡಿದ್ದಾರೆ, ಅದರ ಲಾಭ ಎಲ್ಲಾ ವಿದ್ಯಾರ್ಥಿಗಳಿಗೆ ಸಿಗಲಿ ಎಂದು ತಿಳಿಸಿದರು.

ಶೈಕ್ಷಣಿಕವಾಗಿ ಹಿಂದುಳಿದಿರುವ ಈ ಭಾಗದಲ್ಲಿ ಬೀದರನ ಶಾಹಿನ್ ಶಿಕ್ಷಣ ಸಂಸ್ಥೆ ಸಹಕಾರದಲ್ಲಿ ಕಾಲೇಜು ಆರಂಭಗೊಂಡಿರುವುದು ಒಳ್ಳೆಯ ಬೆಳವಣಿಗೆ, ಉಪನ್ಯಾಸಕರು ವಿಧ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಜೊತೆಗೆ ಅವರಲ್ಲಿ ಸ್ಪರ್ಧಾ ಮನೋಭಾವನೆ ಮೂಡಿಸಿ, ಮುಂದೆ ಅವರು ಎಂಬಿಬಿಎಸ್, ಜೆಇಇ ಇನ್ನಿತರ ಮಹತ್ವದ ಕೋರ್ಸ್ಗಳಿಗೆ ಸೇರಿ ಸಾಧನೆ ಮಾಡಲು ಸಹಕಾರಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಇಂದು ಎಲ್ಲರೂ ಸ್ವಚ್ಚತೆ ಹಾಗೂ ಪರಿಸರ ರಕ್ಷಣೆ ಬಗ್ಗೆ ಕಾಳಜಿ ವಹಿಸಬೇಕು, ಇದು ವಿಧ್ಯಾರ್ಥಿಗಳ ಅಭ್ಯಾಸದ ಮೇಲೆ ಸಕರಾತ್ಮಕ ಪರಿಣಾಮ ಬೀರುತ್ತದೆ, ಈ ನಿಟ್ಟಿನಲ್ಲಿ ಕಾಲೇಜು ಆಡಳಿತ ಮಂಡಳಿಯವರು ಗಮನ ಹರಿಸಬೇಕೆಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಶಾಹಿನ್ ಶಿಕ್ಷಣ ಸಂಸ್ಥೆ ಬೀದರನ ಅಧ್ಯಕ್ಷರಾದ ಡಾ.ಅಬ್ದುಲ್ ಖದೀರ್ ಮಾತನಾಡಿ, ನಾವೂ ಹಲವಾರು ವರ್ಷಗಳಿಂದ ಶೈಕ್ಷಣಿಕ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದೇವೆ, 10 ವರ್ಷಗಳಿಂದ ಯಾದಗಿರಿ ಜಿಲ್ಲೆಯ ಜನರು ನಿಮ್ಮ ಸಹಭಾಗಿತ್ವದಲ್ಲಿ ಒಳ್ಳೆಯ ಪಿಯುಸಿ ಶಿಕ್ಷಣ ಸಂಸ್ಥೆ ಆರಂಭಿಸಿ ಎಂದು ಹಲವಾರು ಭಾರಿ ಮನವಿ ಮಾಡಿದ್ದರು, ಪರಿಣಾಮ ಜನರ ಆಸೆ ಇಂದು ಈಡೇರಿದೆ, ಬರುವ ದಿನಗಳಲ್ಲಿ ನಮ್ಮ ಸಂಸ್ಥೆಯ ಅನುಭವಿ ಉಪನ್ಯಾಸಕರ ತಂಡದಿಂದ ವಿಧ್ಯಾರ್ಥಿಗಳಿಗೆ ಶಿಕ್ಷಣ ನೀಡುವ ಜೊತೆಗೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿ ಕೆಲಸ ಮಾಡುತ್ತೇವೆ ಎಂದರು.

ಇಂದು ನಮ್ಮ ಮಕ್ಕಳು ಶಿಕ್ಷಣದಲ್ಲಿ ಹಿಂದುಳಿಯಲು ಪ್ರಮುಖ ಕಾರಣಗಳಲ್ಲಿ ಒಂದು ನಾವೂ ಅವರನ್ನು ಅತಿಯಾಗಿ ಪ್ರೀತಿಸಿ, ಅವರ ಬೇಡಿಕೆಗಳನ್ನು ಈಡೇರಿಸುತ್ತಿದ್ದೇವೆ, ಅಲ್ಲದೇ ಅವರು ಅತೀ ಹೆಚ್ಚು ಸಮಯ ಮೊಬೈಲ್‌ಗಳನ್ನು ಬಳಸುತ್ತಿದ್ದಾರೆ, ಇದು ಅವರ ಅಭ್ಯಾಸದ ಮೇಲೆ ನಕರಾತ್ಮಕ ಪರಿಣಾಮ ಬೀರುತ್ತದೆ, ನಾವೆಲ್ಲರೂ ಮೊದಲು ಜಾಗೃತಗಾರಿ ಅದಕ್ಕೆ ಕಡಿವಾಣ ಹಾಕಬೇಕು ಎಂದು ಕಿವಿ ಮಾತು ಹೇಳಿದರು.

ಪಿಯುಸಿ ಫಲಿತಾಂಶದಲ್ಲಿ ಯಾದಗಿರಿ ಜಿಲ್ಲೆ ಕೊನೆಯ ಸ್ಥಾನದಲ್ಲಿ ಬಂದಿದೆ, ಸಮಾಜದ ಶಕ್ತಿಯಾಗಿರುವ ಯುವಕರು ದುಶ್ಚಟಗಳಿಗೆ ದಾಸರಾಗಿ, ಅಭ್ಯಾಸವನ್ನು ಮದ್ಯೆಯೇ ಮೊಟಕುಗೊಳಿಸಿ, ಬದುಕು ಹಾಳು ಮಾಡಿಕೊಳ್ಳುತ್ತಿದ್ದಾರೆ, ಪೋಷಕರು ಕೂಡ ಜಾಗೃತರಾಗಿ ತಮ್ಮ ಮಕ್ಕಳ ದೈನಂದಿನ ಶೈಕ್ಷಣಿಕ ಅಭ್ಯಾಸದ ಚಟುವಟಿಕೆಗಳ ಮೇಲೆ ಗಮನ ಹರಿಸಬೇಕು, ಆಗಾಗ ಸಲಹೆ-ಸೂಚನೆಗಳನ್ನು ನೀಡಿ, ಅವರ ಅಭ್ಯಾಸ ಮಾಡುತ್ತಿರುವ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ, ಅವರ ಅಭ್ಯಾಸದ ಪ್ರಗತಿ ನೋಟ ಪರಿಶೀಲಿಸಬೇಕು ಎಂದು ಸಲಹೆ ನೀಡಿದರು.

ಯಾವುದೇ ಭಾಗದಲ್ಲಿ ಆಗಲೀ ಯಾರೇ ಶಿಕ್ಷಣ ಸಂಸ್ಥೆ ಆರಂಭಿಸಿದರು, ಮೊದಲು ಅವರು ಉತ್ತಮ ಉಪನ್ಯಾಸಕರ ತಂಡ ರಚನೆ ಮಾಡಿ, ವಿಧ್ಯಾರ್ಥಿಗಳಿಗೆ ಇಲ್ಲಿಯೇ ವಾಸ ಮಾಡಲು ವಸತಿ ಗೃಹ ವ್ಯವಸ್ಥೆ ಕಲ್ಪಿಸಬೇಕು, ಅಂದಾಗ ಮಾತ್ರ ಅವರ ಏಕಾಗ್ರತೆ ಸದಾ ಅಭ್ಯಾಸದ ಕಡೆಗೆ ಕೇಂದ್ರಿಕೃತವಾಗಿರುತ್ತದೆ, ನಮ್ಮ ವಿಧ್ಯಾರ್ಥಿಗಳಿಗೆ ಶಿಕ್ಷಣದ ಜೊತೆಗೆ ದೇಶದ ಸಂಸ್ಕೃತಿ ಪರಿಚಯಿಸಬೇಕು, ನಾನು ಗಮನಿಸಿದಂತೆ ಕನ್ನಡದಲ್ಲಿ ಅಭ್ಯಾಸ ಮಾಡಿದ ವಿಧ್ಯಾರ್ಥಿಗಳಲ್ಲಿ ಸಾಮಾನ್ಯ ಜ್ಞಾನ ಹೆಚ್ಚಿರುತ್ತದೆ, ಆಂಗ್ಲ ಮಾಧ್ಯಮದಲ್ಲಿ ಅಭ್ಯಾಸ ಮಾಡಿದ ವಿಧ್ಯಾರ್ಥಿಗಳಿಗಿಂತ ಹೆಚ್ಚು ಕನ್ನಡ ಮಾಧ್ಯಮದ ವಿಧ್ಯಾರ್ಥಿಗಳು ಸಾಧನೆ ಮಾಡಿದ್ದಾರೆ, ಇದು ಸಂತಸ ತಂದಿದೆ ಎಂದು ಮಾತೃ ಭಾಷೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಖುರ್ಷಿದ್ ಅಲಂ ಚೌಧ್ರಿ ಮಾತನಾಡಿ, ಸಂಸ್ಥೆಯ ಭವಿಷ್ಯದ ದಿನಗಳಲ್ಲಿ ಹಮ್ಮಿಕೊಂಡಿರುವ ಉದ್ದೇಶಗಳನ್ನು ವಿವರಿಸಿದರು,

ವೇದಿಕೆ ಮೇಲೆ ನಗರಸಭೆ ಮಾಜಿ ಉಪಾಧ್ಯಕ್ಷ ಚನ್ನಾರಡ್ಡಿ ಬಿಳ್ಹಾರ್, ಅಜೀಜ್ ಅಹ್ಮದ್ ಶಾಹನ್, ಇರ್ಫಾನ್ ಬಾದಲ್, ಖುರ್ಷಿದ್ ಅಕ್ರಮ್ ಚೌಧ್ರಿ, ಮಕ್ಬೂಲ್ ಅಹ್ಮದ್ ಹಕೀಮ್, ಖುರ್ಷಿದ್ ಅಜರ್ ಚೌಧ್ರಿ, ಪ್ರಾಂಶುಪಾಲ ಚನ್ನರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

ವಿಧ್ಯಾರ್ಥಿ ಅಬ್ದುಲ್ ರಹಮಾನ್ ಪ್ರಾರ್ಥಿಸಿದರು, ಉಪನ್ಯಾಸಕ ವೆಂಕಟೇಶ ಚವ್ಹಾಣ ಸ್ವಾಗತಿಸಿದರು, ಡಾ. ಪ್ರೇಮರಾಜ್ ವಂದಿಸಿದರು.

# ಗೋಡಿಹಾಳ ಗ್ರಾಮದಲ್ಲಿ ಬನಸಿರಿ ಪದವಿ ಮಹಾವಿದ್ಯಾಲಯ ವಡಗೇರಾ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರ ಉದ್ಘಾಟನೆ




ಮಲ್ಲಮ್ಮ ನುಡಿ ವಾರ್ತೆ

ವಡಗೇರಾ: ಹಳ್ಳಿಯಲ್ಲಿರುವ ನಮಗೆಲ್ಲರಿಗೂ ಸ್ವಚ್ಚತೆಯ ಬಗ್ಗೆ ಅರಿವು ಮೂಡಿಸುತ್ತಿರುವ ಬನಸಿರಿ ಕಾಲೇಜಿನ ಕಾರ್ಯ ಶ್ಲಾಘನೀಯ ಎಂದು ಪರಮಪೂಜ್ಯ ವೇದಮೂರ್ತಿ ಗೌರಿಶಂಕರ್ ಹಿರೇಮಠ ಹೇಳಿದರು.

ತಾಲೂಕಿನ ಗೋಡಿಯಾಳ ಗ್ರಾಮದಲ್ಲಿ ಶ್ರೀ ವೀರಬನಸಿರಿ ಮಹಾ ಎಜುಕೇಷನ್ ಟ್ರಸ್ಟ್ (ರಿ) ಯಾದಗಿರಿ, ಬನಸಿರಿ ಪದವಿ ಮಹಾವಿದ್ಯಾಲಯ ಹಿರೇ ವಡಗೇರಾ, ರಾಷ್ಟ್ರೀಯ ಸೇವಾ ಯೋಜನೆ ಘಟಕ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ರಾಯಚೂರು ಇವರ ಸಂಯುಕ್ತಾಶ್ರದಲ್ಲಿ ನಡೆದ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ಶಿಬಿರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಳಿಕ ಉಪನ್ಯಾಸಕರಾದ ಎಲ್. ಎನ್ ರೆಡ್ಡಿ ಅವರು ಮಾತನಾಡಿ ಇಂದು ಮನುಷ್ಯ ಪರಿಶ್ರಮಕ್ಕಿಂತ ಯಂತ್ರಪಕರೋಣಗಳ ಮೇಲೆ ಬಹಳ ಅವಲಂಬಿತನಾಗಿದ್ದೇನೆ, ಊಟದಿಂದ ಹಿಡಿದು ತಾನು ಮಾಡುವ ಕೆಲಸಕ್ಕೂ ಮನುಷ್ಯ ಯಂತ್ರಪಕರೋಣಗಳ ಮೇಲೆ ಜೀವನ ಸಾಗಿಸುತ್ತಿದ್ದಾನೆ ಎಂದರು, ಇದನ್ನೆಲ್ಲಾ ತೊಡೆದು ಹಾಕಲು ಮನುಷ್ಯ ಶ್ರಮಜೀವಿಯಾಗಿ ಕೆಲಸ ಮಾಡಬೇಕು ಅಂದಹಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯವೆಂದರು.

ಸೇವೆಯ ಕಡೆಗೆ ವಿದ್ಯಾರ್ಥಿಗಳ ಮನಸ್ಸನ್ನು ಒಲಿಸುವುದು ರಾಷ್ಟ್ರೀಯ ಸೇವಾ ಯೋಜನೆಯ ಉದ್ದೇಶವಾಗಿದೆ. ಕೇವಲ ಓದು ಬರಹ ಹಾಗೂ ಕಲಿಕೆಯಿಂದ ಮಾತ್ರ ರಾಷ್ಟ್ರನಿರ್ಮಾಣ ಮಾಡಲು ಸಾಧ್ಯವಿಲ್ಲ, ಶಿಕ್ಷಣದ ಜೊತೆ-ಗೂ ಪರಿಶ್ರಮವಿರಬೇಕು. ಸೇವೆ ಎನ್ನುವುದು ಜೀವನದ ಪ್ರಮುಖ ಉದ್ದೇಶವಾಗಬೇಕು. ವಿದ್ಯಾರ್ಥಿಗಳು ತಮ್ಮ ವ್ಯಾಸಂಗದ ನಂತರವೂ ಸೇವೆ, ಅನುಕಂಪನದ ಸಾರ್ಥಕ ಜೀವಿಯಾಗಬೇಕು ಎಂದರು.

ಈ ಸಮಯದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಗಾಂದೀಜಿ ಕಂಡ ಕನಸು, ಹಳ್ಳಿಗಳಲ್ಲಿ ಇಂತಹ ಶ್ರಮದಾನ ನಡೆಸಿ ಸ್ವಚ್ಚತೆಯ ಬಗ್ಗೆ ಅರಿವು ಮೂಡಿಸುವ ಕಾರ್ಯವಾಗಬೇಕಿದೆ. ಪ್ರಸ್ತುತ ಡಿಜಿಟಲ್ ಯುಗವಾಗಿದ್ದು ಎಲ್ಲರೂ ಮೊಬೈಲ್ ಬಳಕೆ ಮಾಡುತ್ತಾರೆ ಇದರಿಂದ ಡಿಜಿಟಲ್ ಸೇವೆ ಉಪಯೋಗ ತುರ್ತಾಗಿ ಆಗುತ್ತಿದೆ ಡಿಜಿಟಲ್ ದಿಂದ ಒಳ್ಳೆಯದು ಇದೆ ಕೆಟ್ಟದು ಇದೆ. ಡಿಜಿಟಲ್ ಆನ್ ಲೈನ್ ದಲ್ಲಿ ಹೆಚ್ಚಾಗಿ ಮೋಸ ವಂಚನೆಯ ಪ್ರಕರಣಗಳು ನಡೆಯುತ್ತಿವೆ ಇದರಿಂದ ಸ್ವಲ್ಪ ಎಚ್ಚರಿಕೆಯಿಂದ ಇರಬೇಕು ಎಂದು ಭಾರತ ಸೇವಾದಳದ ಜಿಲ್ಲಾ ಸಂಘಟೀಕಾರದ ಸೈಯದ್ ಕಮರುದ್ದೀನ್ ಹೇಳಿದರು.

ಬನಸಿರಿ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ರಾಚಯ್ಯಸ್ವಾಮಿ ಹಿರೇಮಠ ಮಾತನಾಡಿ ಶ್ರಮದಾನ ಇರಲಾರದು ಬದುಕು ಇಂದು ಹಳ್ಳಿಗಳಲ್ಲೂ ಲಗ್ಗೆ ಇಟ್ಟಿರುವುದರಿಂದ ಜನರು ಯಂತ್ರೋಪಕರಣಗಳ ಅವಲಂಬಿತರಾಗಿದ್ದಾರೆ, ಅದರಲ್ಲೂ ಇಂದು ಹಳ್ಳಿಗಳಲ್ಲಿ ನಮ್ಮ ಹಳೆಯ ಸಂಸ್ಕೃತಿಗಳು ವಂಚಿತವಾಗಿವೆ ಎಂದರು.

ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡ ವಿದ್ಯಾರ್ಥಿ ತನ್ನ ಜೀವನದಲ್ಲಿ ಒಬ್ಬ ಉತ್ತಮ ಆದರ್ಶ ವಿದ್ಯಾರ್ಥಿಯಾಗುತ್ತಾನೆ. ವಿಶೇಷ ಶಿಬಿರಗಳನ್ನು ಏರ್ಪಡಿಸಿದಂತಹ ಸಂದರ್ಭದಲ್ಲಿ ಗ್ರಾಮಾಂತರ ಪ್ರದೇಶದಲ್ಲಿನ ಜನಜೀವನದ ಬದುಕಿನ ಒಡನಾಟದ ಚಿತ್ರಣವನ್ನು ನೇರವಾಗಿ ಕಂಡರಿಯುತ್ತಾನೆ. ಮುಂದೊಂದು ದಿನ ಒಳ್ಳೆಯ ಸ್ಥಾನ ದೊರೆತ ಸಂದರ್ಭದಲ್ಲಿ ಸಾಮಾಜಿಕ ಬದ್ಧತೆಯಿಂದ ಕರ್ತವ್ಯ ನಿರ್ವಹಿಸುವುದರ ಜೊತೆಗೆ ಸಾಮಾಜಿಕ ಸೇವೆ ಸಲ್ಲಿಸುವುದಕ್ಕೆ ಸಾಧ್ಯವಾಗುತ್ತದೆ.

ಇದಕ್ಕೂ ಮೊದಲು ಮಾತನಾಡಿದ ಆಯ್ ಎಲ್ ಪಿ ಜಿಲ್ಲಾ ಸಂಯೋಜಕರಾಧ ನಾನಾಗೌಡ ಮದರಕಲ್ ರವರು ಇಂದು ನಾವೆಲ್ಲರೂ, ಬೆವರು ಸುರಿಸಿ ಶ್ರಮಪಟ್ಟು ಕೆಲಸ ಮಾಡುತ್ತಿಲ್ಲ ಹಾಗಾಗಿ ಮನುಷ್ಯ ಹೆಚ್ಚು ಕಾಲ ಬದುಕುತಿಲ್ಲ, ಮನುಷ್ಯ ಯಾವಾಗ ಪರಿಶ್ರಮ ಕೊಟ್ಟು ಕೆಲಸ ಮಾಡುತ್ತಾನೋ ಹಾಗ ಮಾತ್ರಾ ಬಹಳ ದಿನದವರೆಗೂ ಬದಕಬಹುದೆಂದರು. ವಿದ್ಯಾರ್ಥಿಗಳು ಜೀವನ ರೂಪಿಸಿಕೊಳ್ಳಲು ಸಹಕಾರಿಯಾಗುವ ಎಸ್.ಎಂ.ಎಸ್ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಬಗ್ಗೆಯೂ ಗಮನಹರಿಸಬೇಕು ಎಂದರು.

ವ್ಯಕ್ತಿತ್ವ ಎನ್ನುವುದು ಹುಟ್ಟಿನಿಂದ ಬರುವುದಿಲ್ಲ ಅದನ್ನು ಸಮಾಜದೊಂದಿಗಿನ ಒಡನಾಟದಿಂದ ರೂಪಿಸಿಕೊಳ್ಳಬೇಕು ಸಮಾಜದೊಂದಿಗೆ ಬೆರೆಯಲು ಮತ್ತು ಅದನ್ನು ವೈಜ್ಞಾನಿಕವಾಗಿ ಅರ್ಥೈಸಿಕೊಳ್ಳಲು ಇಂಥಹ ಚಟುವಟಿಕೆಗಳು ಅತ್ಯಂತ ಅವಶ್ಯಕ ಎಂದು ಹೇಳಿದರು.

ಸಸಿಗೆ ನೀರೆಯೇರೇವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಾರ್ಯಕ್ರಮ ಸಾನಿಧ್ಯವನ್ನು ಪರಮಪೂಜ್ಯ ವೇದಮೂರ್ತಿ ಗೌರಿಶಂಕರ್ ಹಿರೇಮಠ ವಹಿಸಿದ್ದರು. ರಾಷ್ಟ್ರೀಯ ಸೇವಾ ಯೋಜನೆ ಸಂಯೋಜಕ ದೇವಿಂದ್ರಪ್ಪ ಸಜ್ಜನ್ ಪ್ರಾಸ್ತಾವಿಕ ಮಾತನಾಡಿದರು, ಬಿ ಎ ಅಂತಿಮ ವರ್ಷದ ವಿದ್ಯಾರ್ಥಿಗಳಾದ ಮರಿಲಿಂಗಮ್ಮ ತಿಮ್ಮಯ್ಯ ನಿರೂಪಿಸಿದರು. ಹಿರಮ್ಮ ಬಸವರಾಜ್ ವಂದಿಸಿದರು, ಮಲ್ಲಮ್ಮ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಗ್ರಾಂ. ಪಂಚಾಯತ ಅಧ್ಯಕ್ಷೆ ಮರೆಮ್ಮ, ಉಪಾಧ್ಯಕ್ಷೆ ಗಂಗಮ್ಮ, ರಾಮನಾಳ, ಸಂಗಪ್ಪ ಭಾಗನ್ನೋರ, ಸಾಬಣ್ಣ ನಾಟೇಕರ್, ಬಸವರಾಜಪ್ಪಗೌಡ ಮಾಲಿ ಪಾಟೀಲ್, ಮಲ್ಲಣ್ಣಗೌಡ ಮಾಲಿ ಪಾಟೀಲ್, ಸಂಗರೆಡ್ಡಿ ಗೌಡ ಹಿರಿಗೌಡ ಸೇರಿದಂತೆ ಊರಿನ ಗ್ರಾಮಸ್ಥರು ಹಾಗೂ ಕಾಲೇಜಿನ ಸಿಬ್ಬಂದಿ ವರ್ಗ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಸನ್ಮಾನ ಸಮಾರಂಭದಲ್ಲಿ ಯುಪಿಎಸ್‌ಸಿ ಸಾಧಕ ಡಾ.ಮಹೇಶ ಅಭಿಮತ

# ಕಠಿಣ ಪರಿಶ್ರಮದಿಂದ ಶ್ರೇಷ್ಠ ಸಾಧನೆ ಸಾಧ್ಯ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ:ಪ್ರತಿಭೆಗಳು ಗುಡಿಸಲಲ್ಲಿ ಮಾತ್ರವಲ್ಲ, ಬೀದಿಯಲ್ಲಿ ಅರಮನೆಯಲ್ಲಿಯೂ ಜನಿಸುತ್ತವೆ. ಆದರೆ ಅವುಗಳ ಸಾಮರ್ಥ್ಯ ಗುರುತಿಸಿ ಅವಕಾಶ ಯೊದಗಿಸಿ ಪ್ರೋತ್ಸಾಹಿಸಿದರೆ ಮಾತ್ರ ಸಾಧನೆಯ ಗುರಿ ತಲುಪಲು ಸಾಧ್ಯ ಎಂದು ಯುಪಿಎಸ್ ಸಿ ಟಾಪರ್ ಮಡಿಕೇಶ್ವರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಮಹೇಶ ಮಡಿವಾಳರ ಹೇಳಿದರು. ಪಟ್ಟಣದ ಕಾಳಿಕಾಮಂದಿರದಲ್ಲಿ ಸ್ಥಳೀಯ ಇಂಡಿಯನ್ ಮೆಡಿಕಲ್ ಅಸೋಸಿಯೇಶನ್ ಹಾಗೂ ವೈದ್ಯರ ಅಸೋಸಿಯೇಷನ್ ವತಿಯಿಂದ ಆಯೋಜಿಸಿದ್ದ ಯುಪಿಎಸ್ ಸಿ ಟಾಪರ್ ಕನ್ನಡಿಗ ಮಡಿಕೇಶ್ವರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಮಹೇಶ ಮಡಿವಾಳರ ಹಾಗೂ ತಾಲ್ಲೂಕಾ ನೂತನ ತಹಶೀಲ್ದಾರರಾಗಿ ಬಂದಿರುವ ವೈದ್ಯೆ ವಿನಯಾ ಹೂಗಾರ ಅವರ ಸನ್ಮಾನ ಕಾರ್ಯಕ್ರಮದಲ್ಲಿ ಶುಕ್ರವಾರ ಸಂಜೆ ಗೌರವ ಸ್ವೀಕರಿಸಿ ಮಾತನಾಡಿದರು.

ಸನ್ಮಾನ ಸ್ವಿಕರಿಸಿ ಮಾತನಾಡಿದ ತಹಶೀಲ್ದಾರಡಾ.ವಿನಯಾಹೂಗಾರ, ಓದಿ ಉನ್ನತ ಹುದ್ದೆ ಪಡೆಯುವ ಸವಾಲಿಗಿಂತ ಪಡೆದ ಹುದ್ದೆಯನ್ನು ಪ್ರಾಮಾಣಿಕವಾಗಿ ನಿರ್ವಹಿಸಿ ಜನರ ಸೇವೆ ಮಾಡಿದಾಗ ಅದು ಸಾಧನೆಯಾಗುತ್ತದೆ ಎಂದರು.

ಅಧ್ಯಕ್ಷತೆಯನ್ನು ವಹಿಸಿದ್ದ ಹಿರಿಯ ವೈದ್ಯ ಡಾ.ವಿಜಯಕುಮಾರ ಕಾರ್ಚಿ , ಈ ಬಾರಿ ಯುಪಿಎಸ್ಸಿ ಟಾಪರುಗಳಲ್ಲಿ ಕನ್ನಡಿಗರ ಸಾಧನೆ ಹೆಮ್ಮೆ ತಂದಿದೆ. ಅದರಲ್ಲಿ ಐವರು ವೈದ್ಯರಿರುವುದು ವಿಶೇಷ ಎಂದ ಅವರು, ದೊರೆತ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಉನ್ನತಿ ಸಾಧಿಸಿ ಎಂದು ಹಾರೈಸಿದರು.

ಡಾ.ಕಮಲಾ ಸಜ್ಜನ ದಂಪತಿ ಹಾಗೂ ಹಸಿರು ಸಂಪದ ಬಳಗದ ವತಿಯಿಂದಲೂ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಭಾರತೀಯ ವೈದ್ಯರ ಒಕ್ಕೂಟದ ತಾಳಿಕೋಟೆ ಘಟಕದ ಅಧ್ಯಕ್ಷೆ ಡಾ.ಗಂಗಾಂಬಿಕಾ ಪಾಟೀಲ, ಕಾರ್ಯದರ್ಶಿ ಡಾ.ಆನಂದ ಭಟ್ಟ, ಆಯುಷ್ ವಿಭಾಗದ ಪ್ರಮುಖ ಡಾ.ಆರ್. ಎಂ.ಕೋಳ್ಯಾಳ. ಇದ್ದರು.

ಸಾಹಿತಿ ಶ್ರೀಕಾಂತ ಪತ್ತಾರ ನಿರ್ವಹಿಸಿದರು. ಡಾ.ಶ್ರೀಶೈಲ ಹುಕ್ಕೇರಿ ಸ್ವಾಗತಿಸಿದರು. ಎಸ್. ಎಸ್.ಗಡೇದ ವಂದಿಸಿದರು

ಹಿರಿಯವೈದ್ಯರಾದಡಾ.ಸರೋಜಿನಿ ಕಾರ್ಚಿ, ಡಾ.ಗುರುರಾಜ ಚಿತ್ತರಗಿ, ಡಾ.ಮಹೇಶ ಪಾಟೀಲ ದಂಪತಿ, ಡಾ.ಸುರೇಶ ಹಂಚಾಟೆ, ಡಾ.ನಜೀರ ಕೋಳ್ಯಾಳ, ಹಸಿರು ಸಂಪದ ಬಳಗದ ಜೈಸಿಂಗ ಮೂಲಿಮನಿ, ವಾಸುದೇವ ಹೆಬಸೂರ, ಪ್ರಭುಗೌಡ ಮದರಕಲ್ಲ, ರಾಜಣ್ಣ ಸೊಂಡೂರ, ಎ.ಎಂ.ಮೂಲಿಮನಿ ,ಸಂಚಾಲಕ ಎಸ್.ಎಸ್.ಗಡೇದ, ಶ್ರೀನಿವಾಸ ಸೋನಾರ, ಅಶೋಕ ಬಳಗಾನೂರ, ಸಂಗಮೇಶ ಪಾಲ್ಕಿ ಇತರರಿದ್ದರು.

ಸಭೆಯ ಆರಂಭದಲ್ಲಿ ಕಾಶ್ಮೀರದ ಪಹಲ್ಗಾಮ್ ನಲ್ಲಿ ಭಯೋತ್ಪಾದಕ ಗುಂಡಿಗೆ ಬಲಿಯಾದ ಭಾರತೀಯರ ಹಾಗೂ ಇಚೇಗೆ ನಿಧನರಾದ ಡಾ.ರಾಜಶೇಖರ ಮುಚ್ಚಂಡಿ ಹಾಗೂ ಡಾ.ಶಿರೀಶ ಒಳಸಂಕರ್ ಅವರಿಗೆ ಮೌನಾಚರಣೆಯ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.



ತಾಳಿಕೋಟಿ ತಾಲೂಕಿನ ತಮದಡ್ಡಿ ಗ್ರಾಮದಲ್ಲಿ ಶ್ರೀ ಗ್ರಾಮದೇವತೆ ಹಾಗೂ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವದ ಅಂಗವಾಗಿ ಬೃಹತ್ ಉಚಿತ ಆರೋಗ್ಯ,ರಕ್ತದಾನ ಹಾಗೂ ಕಣ್ಣಿನ ತಪಾಸಣಾ ಶಿಬಿರ ಶನಿವಾರ ಜರುಗಿತು. ಈ ಶಿಬಿರದಲ್ಲಿ ತಾಲೂಕ ಆರೋಗ್ಯಾಧಿಕಾರಿ ಡಾ.ಸತೀಶ ತಿವಾರಿ,ಡಾ. ಎಸ್.ಬಿ.ಹುಕ್ಕೇರಿ,ಡಾ. ಗಂಗಾಂಬಿಕಾ ಪಾಟೀಲ,ಅನುಗ್ರಹ ಆಸ್ಪತ್ರೆಯ ಡಾ.ಪ್ರವೀಣ ಹಿರೇಮಠ, ಡಾ.ಮಹೇಶ ಪಾಟೀಲ,ಡಾ.ಶಾಂತಾ ಇಬ್ರಾಹಿಂಪೂರ,ಡಾ.ಅಕ್ಷಯ್ ತಾಳಿಕೋಟಿ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ತಮದಡ್ಡಿ,ಕೊಣ್ಣೂರಿನ ಸಿಬ್ಬಂದಿಗಳು ಆರೋಗ್ಯ ಸೇವಾ ಕಾರ್ಯ ನಿರ್ವಹಿಸಿದರು. (ಮಲ್ಲಮ್ಮ ನುಡಿ ಚಿತ್ರ)

# ಪ್ರತಿಭಾವಂತ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ 6ನೇ ತರಗತಿ ವಿದ್ಯಾಭ್ಯಾಸ ಮಾಡಲು ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 25- 2025-26ನೇ ಸಾಲಿನ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರತಿಭಾವಂತ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ 6ನೇ ತರಗತಿ ವಿದ್ಯಾಭ್ಯಾಸ ಮಾಡಲು ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಸಿದ್ದಣ್ಣ ಅಣಬಿ ಅವರು ತಿಳಿಸಿದ್ದಾರೆ.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಸಾಮಾಜಿಕವಾಗಿ, ಆರ್ಥಿಕವಾಗಿ ಹಿಂದುಳಿದ ಪರಿಶಿಷ್ಟ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳನ್ನು 6ನೇ ತರಗತಿಗಾಗಿ ದಾಖಲಾತಿ ಮಾಡಿಕೊಂಡು ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಜಿಲ್ಲೆಯಲ್ಲಿರುವ ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶ ಅರ್ಜಿ ಆಹ್ವಾನಿಸಿದೆ. ಅರ್ಹ ವಿದ್ಯಾರ್ಥಿಗಳು ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತಾಲ್ಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಯಿಂದ ಅರ್ಜಿಗಳನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ತಾಲ್ಲೂಕ ಮಟ್ಟದ ಕಛೇರಿಗಳಲ್ಲಿ 2025ರ ಮೇ 3 ರಂದು ಸಂಜೆ 5 ಗಂಟೆಯ ಒಳಗೆ ಅರ್ಜಿ ಸಲ್ಲಿಸಬೇಕು. 2025ರ ಮೇ 9 ರಂದು ಅರ್ಹತಾ ಪ್ರವೇಶ ಪರೀಕ್ಷೆ ಡಯಟ್ ಮೂಲಕ ನಡೆಯಲಿದೆ. 2025ರ ಮೇ 13 ರಂದು ಫಲಿತಾಂಶ ಪ್ರಕಟ ಹಾಗೂ 2025ರ ಮೇ 17 ರಂದು ಅರ್ಹ ವಿದ್ಯಾರ್ಥಿಗಳನ್ನು ಕೌನ್ಸಲಿಂಗ್ ಮೂಲಕ ಆಯ್ಕೆ ಮಾಡಲಾಗುವುದು. 2025ರ ಮೇ 31 ರಂದು ಆಯ್ಕೆಯಾದ ಶಾಲೆಗೆ ದಾಖಲಾತಿ ಸಲ್ಲಿಸಬೇಕು. ಅಪೂರ್ಣಗೊಂಡ ಹಾಗೂ ಅವಧಿ ಮೀರಿದ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಷರತ್ತುಗಳು : 2025-26ನೇ ಸಾಲಿನ ಪ್ರತಿಷ್ಠಿತ ಶಾಲೆಗಳಿಗೆ ಪ್ರತಿಭಾವಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಉಚಿತ ಅರ್ಹತಾ ಪರೀಕ್ಷಾ ಮೂಲಕ ಆಯ್ಕೆ ಮಾಡಲಾಗುವುದು. 5ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕಗಳಿಸಿದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಆಯ್ಕೆಗೊಂಡ ವಿದ್ಯಾರ್ಥಿಗಳನ್ನು ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ ದಾಖಲು ಮಾಡಲಾಗುವುದು. 6ನೇ ತರಗತಿಗೆ ಮಾತ್ರ ಜಿಲ್ಲೆಗೆ ನಿಗದಿಪಡಿಸಿದ ಗುರಿಗಳಿಗನುಗುಣವಾಗಿ ಪ್ರವೇಶಾವಕಾಶವನ್ನು ನೀಡಲಾಗುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಪರಿಶಿಷ್ಟ ವರ್ಗಕ್ಕೆ ಸೇರಿದವರಾಗಿದ್ದು, ಕುಟುಂಬದ ವಾರ್ಷಿಕ ಆದಾಯ 2 ಲಕ್ಷ ರೂ.ಗಳ ಒಳಗಿರಬೇಕು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ದೃಢೀಕೃತ ಅಂಕಪಟ್ಟಿಯನ್ನು ಅರ್ಜಿ ಜೊತೆ ಕಡ್ಡಾಯವಾಗಿ ಸಲ್ಲಿಸಬೇಕು. ವಿದ್ಯಾರ್ಥಿಗಳ ಶುಲ್ಕ ಮತ್ತು ನಿರ್ವಹಣಾ ವೆಚ್ಚವನ್ನು ಸರ್ಕಾರದಿಂದ ಪ್ರತಿಷ್ಠಿತ ಶಾಲೆಗಳಿಗೆ ಒದಗಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಡಗಿಲ್ ಹಾರುತಿ: ಮಳೆಗಾಳಿಗೆ ಧರೆಗುರುಳಿದ ವಿದ್ಯುತ್ ಕಂಬ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.26-ಈಚೆಗೆ ಸುರಿದ ಮಳೆ, ಗಾಳಿಗೆ ವಿದ್ಯುತ್ ಹಡಗಿಲ್ ಹಾರುತಿ ಗ್ರಾಮದಲ್ಲಿ ವಿದ್ಯುತ್ ಕಂಬ ಧರೆಗುರುಳಿದೆ.

ಗ್ರಾಮದ ಶಂಕರ ಬಸಣ್ಣ ಬಿಳಾಳ ಅವರ ಜಮೀನಿನಲ್ಲಿ ಮಳೆ, ಗಾಳಿಯಿಂದ ವಿದ್ಯುತ್ ಕಂಬ ನೆಲಕ್ಕುರುಳಿದೆ. ವಿದ್ಯುತ್ ಕಂಬ ನೆಲಕ್ಕುರುಳಿ ಒಂದು ವಾರವಾದರೂ ಜೆಸ್ಕಾಂ ಈ ಬಗ್ಗೆ ನಿಗಾವಹಿಸುತ್ತಿಲ್ಲ ಎಂದು ಆರೋಪ ಕೇಳಿ ಬಂದಿದೆ.

ಸಂಬಂಧಪಟ್ಟವರು ಈ ಬಗ್ಗೆ ನಿಗಾವಹಿಸಿ ಧರೆಗುರಿಳಿದ ವಿದ್ಯುತ್ ಕಂಬ ತೆಗೆದು ಬೇರೆ ವಿದ್ಯುತ್ ಕಂಬ ಅಳವಡಿಸಲು ಅಗತ್ಯವಾದ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

# 2024ನೇ ಸಾಲಿನ ಪುಸ್ತಕ ಬಹುಮಾನಕ್ಕಾಗಿ ಜಾನಪದ ಕೃತಿಗಳ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.26–ಕರ್ನಾಟಕ ಜಾನಪದ ಅಕಾಡೆಮಿಯು 2024 ನೇ ಸಾಲಿನಲ್ಲಿ ದಿನಾಂಕ:01.01.2024 ರಿಂದ 31.12.2024ರವರೆಗೆ ಪ್ರಥಮ ಆವೃತ್ತಿಯಲ್ಲಿಮುದ್ರಣಗೊಂಡಿರುವ (ತಾಂತ್ರಿಕ ಹಾಗೂ ಪೂರ್ವಭಾವಿ ಪುಟಗಳನ್ನು ಹೊರತುಪಡಿಸಿ) ಕನಿಷ್ಟ 150 ಪುಟಗಳಿಗೂ ಮೇಲ್ಪಟ್ಟಿರುವಂತೆ, ವಿವಿಧ ನಾಲ್ಕುಪ್ರಕಾರಗಳ ಅತ್ಯುತ್ತಮ ಜಾನಪದಕೃತಿಗಳಿಗೆಬಹುಮಾನ ನೀಡುವ ಯೋಜನೆಯಡಿ ಜಾನಪದ ಕೃತಿಗಳನ್ನು ಪುಸ್ತಕ ಬಹುಮಾನಕ್ಕಾಗಿ ಆಹ್ವಾನಿಸಿದೆ.

ಲೇಖಕರು, ಪ್ರಕಾಶಕರು, ಸಂಪಾದಕರು ತಮ್ಮ1ಕೃತಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು–560002 ಇವರಿಗೆ ಮೇ 20 ರೊಳಗೆ ತಲುಪುವಂತೆ ಖುದ್ದಾಗಿ, ಕೊರಿಯರ್ ಅಥವಾ ಅಂಚೆ ಮೂಲಕ ಕಳುಹಿಸಿಕೊಡಲು ಕೋರಿದೆ. ಈ ಪುಸ್ತಕವು ತಜ್ಞರಿಂದ ಪ್ರಕಾರವಾರು ಆಯ್ಕೆಯಾದಲ್ಲಿ, ನಂತರ ಪುಸ್ತಕ ಬಹುಮಾನಕ್ಕೆ ಲೇಖಕರಿಂದ ಉಳಿದಂತೆ 03 ಪ್ರತಿಗಳನ್ನು ಮೌಲ್ಯಮಾಪಕರ ಪರಿಶೀಲನೆಗೆತರಿಸಿಕೊಳ್ಳಲಾಗುವುದು.

ಪ್ರಕಾರಗಳು: ಜನಪದ ಗದ್ಯ, ಜನಪದ ಪದ್ಯ, ಜನಪದ ವಿಚಾರ–ವಿಮರ್ಶೆ–ಸಂಶೋಧನೆ ಮತ್ತು ಜನಪದ ಸಂಕೀರ್ಣ. ವಿ.ಸೂ: ಈಗಾಗಲೇ ಪುಸ್ತಕ ಬಹುಮಾನ ಪಡೆದ ಸಂಪಾದಕರು /ಲೇಖಕರು ಮತ್ತೆ ಪುಸ್ತಕ ಬಹುಮಾನ ಯೋಜನೆಗೆ ಕೃತಿಗಳನ್ನು ಕಳುಹಿಸಬಾರದು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಜಾನಪದ ಅಕಾಡೆಮಿ ಕನ್ನಡ ಭವನ, 2 ನೇ ಮಹಡಿ ಜೆ.ಸಿ.ರಸ್ತೆ, ಬೆಂಗಳೂರು–560002 ಅಥವಾ ದೂ. 080 – 22215509 ಗೆ ಸಂಪರ್ಕಿಸಬಹುದು ಎಂದು ಕನ್ನಡ ಜಾನಪದ ಅಕಾಡೆಮಿಯ ರಿಜಿಸ್ಟ್ರಾರ್ ಅವರು ತಿಳಿಸಿದ್ದಾರೆ.

# ಸಾರ್ವಜನಿಕರು ಯಾವುದೇ ಜ್ವರವಿರಲಿ, ರಕ್ತಲೇಪನ ಪರೀಕ್ಷೆ ಮಾಡಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.26:ಸಾರ್ವಜನಿಕರು ಯಾವುದೇ ಜ್ವರವಿರಲಿ, ಮೊದಲು ರಕ್ತಲೇಪನ ಪರೀಕ್ಷೆ ಮಾಡಿಸಬೇಕು. ಶೂನ್ಯ ಮಲೇರಿಯಾ ಗುರಿ ತಲುಪಲು ಮತ್ತು ರೋಗ ತಡೆಗಟ್ಟಲು ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾ ಕಚೇರಿ ವತಿಯಿಂದ ವಿಶ್ವ ಮಲೇರಿಯಾ ದಿನಾಚರಣೆ–2025 ಅಂಗವಾಗಿ "ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ. ಮರು ಹೂಡಿಕೆ ಮಾಡಿ, ಮರು ಕಲ್ಪನೆ ಮಾಡಿ, ಮರು ಉತ್ತೇಜನ ನೀಡೋಣ" ಎಂಬ ಘೋಷವಾಕ್ಯದೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿ ಆವರಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ಮಲೇರಿಯಾ ರೋಗಕ್ಕೆ ಉಚಿತವಾಗಿ ರಕ್ತ ಪರೀಕ್ಷೆ ಹಾಗೂ ಸೂಕ್ತ ಚಿಕಿತ್ಸೆ ನೀಡಲಾಗುತ್ತದೆ. ಇದರ ಸದುಯೋಗಪಡೆದುಕೊಳ್ಳಬೇಕುಎಂದು ತಿಳಿಸಿದರು. ಜಿಲ್ಲಾ ರೋಗವಾಹಕ ಆಶ್ರಿತರೋಗಗಳನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಮಾತನಾಡಿ, ಮಲೇರಿಯಾ ಜ್ವರವು ಪ್ಲಾಸ್ಮೋಡಿಯಂ ಎಂಬ ಪರಾವಲಂಭಿ ಸೂಕ್ಷ್ಮಾಣುವಿನಿಂದ ಉಂಟಾಗಬಹುದಾಗಿದ್ದು, ಹೆಣ್ಣು ಅನಾಫಿಲೀಸ್ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. ಚಳಿ, ನಡುಕ, ಬಿಟ್ಟು ಬಿಟ್ಟು ಜ್ವರ ಬರುವುದು, ವಾಕರಿಕೆ, ಮೈ ಬೆವರುವುದು ಲಕ್ಷಣಗಳು ಕಂಡು ಬಂದಲ್ಲಿ ಮಲೇರಿಯಾ ಜ್ವರ ಇರಬಹುದು ಎಂದು ಭಾವಿಸಿ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ರಕ್ತ ಪರೀಕ್ಷೆಗೆ ಒಳಪಟ್ಟು ಸೂಕ್ತ ಉಚಿತ ಚಿಕಿತ್ಸೆ ಪಡೆಯಬೇಕು ಎಂದು ಹೇಳಿದರು.

ಮಲೇರಿಯಾ ಪ್ರಕರಣಗಳು ಕಂಡು ಬಂದ ಸಂದರ್ಭದಲ್ಲಿ ಮನೆಯ ಸುತ್ತಮುತ್ತಲು ಆರೋಗ್ಯ ಇಲಾಖೆಯಿಂದ ಕೈಗೊಳ್ಳುವ ಕೀಟನಾಶಕ ಸಿಂಪರಣೆಗೆ ಸಾರ್ವಜನಿಕರು ಅವಕಾಶ ಸಹಕರಿಸಬೇಕು. ಸ್ವಯಂ ರಕ್ಷಣಾ ಕ್ರಮಗಳಾದ ಮಲಗುವಾಗ ಸೊಳ್ಳೆ ಪರದೆ ಬಳಕೆ ಮಾಡಬೇಕು. ಕಿಟಕಿಗಳಿಗೆ ಸೊಳ್ಳೆಗಳು ನುಸುಳದಂತೆ ಜಾಲರಿ ಅಳವಡಿಸುವುದು. ಆರೋಗ್ಯ ಇಲಾಖೆಯಿಂದ ನೀಡಲ್ಪಡುವ ಲಾರ್ವಹಾರಿ ಗಪ್ಪಿ ಮತ್ತು ಗಂಬೂಷಿಯಾ ಮೀನುಗಳನ್ನು ಶಾಶ್ವತವಾಗಿ ನೀರು ನಿಲ್ಲುವ ಸ್ಥಳಗಳಲ್ಲಿ ಬಿಡಲು ಉಚಿತವಾಗಿ ಪಡೆಯಬಹುದಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ.ವೀರೇಂದ್ರಕುಮಾರ್, ಜಿಲ್ಲಾ ವಿಬಿಡಿಸಿ ಸಮಾಲೋಚಕರಾದ ಪ್ರತಾಪ್.ಹೆಚ್., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ಹಿರಿಯ ಆರೋಗ್ಯನಿರೀಕ್ಷಣಾಧಿಕಾರಿಗಳಾದ ಶಕುಂತಲಾ ಮ್ಯಾಳಿ, ನಾಗರಾಜ, ರವೀಂದ್ರ ಜಿನಗ, ಆರೋಗ್ಯ ನಿರೀಕ್ಷಣಾಧಿಕಾರಿಮರಿಬಸವನಗೌಡ, ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳಾದ ಅಂಭುಜ, ನಂದಿನಿ, ಶಕುಂತಲಾ, ವಿಬಿಡಿಸಿ ಸಿಬ್ಬಂದಿ ವರ್ಗದವರು, ತಾಲೂಕು ಆರೋಗ್ಯಾಧಿಕಾರಿಗಳ ಸಿಬ್ಬಂದಿಗಳು ಹಾಗೂ ಮಲೇರಿಯಾ ಲಿಂಕ್ ವಾಲಂಟೀಯರ್ಸ್ ಮತ್ತು ಇತರೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಸಿಬ್ಬಂದಿಗಳು ಹಾಜರಿದ್ದರು. ಜಾಗೃತಿ ಜಾಥವು ಬಳ್ಳಾರಿನಗರದಪ್ರಮುಖಬೀದಿಗಳಲ್ಲಿ ಹಾಗೂ ವಾರ್ಡ್‌ಗಳಲ್ಲಿ ಸಂಚರಿಸಿ ಸಾರ್ವಜನಿಕರಿಗೆ ಮಲೇರಿಯಾ ರೋಗದ ಕುರಿತು ಮಾಹಿತಿ ನೀಡಲಾಯಿತು.

# ಅರಮನೆ ಆವರಣದಲ್ಲಿ ಕಾಫಿ ಘಮಲಿನ ಕಲರವ 7 ಬೀನ್ ಟೀಮ್ ವೆಬ್‌ಸೈಟ್ ಅನಾವರಣ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಬೆಂಗಳೂರುಅರಮನೆ ಆವರಣದಲ್ಲಿ ನಡೆಯುತ್ತಿರುವ ಮೂರು ದಿನಗಳ ಅಂತಾರಾಷ್ಟ್ರೀಯ ಕಾಫಿ ಮೇಳದಲ್ಲಿ 7ಬೀನ್ ಟೀಮ್ ಅಭಿವೃದ್ಧಿಪಡಿಸಿರುವ ವೆಬ್‌ಸೈಟ್‌ನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಅನಾವರಣ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬ್ರೆಜಿಲ್ ಮತ್ತು ವಿಯೆಟ್ನಾಂಗಿಂತಲೂ ನಮ್ಮ ರಾಜ್ಯದ ಮಲೆನಾಡಿನ ಕಾಫಿ ಸೊಗಡು ಬೇರೆಯೇ ಇದೆ. ಇದನ್ನು ಸರಿಯಾದ ರೀತಿಯಲ್ಲಿ ಮಾರುಕಟ್ಟೆ ಮಾಡುವ ವ್ಯವಸ್ಥೆ ಸಂಘಟಿತವಾಗಿ ನಡೆಯಬೇಕಾಗಿದೆ ಎಂದರು. ಕಾಫಿ ಕೃಷಿ ಮತ್ತು ಅದರ ಇಳುವರಿ ಉತ್ತಮಪಡಿಸುವ ನಿಟ್ಟಿನಲ್ಲಿ 7ಬೀನ್ ಟೀಮ್ ಮಾಡುತ್ತಿರುವ ಪ್ರಯತ್ನ ಶ್ಲಾಘನೀಯ. ಪ್ರಗತಿದಾಯಕ ಚಟುವಟಿಕೆಗಳ ಕಡೆಗೆ ಎಲ್ಲಾ ಬೆಳೆಗಾರರು ಗಮನ ನೀಡಿದರೆ ಗುರಿ ಸಾಧನೆ ಮಾಡಲು ಸಾಧ್ಯವಿದೆ ಎಂದರು. ಪ್ರತಿ ವರ್ಷವೂ ಕಾಫಿ ಮೇಳವನ್ನು ನಡೆಸುವ ಮೂಲಕ ಕಾಫಿಯ ವಿಭಿನ್ನ ಬಳಕೆಯ ಬಗ್ಗೆ ಮತ್ತು ಉಪಕರಣಗಳ ಬಳಕೆಯ ಬಗ್ಗೆ ಮಾಹಿತಿ ಜ್ಞಾನವನ್ನು ನೀಡುವಂತಾದರೆ, ಅದು ಮಾರುಕಟ್ಟೆ ವ್ಯಾಪ್ತಿಯನ್ನು ವಿಸ್ತಾರ ಮಾಡಲು ಸಾಧ್ಯವಾಗುತ್ತದೆ. ಕಾಫಿ ಬಳಕೆದಾರರ ಸಮೂಹವೂ ವೃದ್ಧಿಯಾಗಲಿದೆ ಎಂದು ತಗಡೂರು ಹೇಳಿದರು. ಇದೇ ಸಂದರ್ಭದಲ್ಲಿ ಮಾತನಾಡಿದ ಡಾ.ಎನ್.ಕೆ.ಪ್ರದೀಪ್, ಮಣ್ಣು ಪರೀಕ್ಷೆಯಿಂದ ಹಿಡಿದು, ಹಲವು ಹಂತದ ತರಬೇತಿಯನ್ನು ನೀಡುವ ವ್ಯವಸ್ಥೆ ಮಾಡಲಾಗಿದೆ. ರಾಜ್ಯದಲ್ಲಿ ಸದ್ಯ 3.50 ಲಕ್ಷ ಟನ್ ಇಳುವರಿಯನ್ನು 7 ಲಕ್ಷ ಟನ್‌ಗೆ ಹೆಚ್ಚಳ ಮಾಡಲು ಉದ್ದೇಶಿಸಿ, ನಮ್ಮ ತಂಡ ಕೆಲಸ ಮಾಡುತ್ತಿದೆ ಎಂದರು. ಇದೇ ಸಂದರ್ಭದಲ್ಲಿ 7ಬೀನ್ ಗೈಡ್ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಐಐಸಿಎ ಛೇರ ಮ್ಯಾ ನ್ ಡಿ.ಎಂ.ಪೂರ್ಣೇಶ್, 7ಬೀನ್ ಟೀಮ್ ಛೇರಮ್ಯಾನ್ ಎಚ್.ಎಸ್.ಧರ್ಮರಾಜ್, ಉಪಾಧ್ಯಕ್ಷಯು.ಎಂ.ತೀರ್ಥಮಲ್ಲೇಶ್, ಕಾರ್ಯದರ್ಶಿ ಮುರುಳೀಧರ ಬಕ್ಕರವಳ್ಳಿ, ಪದಾಧಿಕಾರಿಗಳಾದ ಸಿ.ಎಸ್.ಮಲ್ಲೇಶ್, ಎಚ್.ಎಂ.ಉದಯ್, ಎನ್.ಬಿ.ಉದಯಕುಮಾರ್, ಕೆ.ಎನ್.ಸುಬ್ರಹ್ಮಣ್ಯ ಮತ್ತಿತರರು ಹಾಜರಿದ್ದರು.

# ಕನಿಷ್ಠ ಬೆಂಬಲ ಯೋಜನೆಯಡಿ ಜೋಳ ಖರೀದಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.25–2024–25ನೇ ಸಾಲಿನ ಹಿಂಗಾರು ಋತುವಿನಲ್ಲಿ ಬೆಳೆದ ಜೋಳವನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ನೇರವಾಗಿ ಖರೀದಿಸಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನ ಅವರು ತಿಳಿಸಿದ್ದಾರೆ.

ಈ ಕುರಿತು ಬಳ್ಳಾರಿ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ತೀರ್ಮಾನಿಸಿದ್ದು, 2024–25ನೇ ಸಾಲಿನ ಬೆಂಬಲ ಬೆಲೆ ಯೋಜನೆ ಕಾರ್ಯಾಚರಣೆಯನ್ನು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತ, ಬಳ್ಳಾರಿ ನಿರ್ವಹಿಸಲಿದೆ.

ಸರ್ಕಾರದ ಆದೇಶದಂತೆ ಬೆಂಬಲ ಬೆಲೆ ಯೋಜನೆಯಡಿ ಜೋಳವನ್ನು ಮಾರಾಟ ಮಾಡಲು ರೈತರು ಮೊದಲು ಕೃಷಿ ಇಲಾಖೆಯಲ್ಲಿ ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಳ್ಳಬೇಕು. ನಂತರ ಆಯಾ ತಾಲ್ಲೂಕುಗಳ ಕೃಷಿ ಉತ್ಪನ್ನ ಮಾರುಕಟ್ಟೆ, ತಾಲೂಕು ಕೃಷಿ ಉತ್ಪನ್ನ ಸಹಕಾರ ಮಾರಾಟ ಸಂಘ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ತಾಲೂಕು ಕೇಂದ್ರ ಕಚೇರಿಗಳಲ್ಲಿ ತೆರೆಯಲಾಗುವ ಖರೀದಿ ಕೇಂದ್ರಗಳಲ್ಲಿ ಜೋಳ ಮಾರಾಟ ಮಾಡಲು ನೋಂದಾಯಿಸಿಕೊಳ್ಳಬೇಕು ಎಂದು ಅವರು ತಿಳಿಸಿದ್ದಾರೆ.

*ಸರ್ಕಾರ ಘೋಷಿಸಿರುವ ಬೆಂಬಲ ಬೆಲೆ:*

ಬಿಳಿಜೋಳ–ಹೈಬ್ರಿಡ್:ರೂ.3,371 ಮತ್ತು ಬಿಳಿಜೋಳ–ಮಾಲ್ದಂಡಿ: ರೂ.3,421.

*ನೋಂದಣಿ ಮತ್ತು ಖರೀದಿ ಅವಧಿ:*

ನೋಂದಣಿ ಈಗಾಗಲೇ ಪ್ರಾರಂಭಗೊಂಡಿದ್ದು, ಮೇ 31 ರ ವರೆಗೆ ಖರೀದಿಸಲಾಗುವುದು.

*ಖರೀದಿ ಕೇಂದ್ರಗಳ ವಿವರ:*

ಬಳ್ಳಾರಿ ತಾಲ್ಲೂಕಿನ ಎಪಿಎಂಸಿ ಆವರಣ ಮತ್ತು ರೂಪನಗುಡಿ. ಸಿರುಗುಪ್ಪ ತಾಲ್ಲೂಕಿನ ಸಿರುಗುಪ್ಪ ಪಟ್ಟಣ, ಕರೂರು, ಉಪ್ಪಾರ ಹೊಸಳ್ಳಿ, ತಾಳೂರು ಮತ್ತು ಹಚ್ಚೊಳ್ಳಿ. ಕಂಪ್ಲಿ ತಾಲ್ಲೂಕಿನ ಕಂಪ್ಲಿ ಪಟ್ಟಣ, ಎಮ್ಮಿಗನೂರು. ಕುರುಗೋಡು ಮತ್ತು ಸಂಡೂರು.

ರೈತರ ನೋಂದಣಿ:

ರೈತರ ನೋಂದಣಿಯನ್ನು ತಾಲೂಕು ಮಟ್ಟದ /ಹೋಬಳಿ ಮಟ್ಟದಲ್ಲಿ ಖರೀದಿ ಕೇಂದ್ರಗಳಲ್ಲಿ ಆನ್‌ಲೈನ್ ಮುಖಾಂತರ ಮಾಡಲಾಗುವುದು. ಖರೀದಿ ಕೇಂದ್ರಕ್ಕೆ ರೈತರು ಕೃಷಿ ಇಲಾಖೆಯಿಂದ ಪಡೆದಿರುವ ಅವರ ಫ್ರೂಟ್ಸ್ ಐ.ಡಿ ರೈತರ ನೊಂದಣಿ ಮತ್ತು ಏಕೀಕೃತ ಫಲಾನುಭವಿ ಮಾಹಿತಿ ವ್ಯವಸ್ಥೆ (Farmer Registration and Unified Beneficiary Information System-FRUITS) ಮತ್ತು ಆಧಾರ್‌ನೊಂದಿಗೆ ನೋಂದಣಿ ಕೇಂದ್ರಕ್ಕೆ ಬರಬೇಕು.

ಬೆಂಬಲ ಬೆಲೆಗಾಗಿ ರೈತರನ್ನು ಪ್ರತ್ಯೇಕವಾಗಿ ನೊಂದಾಯಿಸದೆ ಕೇವಲ ಅವರ ಫ್ರೂಟ್ಸ್ ಐ.ಡಿ.ಯ ಮೂಲಕ ಖರೀದಿಗೆ ನೋಂದಾಯಿಸಲಾಗುವುದು. ರೈತರ ಫ್ರೂಟ್ಸ್ ಐ.ಡಿಯನ್ನು ರೈತರಿಂದಲೇ ಪ್ರಸ್ತುತ ಸಾಲಿನ ಫ್ರೂಟ್ಸ್ ಐ.ಡಿ ಪಡೆಯುವುದು ಕಡ್ಡಾಯ. ರೈತರ ಬಳಿ ಫ್ರೂಟ್ಸ್ ಐ.ಡಿ ಇಲ್ಲದಿದ್ದಲ್ಲಿ ಅಥವಾ ಅವರ ಫ್ರೂಟ್ಸ್ ಐ.ಡಿ ಮಾಹಿತಿ ಪರಿಷ್ಕರಿಸಲು ಕೃಷಿ ಇಲಾಖೆಯನ್ನು ಸಂಪರ್ಕಿಸಿ ಸರಿಪಡಿಸಿಕೊಳ್ಳಬೇಕು.

ಪ್ರತಿಯೊಬ್ಬ ರೈತರ ಫ್ರೂಟ್ಸ್ ಐ.ಡಿ ನಮೂದಿಸಿದ ನಂತರ ಫ್ರೂಟ್ಸ್ ದತ್ತಾಂಶದಿಂದ ರೈತರ ಅಗತ್ಯ ಮಾಹಿತಿ ಲಭ್ಯವಾಗಲಿದೆ. ಮಾಹಿತಿಯಲ್ಲಿ ರೈತರ ಹೆಸರು, ವಿಳಾಸ, ಜಾತಿ, ವಯಸ್ಸು, ಮೊಬೈಲ್ ಸಂಖ್ಯೆ, ಜಮೀನು ಮತ್ತು ಬೆಳೆದಿರುವ ಬೆಳೆಯ ವಿವರಗಳು ಹಾಗೂ ರೈತರ ಬ್ಯಾಂಕ್ ಖಾತೆಯ ವಿವರಗಳು ಲಭ್ಯವಿರುತ್ತವೆ. ಹಾಗಾಗಿ ಪ್ರತ್ಯೇಕವಾಗಿ ಬೇರಾವುದೇ ದಾಖಲೆ ನೀಡುವ ಅವಶ್ಯಕತೆ ಇರುವುದಿಲ್ಲ.

ಫ್ರೂಟ್ಸ್ ದತ್ತಾಂಶದನ್ವಯ ರೈತರ ಬೆಳೆ ಸಮೀಕ್ಷೆ ವಿವರದಂತೆ ಬೆಳೆ ವಿಸ್ತೀರ್ಣಕ್ಕನುಗುಣವಾಗಿ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಬಹುದಾದ ಗರಿಷ್ಠ ಪ್ರಮಾಣವನ್ನು ತೋರಿಸಲಾಗುವುದು. ಖರೀದಿ ಕೇಂದ್ರಗಳಲ್ಲಿ ನೋದಣಿ ಮಾಡಿದಾಗ ಅದೇ ಖರೀದಿ ಕೇಂದ್ರದಲ್ಲೇ ಖರೀದಿ ಮಾಡಿಕೊಳ್ಳುವುದು. ರೈತರು ಖರೀದಿ ವಿವರಗಳನ್ನು ಒಪ್ಪಿ ನಮೂದಿಸಿದ ನಂತರ ಸ್ವೀಕೃತಿಯನ್ನು ಮುದ್ರಿಸಿ ರೈತರರಿಗೆ ನೀಡಲಾಗುವುದು. ರೈತರು ಭತ್ತ/ರಾಗಿ/ಜೋಳ ಸರಬರಾಜು ಮಾಡುವಾಗ ಎಫ್.ಎ.ಕ್ಯೂ ಗುಣಮಟ್ಟವನ್ನು ಪರಿಶೀಲಿಸಿ ಖರೀದಿಸಲಾಗುವುದು

*ರೈತರ ಖರೀದಿ ಮಿತಿ:*

ಜೋಳವನ್ನು ಪ್ರತಿ ರೈತರಿಂದ ಪ್ರತಿ ಎಕರೆಗೆ 20 ಕ್ವಿಂಟಾಲ್ ನಂತೆ ಗರಿಷ್ಠ 150 ಕ್ವಿಂ ಮೀರದಂತೆ ಖರೀದಿಸತಕ್ಕದ್ದು.

*ಹಣ ಪಾವತಿ:*

ಬೆಂಬಲ ಬೆಲೆ ಯೋಜನೆಯಡಿ ಜೋಳ ಸರಬರಾಜು ಮಾಡಿದ ರೈತರಿಗೆ ಅವರು ಕೃಷಿ ಇಲಾಖೆಯಲ್ಲಿ ನೋಂದಾಯಿಸಿ ಕೊಂಡಿರುವ ಬ್ಯಾಂಕ್ ಖಾತೆಗೆ ಆರ್.ಟಿ.ಜಿ.ಎಸ್ ಮೂಲಕ ಹಣ ಪಾವತಿಸಲಾಗುವುದು.

*ದಲ್ಲಾಳಿಗಳಿಗೆ/ಏಜೆಂಟರ್‌ಗಳಿಗೆ ಎಚ್ಚರಿಕೆ:*

ಮಧ್ಯವರ್ತಿಗಳು/ಏಜೆಂಟರ್‌ಗಳು ಖರೀದಿ ಕೇಂದ್ರಗಳಿಗೆ ಜೋಳವನ್ನು ತಂದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು. ಬೆಂಬಲ ಬೆಲೆ ಯೋಜನೆ ಬಗ್ಗೆ ರೈತರಿಗೆ ಯಾವುದೇ ಸಮಸ್ಯೆಗಳಿದ್ದರೆ ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಕೃಷಿ ಮಾರಾಟ ಮಂಡಳಿ ಬಳ್ಳಾರಿ ಇವರು ಹಾಗೂ ತಾಲ್ಲೂಕಿನ ತಹಸಿಲ್ದಾರ್/ ಕೃಷಿ ಅಧಿಕಾರಿ/ ಎ.ಪಿ.ಎಂ.ಸಿ ಕಾರ್ಯದರ್ಶಿ/ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಲು ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತ, ಬಳ್ಳಾರಿ ಅಥವಾ ಸೈಯದ್ ವಸೀಮ್ ಪಾಷ (ಮೊ.9449864453) ಇವರನ್ನು ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಗುವಿನ ಒಂದು ವರ್ಷದ ವಯಸ್ಸಿನೊಳಗೆ ತಪ್ಪದೇ ಎಲ್ಲಾ ಲಸಿಕೆ ಹಾಕಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಗುವಿನ ಜನನದ ನಂತರ 12 ಮಾರಕ ರೋಗಗಳ ತಡೆಗಟ್ಟಲು ಎಲ್ಲಾ ಲಸಿಕೆಗಳನ್ನು ಸರ್ಕಾರಿ ಆಸ್ಪತ್ರೆಗಳಲ್ಲಿ ನೀಡಲಾಗುತ್ತಿದ್ದು, ಪಾಲಕರು ತಪ್ಪದೇ ತಮ್ಮ ಮಕ್ಕಳಿಗೆ ಹಾಕಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು. ಬಾಲಕ್ಷಯ ತಡೆಗಟ್ಟಲು ಬಿಸಿಜಿ, ಪೋಲಿಯೋ ರೋಗ ತಡೆಗಟ್ಟಲು ಪೋಲಿಯೋ ಹನಿ, ಕಾಮಾಲೆ ರೋಗ ತಡೆಗಟ್ಟಲು ಹೆಪಟೈಟೀಸ್ ಹಾಗೂ ನವಜಾತ ಶಿಶುವಿನ ದೇಹದ ಒಳಗಡೆ ಆಂತರಿಕ ರಕ್ತಸ್ರಾವ ಸಾಧ್ಯತೆಗಳನ್ನು ತಡೆಗಟ್ಟಲು ವಿಟಮಿನ್–ಕೆ ಚುಚ್ಚು ಮದ್ದನ್ನು ಮೊದಲ ದಿನವೇ ನೀಡಲಾಗುತ್ತದೆ. ನಂತರ ವಯಸ್ಸಿಗೆ ಅನುಸಾರವಾಗಿ ಮಾರಕ ರೋಗಗಳನ್ನು ತಡೆಗಟ್ಟಲು ಒಂದು ವರ್ಷದೊಳಗಡೆ ಎಲ್ಲಾ ಲಸಿಕೆಗಳನ್ನು ಉಚಿತವಾಗಿ ಹಾಕಲಾಗುತ್ತದೆ ಎಂದು ತಿಳಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಗುಗ್ಗರಹಟ್ಟಿ ಇವರ ಆಶ್ರಯದಲ್ಲಿ ನಗರದ ಬಂಡಿಮೋಟ್‌ನ ಬುಡ ಬುಡಿಕೆಯವರ ಓಣಿಯಲ್ಲಿ ವಿಶ್ವ ಲಸಿಕಾ ಸಪ್ತಾಹದ ಅಂಗವಾಗಿ ಲಸಿಕಾ ಸ್ಥಳಕ್ಕೆ ಭೇಟಿ ನೀಡಿ ಸಾರ್ವಜನಿಕರೊಂದಿಗೆ ಅವರು ಮಾತನಾಡಿದರು. ಈಗಾಗಲೇ ಪ್ರತಿ ಗುರುವಾರ ಎಲ್ಲಾ ಗ್ರಾಮ, ವಾರ್ಡ್‌ಗಳಲ್ಲಿ ಲಸಿಕೆ ಹಾಕಲಾಗುತ್ತಿದ್ದು, ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರತಿ ದಿನ ಲಸಿಕೆ ಹಾಕಲಾಗುತ್ತಿದೆ. ಮಗು ಲಸಿಕೆ ವಂಚಿತರಾಗಬಾರದೆಂಬ ಹಿನ್ನಲೆಯಲ್ಲಿ ಸರ್ಕಾರವು ಏಪ್ರಿಲ್, ಮೇ, ಜೂನ್ ಮೂರು ತಿಂಗಳುಗಳ ಕಾಲ ನಿಗಧಿತ ಅವಧಿಯಲ್ಲಿ ಲಸಿಕೆ ಪಡೆಯದ ಹಾಗೂ ಒಂದು ಲಸಿಕೆಯನ್ನು ಪಡೆಯದೇ ಇರುವ ಮಕ್ಕಳನ್ನು ಗುರ್ತಿಸಿ ಲಸಿಕೆ ಹಾಕುವ ಕಾರ್ಯ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು. ಸರಿಯಾದ ಸಮಯದಲ್ಲಿ ಮಗುವಿನ ಒಂದುವರೆ ತಿಂಗಳು, ಎರಡುವರೆ ತಿಂಗಳು ಹಾಗೂ ಮೂರುವರೆ ತಿಂಗಳ ವಯಸ್ಸಿನಲ್ಲಿ ಕ್ರಮವಾಗಿ ಗಂಟಲು ಮಾರಿ, ನಾಯಿಕೆಮ್ಮು ಧನುರ್ವಾಯು ರೋಟ ವೈರಸ್, ಹೆಚ್ ಇನ್‌ಫ್ಲ್ಯುಯೆಂಜಾ, ಕಾಮಾಲೆಗಾಗಿ ಪೆಂಟಾವೈಲೆಂಟ್ ಲಸಿಕೆ, ರೋಟಾವೈರಸ್ ಅತಿಸಾರಬೇದಿಗೆ ನಿಮೋಕಾಕಲ್ ಲಸಿಕೆ ಹಾಕಲಾಗುವುದು. ಮಗುವಿನ ಒಂಬತ್ತು ತಿಂಗಳು ವಯಸ್ಸು ತುಂಬಿದ ನಂತರ ಮೆದುಳು ಜ್ವರ ರೋಗಕ್ಕೆ ಜಾಪನೀಸ್ ಎನ್ಸ್‌ಫ್ಲಿಟಿಸ್ ಲಸಿಕೆ, ದಡಾರ ರೂಬೇಲ್ಲಾ ರೋಗಕ್ಕೆ ಮಿಸಲ್ಸ್ ರೂಬೆಲ್ಲಾ ಲಸಿಕೆ, ಹಾಗೂ ಸಂಜೆ–ಯ ಹೊತ್ತು ಕಂಡುಬರುವ ಇರುಳುಗಣ್ಣು ರೋಗಕ್ಕೆ ವಿಟಾಮಿನ್–ಎ ಅನ್ನಾಂಗ ದ್ರಾವಣ, ನೀಡಲಾಗುತ್ತದ್ದು ತಪ್ಪದೇ ಹಾಕಿಸಲು ವಿನಂತಿಸಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಲಸಿಕೆ ನೀಡುವಲ್ಲಿ ಸಾರ್ವಜನಿಕರ ಅಭಿಪ್ರಾಯಗಳನ್ನು ಮತ್ತು ಅನಿಸಿಕೆಗಳನ್ನು ಕ್ರೂಢೀಕರಿಸಿ ತಪ್ಪು ನಂಬಿಕೆಗಳ ಕುರಿತು ಜಾಗೃತಿ ನೀಡಲಾಗುತ್ತಿದೆ ಎಂದರು. ಕೆಲವು ರೋಗಗಳಿಗೆ ಅಂದರೆ ಪೋಲಿಯೋ, ಗಂಟಲುಮಾರಿ, ನಾಯಿ ಕೆಮ್ಮು, ಧನುರ್ವಾಯು, ದಡಾರ–ರೂಬೆಲ್ಲಾ ಮೆದುಳು ಜ್ವರ, ಕ್ಕೆ 16 ರಿಂದ 23 ತಿಂಗಳು ಒಳಗೆ ಹೆಚ್ಚುವರಿಯಾಗಿ ಬೂಸ್ಟರ್ ಡೋಸ್ ರೂಪದಲ್ಲಿ ನೀಡಲಾಗುವುದು. 5 ರಿಂದ 6 ವರ್ಷದಲ್ಲಿ ಪುನಃ ಗಂಟಲುಮಾರಿ, ನಾಯಿ ಕೆಮ್ಮು, ಧನುರ್ವಾಯು, ರೋಗಿಗಳಿಗೆ ಎರಡನೇಯ ಬಾರಿ ಬೂಸ್ಟರ್ ಡೋಸ್ ನೀಡಲಾಗುವುದು. ಈ ಹಿನ್ನಲೆಯಲ್ಲಿ ಗಾಳಿಸುದ್ದಿ ನಂಬಿ ಲಸಿಕೆ ಬೇಡವೆನ್ನುವವರಿಗೆ ಮನೆ ಭೇಟಿ, ಗುಂಪು ಸಭೆ, ಸಮುದಾಯ ಮುಖಂಡರ ಮೂಲಕ ಮಾಹಿತಿ ಒದಗಿಸಿ ಅವರಲ್ಲಿಯ ತಪ್ಪು ನಂಬಿಕೆಗಳನ್ನು ಹೋಗಲಾಡಿಸಿ ಎಲ್ಲಾ ಲಸಿಕೆಗಳನ್ನು ಹಾಕಿಸಲಾಗುತ್ತಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ಡಾ.ಶಗುಪ್ತಾ ಶಾಹಿನ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಹೆಚ್‌ಐಓ ನಿರಂಜನ್ ಪತ್ತಾರ್, ಆಶಾ, ರೇಷ್ಮಾ ಹಾಗೂ ಇತರರು

ಪದೇ ಪದೇ ಕನ್ನಡಿಗರ ಮೇಲೆ ಹಲ್ಲೆ ಯಾಗುತ್ತಿರುವುದು

# ಖಂಡಿಸಿದ ಕರವೇ, ಜಿಲ್ಲಾ ಅಧ್ಯಕ್ಷ..! ಗಿರೀಶಾನಂದ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಹಂಪಿ ಎಕ್ಸಪ್ರೆಸ್ ರೈಲಿನಲ್ಲಿ ಮೈಸೂರಿನಿಂದ ಕೊಪ್ಪಳಕ್ಕೆ ಬರುವಾಗ ಕನ್ನಡದಲ್ಲಿ ಮಾತನಾಡಿ ಎಂದು ಪ್ರಯಾಣಿಕ ಹೇಳಿದಕ್ಕೆ ಟಿಸಿ ( ಟಿಕೇಟ್ ಕಲೆಕ್ಟರ್) ಹಲ್ಲೆ ಮಾಡಿರುವ ಘಟನೆ ಬೆಳಕಿಗೆ ಬಂದಿದೆ.

ಮಹ್ಮದ ಬಾಷಾ ಅತ್ತಾರ ಇವರ ಮೇಲೆ ಹಲ್ಲೆ ನಡೆದಿದ್ದು, ಹಲ್ಲೆ ಮಾಡಿದ ಟಿಸಿ ಯಾರು ಎಂದು ತಿಳಿದುಬಂದಿಲ್ಲ, ಈ ಕುರಿತು ಕೊಪ್ಪಳ ರೈಲ್ವೆ ಟೇಶನ್ ನ ಟೇಷನ್ ಮಾಸ್ಟರ್ ಗೆ ದೂರು ನೀಡಲಾಗಿದೆ ಎಂದು ಹಲ್ಲೆಗೊಳಗಾದ ವ್ಯಕ್ತಿ ಮಹ್ಮದ್ ಬಾಷಾ ಅವರು ತಿಳಿಸಿದಾರೆ.

ಈ ಕುರಿತು ಮಾತನಾಡಿದ ಅವರು ನಾನು ಮೈಸೂರಿನಿಂದ ಕೊಪ್ಪಳಕ್ಕೆ ಬರುತಿದ್ದೆ ಆ ಸಮಯದಲ್ಲಿ ಟಿಸಿ ಯವರು ಎಲ್ಲರ ಟಿಕೇಟ್ ಪರಿಶೀಲಿಸುತ್ತಾ ಬರುತಿದ್ದರು, ಅವರು ಹಿಂದಿಯಲ್ಲಿ ಮಾತನಾಡುತಿದ್ದರು ಅವರು ಸಿಟ್ಟಿನಲ್ಲಿ ಮಾತಂದುತಿದ್ದರು ನನ್ನಬಳಿ ಒಂದಾಗ ನಾನು ಅವರನ್ನು ಕನ್ನಡದಲ್ಲಿ ಮಾತನಾಡಿ ಎಂದು ಹೇಳಿದೆ ಅಷ್ಟಕ್ಕೆ ಅವರು ಕೋಪಗೊಂಡು ನನಗೆ ಹೊಡೆದರು ಅಲ್ಲಿದ್ದ ಮಹಿಳೆಯರು ಕೂಡ ಕನ್ನಡದಲ್ಲಿ ಮಾತನಾಡಿ ಎಂದರು ಆದರೂ ಅವರು ಕೇಳಲಿಲ್ಲ ಅವರು ನನಗೆ ಹೊಡೆದು ಮೊಬೈಲ್ ಫೋನ್ ಕಸಿದು ಕೆಳಗೆ ಹಾಕಿದರು ಎಂದು ಹೇಳಿದರು.

ಈ ಕುರಿತು ಕರ್ನಾಟಕ ರಕ್ಷಣಾ ವೇದಿಕೆ ಕೊಪ್ಪಳ ರೈಲ್ವೆ ನಿಲ್ದಾಣದ ಬಳಿ ಪ್ರತಿಭಟನೆ ನೆಡೆಸಿ ಟೇಶನ್ ಮಾಸ್ಟರ್ ಗೆ ಮನವಿ ಸಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ಗಿರೀಶಾನಂದ ಅವರು ಕೊಪ್ಪಳದ ಭಾಗ್ಯನಗರ ನಿವಾಸಿಯಾದ ಕನ್ನಡಿಗ ಮಹ್ಮದ ಬಾಷಾ ಅತ್ತಾರ ಇವರು ಹಂಪಿ ಎಕ್ಸಪ್ರೆಸ್ ರೈಲಿನಲ್ಲಿ ಎಸ್3 ಬೋಗಿಯಲ್ಲಿ ಮೈಸೂರಿನಿಂದ ಕೊಪ್ಪಳಕ್ಕೆ ಪ್ರಯಾಣಿಸುವ ಸಂದರ್ಭದಲ್ಲಿ ಬೆಂಗಳೂರು ರೈಲು ನಿಲ್ದಾಣ ನಂತರದಲ್ಲಿ ಬಂದಂತಹ ಟಿಕೆಟ್ ಕಲೆಕ್ಟರ್ ಹಿಂದಿ ಬಾಷೆಯಲ್ಲಿ ಸಂಬೋಧಿಸುವಾಗ ಕನ್ನಡದಲ್ಲಿ ಮಾತನಾಡಿ ಎಂದು ಮನವಿ ಮಾಡಿದಕ್ಕೆ ಇವರ ಮೇಲೆ ಹಲ್ಲೆ ಮಾಡಿ ಮೊಬೈಲ್ ಕಸಿದುಕೊಂಡು ಅವಾಚ್ಯ ಶಬ್ದಗಳಿಂದ ನಿಂದಿಸಿ ದೌಜನ್ಯವೆಸಗಿದ್ದಾರೆ. ಕಳೆದ ನಾಲ್ಕೈದು ದಿನಗಳ ಹಿಂದೆ ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ವಾಯುಪಡೆಯ ಅಧಿಕಾರಿಯೊಬ್ಬರು ಕನ್ನಡಿಗ ಸೇಲ್ಸ್ ಮ್ಯಾನ್ ಮೇಲೆ ಹಾಡುಹಗಲೇ ಏಕಾಏಕಿ ಹಲ್ಲೆಗೈದು ದೌರ್ಜನ್ಯವೆಸಗಿದ ಪ್ರಕರಣ ಮಾಸುವ ಮೊದಲೇ ಈ ಪ್ರಕರಣ ಬೆಳಕಿಗೆ ಬಂದಿದ್ದು ಖೇಧಕರ. ರೈಲು ಪ್ರಯಾಣದಲ್ಲಿ ಸೌಜನ್ಯದಿಂದ ವರ್ತಿಸಿ ಪ್ರಯಾಣಿಕರಿಗೆ ಸುರಕ್ಷತೆ ಕಲ್ಪಿಸುವ ಅಧಿಕಾರಿಗಳೆ ದೌರ್ಜನ್ಯವೆಸಗಿದರೆ, ದೇಶದ ಪ್ರತಿಷ್ಠಿತ ರೇಲ್ವೆ ಇಲಾಖೆಯ ಮೇಲೆ ಸಾರ್ವಜನಿಕರಿಗೆ ನಂಬಿಕೆ ಇಲ್ಲದಂತಾಗುತ್ತದೆ. ರಾಜ್ಯದ ಆಡಳಿತ ಹಾಗೂ ಮಾತೃ ಭಾಷೆಯಾದ ಕನ್ನಡಲ್ಲಿ ಮಾತನಾಡಿ ಎಂದದ್ದಕ್ಕೆ ಹಲ್ಲೆ ಮಾಡಿ ದೌಜನ್ಯವೆಸಗಿದರೆ, ನಾವು ಕರ್ನಾಟಕದಲ್ಲಿ ಬದುಕುತ್ತಿದ್ದೇವೆಯೇ? ಎಂಬ ಪ್ರಶ್ನೆ ನಮ್ಮನ್ನು ಕಾಡುತ್ತದೆ ಎಂದು ಹೇಳಿದರು.

ಪದೇ ಪದೇ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರವಹಿಸಿ ಕನ್ನಡದಲ್ಲಿ ಮಾತನಾಡಿ ಎಂಬುದಕ್ಕೆ ಕನ್ನಡಿಗ ಮಹ್ಮದ ಬಾಷಾ ಅತ್ತಾರ ಇವರಿಗೆ ಹಲ್ಲೆ ಮಾಡಿ ಅವಾಚ್ಯ ಶಬ್ದಗಳಿಂದ ನಿಂದಿಸಿ ದೌಜನ್ಯವೆಸಗಿದ ಉತ್ತರ ಭಾರತದ ಟಿಕೆಟ್ ಕಲೆಕ್ಟರ್ ಅವರ ಮೇಲೆ ಸೂಕ್ತ ಕ್ರಮಕೈಗೊಂಡು ಕರ್ತದಿಂದ ಅಮಾನತ್ತು ಮಾಡಬೇಕು. ಇಲ್ಲದಿದ್ದರೆ, ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷರ ನೇತೃತ್ವದಲ್ಲಿ ರಾಜ್ಯಾದ್ಯಂತ ಉಗ್ರವಾಗಿ ಪ್ರತಿಭಟಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಅಪಘಾತದಲ್ಲಿ ಗಾಯಗೊಂಡ KSRTC ಸಿಬ್ಬಂದಿಗೆ 25 ಲಕ್ಷ,

# ಮೃತರ ಬಂಧುಗಳಿಗೆ ತಲಾ ರೂ.1 ಕೋಟಿ ಪರಿಹಾರ ವಿತರಿಸಿದ ಸಾರಿಗೆ ಸಚಿವ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಅಪಘಾತದಲ್ಲಿ ಗಾಯಗೊಂಡು ಕಾಲು ಕಳೆದುಕೊಂಡ ಏಖಖಿಅ ಸಿಬ್ಬಂದಿಗೆ ಪ್ರಪ್ರಥಮ ಬಾರಿಗೆ ರೂ.25 ಲಕ್ಷ ಪರಿಹಾರ ವಿತರಣೆ ಮಾಡಲಾಗಿದೆ. ಮೃತಪಟ್ಟ ಸಿಬ್ಬಂದಿ ಕುಟುಂಬಗಳಿಗೆ ತಲಾ ರೂ.1 ಕೋಟಿ ಪರಿಹಾರ ವಿತರಿಸಲಾಗಿದೆ. ಇದೇ ವೇಳೆ, ಅಪಘಾತ ಹೊರತುಪಡಿಸಿ ಇತರೆ ಕಾರಣಗಳಿಂದ ಮೃತಪಟ್ಟ (31 ಸಿಬ್ಬಂದಿಯ ಅವಲಂಬಿತರಿಗೆ ತಲಾ ರೂ.10 ಲಕ್ಷ ರೂ) ರೂ.3.10 ಕೋಟಿ ಪರಿಹಾರ ವಿತರಣೆ ಮಾಡಲಾಗಿದೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕೇಂದ್ರ ಕಚೇರಿಯಲ್ಲಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಕರಾರಸಾ ನಿಗಮ ದ ಉಪಾಧ್ಯಕ್ಷ ಮೊಹಮ್ಮದ್ ರಿಜ್ವಾನ್ ನವಾಬ್ ವರು ವಿವಿಧ ಪರಿಹಾರ ಯೋಜನೆ ಅಡಿ ಸಿಬ್ಬಂದಿ ಹಾಗೂ ಅವಲಂಭಿತರಿಗೆ ಪರಿಹಾರ ಮೊತ್ತದ ಚೆಕ್'ಗಳನ್ನು ವಿತರಿಸಿದರು. ಅಪಘಾತದಿಂದ ಮೃತಪಟ್ಟ ಸಿಬ್ಬಂದಿಗಳ ಅವಲಂಬಿತರಿಗೆ ಸಾಂತ್ವಾನ ಹೇಳಿದ ಸಚಿವ ರಾಮಲಿಂಗ ರೆಡ್ಡಿ, ಸಿಬ್ಬಂದಿಯ ಜೀವ ಅಮೂಲ್ಯವಾದದ್ದು, ಅವರನ್ನು ಮರಳಿ ಕರೆತರಲು ಸಾಧ್ಯವಾಗುವುದಿಲ್ಲ, ಆದರೆ ಅವರ ಅವಲಂಬಿತರ ಮುಂದಿನ ಜೀವನವು ಆರ್ಥಿಕವಾಗಿ ಭದ್ರತೆಯಿಂದ ಕೂಡಿರಲಿ ಎಂಬ ಸದ್ದುದೇಶದಿಂದ ಸಾರಿಗೆ ಸುರಕ್ಷಾ ಯೋಜನೆಯನ್ನು ಜಾರಿಗೊಳಿಸಿರುವುದಾಗಿ ತಿಳಿಸಿದರು.

ಸಾರಿಗೆ ಸಿಬ್ಬಂದಿ ಹಗಲಿರುಳು ತಮ್ಮ ಸಂಸ್ಥೆಗಾಗಿ ಶ್ರಮಿಸಿರುವುದರಿಂದ ಸಾರಿಗೆ ಸಂಸ್ಥೆಯು ಇಂದು ಉನ್ನತ ಸ್ಥಾನದಲ್ಲಿದೆ. ಹಾಗಾಗಿ ಮೃತ ಸಿಬ್ಬಂದಿಯ ಕುಟುಂಬವನ್ನು ನೋಡಿಕೊಳ್ಳುವುದು ಸಂಸ್ಥೆಯ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಮೃತರ ಅವಲಂಬಿತರಿಗೆ ಈಗಾಗಲೇ ನಾಲ್ಕು ನಿಗಮಗಳಲ್ಲಿ ಅನುಕಂಪದ ಆಧಾರದ ಮೇಲೆ 1000 ನೌಕರಿ ನೀಡಿರುವುದಾಗಿ ಸಚಿವರು ತಿಳಿಸಿದರು.

ವಿತರಿಸಲಾದ ಪರಿಹಾರದ ಮೊತ್ತವನ್ನು ಸೂಕ್ತ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕು, ಮಕ್ಕಳ ವಿದ್ಯಾಬ್ಯಾಸ, ಮನೆ ನಿರ್ಮಾಣ ಮತ್ತು ಇತರೆ ಶುಭ ಕಾರ್ಯಗಳಿಗೆ ಸದುಪಯೋಗ ಪಡಿಸಿಕೊಳ್ಳುವಂತೆ ಸಚಿವರು ಸಲಹೆ ನೀಡಿದರು. ಬಡ್ಡಿ ವ್ಯಾಮೋಹಕ್ಕೆ ಒಳಗಾಗಿ ಪರಿಹಾರ ಧನವನ್ನು ಯಾರಿಗೂ ನೀಡದಂತೆ ಕಿವಿ ಮಾತು ಹೇಳಿದ ಅವರು, ಹಣವಿದ್ದರೆ ಎಲ್ಲರು ನೆಂಟರೆ ಆದರೆ ಸೂಕ್ತವಾದ ರೀತಿಯಲ್ಲಿ ಹಣ ಬಳಕೆ ಮಾಡಿಕೊಳ್ಳಲು ತಿಳಿಸಿದರು.

# ಸೋಮಶೇಖರ ಕೊಟ್ರಶೆಟ್ಟಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.26-ಕನ್ನಡ ಸಾಹಿತ್ಯಪರಿಷತ್ ಜಿಲ್ಲಾಘಟಕದಿಂದ ಬಸವ ಜಯಂತಿ ಅಂಗವಾಗಿ ಕೊಡಮಾಡುವ ಬಸವಶ್ರೀ ಪ್ರಶಸ್ತಿಗೆ ಆಯ್ಕೆಯಾಗಿರುವ ಜಿಲ್ಲೆಯ ರಬಕವಿಯ ವರ್ತಕ ಸೋಮಶೇಖರಕೊಟ್ರಶೆಟ್ಟಿಅವರನ್ನು ರಬಕವಿಯಜಂಗಮಕ್ಷೇಮಾಭಿವೃದ್ಧಿ ಸಂಘದಿಂದ ಸನ್ಮಾನಿಸಲಾಯಿತು.

ಸೋಮಶೇಖರ ಕೊಟ್ರಶೆಟ್ಟಿ ಅವರನ್ನುಸನ್ಮಾನಿಸಿ ಮಾತನಾಡಿದ ವಕೀಲ ಜಿ.ಎಂ.ಅಮ್ಮಣಗಿಮಠ, ಕೊಟ್ರಶೆಟ್ಟಿಅವರುತಮ್ಮಸಂಸ್ಥೆಯಿಂದ ಅನೇಕಸಾಮಾಜಿಕಕಾರ್ಯಗಳನ್ನು ಮಾಡಿಕೊಂಡು ಬಂದವರು. ಜೊತೆಗೆ ಸರ್ವಹಿತ ಚಿಂತನೆಗಳಲ್ಲಿ ಭಾಗಿಯಾಗಿ, ವಿವಿಧ ಆಧ್ಯಾತ್ಮಿಕ ಚಟುವಟಿಕೆಗಳಲ್ಲಿಕೈಜೋಡಿಸಿ ಸರ್ವ ಸಮುದಾಯಗಳ ಜೊತೆ ತಮ್ಮನ್ನು ತಾವು ತೊಡಗಿಸಿಕೊಂಡಿದ್ದು ಅವರ ಸೇವೆ ಸ್ಮರಣೀವಾದುದು ಎಂದು ಹೇಳಿದರು.

ಬಾಗಲಕೋಟೆ ಜಿಲ್ಲಾಡಳಿತ ಕೊಟ್ರಶೆಟ್ಟಿ ಅವರನ್ನು ಬಸವಶ್ರೀ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ರಬಕವಿ-ಬನಹಟ್ಟಿ ನಗರ-ಕ್ಕೆ ಸಂತಸ ತಂದಿದೆ ಎಂದು ಸಮಾಜದ ಮುಖಂಡರು ಬಣ್ಣಿಸಿ ಅಭಿನಂದಿಸಿದರು.

ಶಿವಾನಂದಮಠದ,ಮೃತ್ಯುಂಜಯ ಹೂಲಗೇರಿಮಠ, ದಯಾನಂದ ಬಾಗಲಕೋಟಮಠ, ಸಂಜಯ ಅಮ್ಮಣಗಿಮಠ, ಮಾದೇವಯ್ಯ ಮಠಪತಿ, ಚಿಕ್ಕಯ್ಯ ಮಠದ, ಮಹಾದೇವಯ್ಯ ನಂದ್ಯೆಗೋಳ, ಗಂಗಯ್ಯ ಹಿರೇಮಠ ಸೇರಿ ಅನೇಕರು ಇದ್ದರು.

# ಸಾಮೂಹಿಕ ವಿವಾಹಗಳಿಂದ ಆರ್ಥಿಕ ಅಸಬಲ ಕುಟುಂಬಕ್ಕೆ ನೆರವು-ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.26-ಸಾಮೂಹಿಕ ವಿವಾಹಗಳು ಆರ್ಥಿಕವಾಗಿ ಅಸಬಲರಾಗಿರುವ ಕುಟುಂಬಗಳಿಗೆ ನೆರವಾಗುತ್ತವೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ತಾಲೂಕಿನ ಬೇವೂರ ಗ್ರಾಮದಲ್ಲಿ ಶನಿವಾರ ಸಮಾಜ ಸೇವಕ ಗ್ಯಾನಪ್ಪ ಚಲವಾದಿ ತಮ್ಮ ಪುತ್ರಿಯ ಮದುವೆ ಸಮಾರಂಭದಲ್ಲಿ ಹಮ್ಮಿಕೊಂಡಿದ್ದ 14 ಜೋಡಿ ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಶಕ್ತರಿಗೆ ಶಕ್ತಿ ನೀಡುವ ಕಾರ್ಯವೂ ದೊಡ್ಡ ಸಮಾಜ ಸೇವೆಯಾಗುತ್ತದೆ ಎಂದರು.

ನೂತನ ದಂಪತಿಗಳು ಬುದ್ಧ-ಬಸವ-ಅಂಬೇಡ್ಕರ ಅವರುಗಳ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಬದುಕಬೇಕು. ಹೊಂದಾಣಿಕೆಯ ಜೀವನದಿಂದ ನೆಮ್ಮದಿಯ ಬದುಕು ಕಟ್ಟಿಕೊಳ್ಳಬೇಕು ಎಂದು ಸಲಹೆಯಿತ್ತರು.

ಚಿತ್ರನಟ ಚೇತನ ಅಹಿಂಸಾ ಮಾತನಾಡಿದರು. ಶಾಸಕ ಎಚ್.ವಾಯ್.ಮೇಟಿ ಗ್ಯಾನಪ್ಪ ಚಲವಾದಿ ಅವರ ಪುತ್ರಿ ಪುಷ್ಪಾ ದಂಪತಿ ಹಾಗೂ ಸಾಮೂಹಿಕ ವಿವಾಹದ ನವದಂಪತಿಗಳಿಗೆ ಅಕ್ಷತೆ ಹಾಕಿ ಶುಭ ಹಾರೈಸಿದರು.

ಪೂಜ್ಯ ಗ್ಯಾನಪ್ಪಜ್ಜನವರು ಹಾಗೂ ದಮ್ಮಪಾಲ ಬಂತೇಜ ದಿವ್ಯ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ಯಾನಪ್ಪ ಚಲವಾದಿ ವಹಿಸಿದ್ದರು. ಅತಿಥಿಗಳಾಗಿ ಜಿಪಂ ಮಾಜಿ ಅಧ್ಯಕ್ಷ ಬಸವಂತಪ್ಪ ಮೇಟಿ, ವಕೀಲ ಜಿ.ಜಿ.ಮಾಗನೂರ, ಎಸ್.ವಾಯ್.ಶಿರೂರ,ಶರಣಪ್ಪಮಾಗನೂರ, ಆರ್.ಎಸ್.ವೈಜಾಪೂರ, ಎಂ.ಎಸ್.ವೈಜಾಪೂರ, ರಮೇಶ ಕೊಳ್ಹಾರ, ಕುಮಾರ ಬಿಂಜವಾಡಗಿ, ಜಿ.ಎಸ್.ಹಚ್ಚೊಳ್ಳಿ, ಬಡ್ಡೇಸಾಬ ಗುರಗುನ್ನಿ ಮತ್ತಿತರರು ಪಾಲ್ಗೊಂಡಿದ್ದರು.

# ಕೃಷಿ ವಿವಿ ರೈತ ಸಂತೆಗೆ ಸಚಿವ ಪರಮೇಶ್ವರ್ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಏ.26:-ಕೃವಿವಿ, ಜಿ.ಕೆ.ವಿ.ಕೆಆವರಣದಲ್ಲಿಆಯೋಜಿಸಿದ್ದ "ಕೃಷಿವಿಶ್ವವಿದ್ಯಾನಿಲಯ,ಬೆಂಗಳೂರಿನ ರೈತ ಸಂತೆ" ಕಾರ್ಯಕ್ರಮದ ಉದ್ಘಾಟನೆಯ ನ್ನು ಗೃಹ ಸಚಿವ ಜಿ. ಪರಮೇಶ್ವರ ನೆರವೇರಿಸಿದರು.

ನಂತರ ಮಾತನಾಡಿದ ಸಚಿವರು ಬೆಂಗಳೂರಿನಕೃಷಿವಿಶ್ವವಿದ್ಯಾನಿಲಯವು ಅಭಿವೃದ್ಧಿಪಡಿಸಲಾದ ವಿವಿಧ ತಾಂತ್ರಿಕತೆಗಳ ಉತ್ಪನ್ನ ಕೃಷಿ ಪರಿಕರಗಳನ್ನು ಕೃಷಿಕರಿಗೆ ಹಾಗೂ ಸಾರ್ವಜನಿಕರಿಗೆ ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಜನಪ್ರಿಯಗೊಳಿಸುವ ಸಲುವಾಗಿ "ಕೃಷಿ ವಿಶ್ವವಿದ್ಯಾನಿಲಯ ಬೆಂಗಳೂರಿನ ರೈತ ಸಂತೆ" ಎಂಬ ವಿನೂತನ ಕಾರ್ಯಕ್ರಮವನ್ನು ಆಯೋಜಿಸುತ್ತಿರುವುದು ಸಂತಸದ ವಿಷಯ ಎಂದರು.

ರೈತಸಾರ್ವಜನಿಕರಹಿತದೃಷ್ಟಿಯಿಂದ ಸರ್ಕಾರದ ಪರವಾಗಿ ಬೆಂಗಳೂರು ಕೃಷಿವಿಶ್ವವಿದ್ಯಾನಿಲಯಕ್ಕೆಅಭಿನಂದನೆ ಸಲ್ಲಿಸುತ್ತೇನೆ. ಸದರಿ ಕೃಷಿ ಸಂತೆಯಲ್ಲಿ ಬೆಂಗಳೂರುಕೃಷಿವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ವಿವಿಧ ಕೃಷಿ ಸಂಶೋಧನಾ, ವಿಸ್ತರಣೆ ಹಾಗೂ ಕೃಷಿ ಮಹಾವಿದ್ಯಾನಿಲಯಗಳಲ್ಲಿ ಉತ್ಪಾದಿಸಲಾದಕೃಷಿಉತ್ಪನ್ನಗಳುಹಾಗೂ ಕೃಷಿ ತಂತ್ರಜ್ಞಾನ, ತಾಂತ್ರಿಕತೆಗಳನ್ನು ಪರಿಚಯ ಮಾಡಿಸುವ ನಿಟ್ಟಿನಲ್ಲಿ ಬಿತ್ತನೆ ಬೀಜಗಳು, ಸಿರಿಧಾನ್ಯಗಳ ಮೌಲ್ಯವರ್ಧಿತ ಉತ್ಪ ನ್ನಗಳು ಸಾವಯವ ಉತ್ಪನ್ನಗಳು, ವಿವಿಧ ಸಸ್ಯಾಭಿವೃದ್ಧಿ ಸಾಮಗ್ರಿಗಳು (ಪ್ರಮುಖವಾಗಿ ತೋಟಗಾರಿಕಾ ಬೆಳಗಳಾದ ಹಣ್ಣುಗಳು, ಸುಗಂಧ ಮತ್ತು ಔಷಧೀಯ ಸಸ್ಯಗಳು) ಜೈವಿಕ ಗೊಬ್ಬರಗಳು, ಕೃಷಿ ಯಂತ್ರೋಪಕರಣಗಳು, ಎರೆಹುಳು ಗೊಬ್ಬರ, ಸಸ್ಯ ಸಂರಕ್ಷಣಾ ಜೈವಿಕ ಕೀಟನಾಶಕಗಳು, ಕರಕುಶಲವಸ್ತುಗಳು, ಅಡಿಕೆ ಉತ್ಪನ್ನಗಳು, ರೇಷ್ಮೆ ಕೃಷಿಯ ಉಪ ಉತ್ಪನ್ನಗಳು, ಅಣಬೆ ಮತ್ತು ಜೇನುಕೃಷಿ, ವಾಣಿಜೀಕರಣ ಉತ್ಪನ್ನಗಳು, ಪಶುಸಂಗೋಪನೆ, ಕೇಕ್ ಪ್ರದರ್ಶನ, ರಾಜಮುಡಿ ಅಕ್ಕಿ, ರಾಸಾಯನಿಕ ಮುಕ್ತ ಬೆಲ್ಲ, ಕೃಷಿ ಪ್ರಕಟಣೆಗಳು ಹಾಗೂ ಇನ್ನೂ ಮುಂತಾದವುಗಳನ್ನು ಈ ಸಂತೆಯನ್ನು ಪ್ರದರ್ಶನ ಮತ್ತು ಮಾರಾಟದ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ವ್ಯವಸ್ಥೆಮಾಡಲಾಗಿದೆ ಎಂದರು.

ಪ್ರಸ್ತುತ ದಿನಗಳಲ್ಲಿ ಮೌಲ್ಯವರ್ಧನೆಗೆ ಸಾಕಷ್ಟು ಒತ್ತು ಕೊಟ್ಟಿದ್ದು ವಿವಿಧ ಬೆಳೆಗಳಲ್ಲಿ ಸಿರಿಧಾನ್ಯಗಳಲ್ಲಿನ ಸಮರ್ಥ ಬೆಳೆಗಳಲ್ಲಿ (ಕಿನೋವ, ರಾಜ-ಗೀರ ಇತ್ಯಾದಿ) ಮೌಲ್ಯವರ್ಧಿತ ಪದಾರ್ಥಗಳಿಗೆಒತ್ತುನೀಡುತ್ತಿರುವುದು ಉತ್ತಮ ಬೆಳವಣಿಗೆ. ಸಾರ್ವಜನಿಕರು ಅದರಲ್ಲೂ ಮುಖ್ಯವಾಗಿ ರೈತ ಬಾಂಧವರು ಈ ವಿನೂತನ ಕಾರ್ಯಕ್ರಮದ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕೃಷಿ ವಿವಿ ಕುಲಪತಿ ಡಾ. ಎಸ್.ವಿ. ಸುರೇಶ ಅವರು ಮಾತನಾಡಿ, ರಾಜ್ಯದ ಪ್ರಪ್ರಥಮ ಕೃಷಿ ವಿಶ್ವವಿದ್ಯಾನಿಲಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು ತನ್ನ ಆರು ದಶಕಗಳ ಸುಧೀರ್ಘ ಅವಧಿಯಲ್ಲಿ 485 ತಂತ್ರಜ್ಞಾನಗಳು ಹಾಗೂ 328 ತಳಿಗಳನ್ನು ಅಭಿವೃದ್ಧಿಪಡಿಸಿದೆ.

ರಾಜ್ಯದ ಒಟ್ಟಾರೆ ಕೃಷಿ ಉತ್ಪಾದನೆ ಹೆಚ್ಚಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸಿವೆ". ಇದಲ್ಲದೆ ವಿಶ್ವವಿದ್ಯಾನಿಲಯ ಅಭಿವೃದ್ಧಿಪಡಿಸಿರುವ ಹಲವು ಸುಧಾರಿತ ತಳಿಗಳು ರಾಜ್ಯ ಮತ್ತು ರಾಷ್ಟ್ರದ ಗಡಿದಾಟಿದ್ದು 400 ಕ್ವಿಂಟಾಲ್ ಗಿಂತ ಹೆಚ್ಚು ಸೂರ್ಯಕಾಂತಿ ಬೀಜಗಳನ್ನು ಈಸ್ಟ್ ಆಫ್ರಿಕನ್ ಸೀಡ್ ಲಿಮಿಟೆಡ್ ಕಂಪನಿ ಮೂಲಕ ಆಫ್ರಿಕಾ ದೇಶಗಳಿಗೆ ವಿಶೇಷವಾಗಿ ಉಗಾಂಡಾ ದೇಶಕ್ಕೆ ರಫ್ತು ಮಾಡಲಾಗುತ್ತಿದೆ. ಜೋಳ, ಭತ್ತ, ರಾಗಿ, ತೊಗರಿ, ಕಿರುಧಾನ್ಯಗಳ ಬೀಜವನ್ನು ಮಹಾರಾಷ್ಟ್ರ, ತೆಲಂಗಾಣ, ಗುಜರಾತ್, ಮಧ್ಯಪ್ರದೇಶ, ಆಂದ್ರಪ್ರದೇಶ, ಛತ್ತೀಸ್ ಘಡ, ತಮಿಳುನಾಡು, ಒಡಿಸ್ಸಾ, ಬಿಹಾರ್, ಪಶ್ಚಿಮ ಬಂಗಾಳ ಮತ್ತು ತ್ರಿಪುರ ಸೇರಿದಂತೆ ಇನ್ನೂ ಹಲವು ರಾಜ್ಯಗಳಿಗೆ ಒದಗಿಸಲಾಗಿದ್ದು ಅಲ್ಲಿಯೂ ಸಹ ಈ ತಳಿಗಳು ಉತ್ತಮ ಫಸಲು ನೀಡುವ ಮೂಲಕ ವಿಶ್ವವಿದ್ಯಾನಿಲಯವು ರಾಷ್ಟ್ರವ್ಯಾಪ್ತಿ ತನ್ನ ಗರಿಮೆಯನ್ನು ಹೆಚ್ಚಿಸಿಕೊಂಡಿದೆ ಎಂದ ಅವರು ಮುಂದಿನ ದಿನಗಳಲ್ಲಿ ಮತ್ತಷ್ಟು ಉತ್ಪನ್ನಸಂತೆಗಳನ್ನು ಹಮ್ಮಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಸಂತೆಯಲ್ಲಿ ತರಕಾರಿಗಳ ಸೆಲ್ಫಿ ಪಾಯಿಂಟ್ ವಿಶೇಷ ಆಕರ್ಷಣೆಯಾಗಿತ್ತು.

ಕೃಷಿ ವಿಶ್ವವಿದ್ಯಾನಿಲಯದ ವ್ಯವಸ್ಥಾಪನಾ ಮಂಡಳಿ ಸದಸ್ಯರುಗಳು, ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಕಾರ್ಮಿಕರು ಸಹ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಭಯೋತ್ಪಾದಕರ ಸರ್ವನಾಶಕ್ಕೆ ಮುನೇಗೌಡ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಕೋಲಾರ,ಏ,26-ಕಾಶ್ಮೀರದಲ್ಲಿ ಹಿಂದೂಪ್ರವಾಸಿಗರಮೇಲೆನಡೆದಿರುವ ದಾಳಿ ಖಂಡನೀಯವಾಗಿದ್ದು, ಕೇಂದ್ರ ಸರ್ಕಾರ ಇದಕ್ಕೆ ತಕ್ಕ ಉತ್ತರ ನೀಡಬೇಕು ಮತ್ತು ಘಟನೆಗೆ ಕಾರಣವಾದ ಪಾಪಿ ಉಗ್ರರನ್ನು ಸರ್ವನಾಶ ಮಾಡಬೇಕು ಎಂದು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಮುನೇಗೌಡ ಆಗ್ರಹಿಸಿದರು.

ಬೈಕ್ ರ‍್ಯಾಲಿಗೂ ಮುನ್ನ ವಕೀಲರ ಸಂಘದ ಸಭಾಂಗಣದಲ್ಲಿ ಕಾಶ್ಮೀರ ದಾಳಿಯಲ್ಲಿ ಹುತಾತ್ಮರಾದವರಿಗೆ ಮೌನ ಆಚರಣೆಯ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದ ನಂತರ ಅವರು ಮಾತನಾಡಿದರು.

ಭಾರತೀಯರು ಸದಾ ಸಹಿಷ್ಣುಪರತೆ, ಸೌಹಾರ್ದತೆಗೆ ಹೆಸರಾಗಿದ್ದಾರೆ, ನಾವು ಶಾಂತಿಪ್ರಿಯರು ನಿಜ ಆದರೆ ನಮ್ಮ ತಂಟೆಗೆ ಬಂದರೆ ಸುಮ್ಮನಿರುವವರು ಅಲ್ಲ ಎಂಬುದನ್ನು ಪಾಪಿಗಳಿಗೆ ತಿಳಿಸಿಕೊಡಲು ಕೇಂದ್ರ ಕಠಿಣ ನಿರ್ಧಾರಗಳನ್ನು ಕೈಗೊಳ್ಳಬೇಕು, ಇದಕ್ಕೆ ನಮ್ಮ ವಕೀಲ ಸಮುದಾಯ ನಿಮ್ಮೊಂದಿಗೆ ಇರುತ್ತದೆ ಎಂದರು.

ಈ ಘಟನೆ ಬಹಳ ನೋವುಂಟು ಮಾಡಿದ್ದು, ಅಮಾಯಕ ಪ್ರವಾಸಿಗರ ಮೇಲೆ ನಡೆದಿರುವ ದಾಳಿ ಪಾಪಿಗಳ ಅಮಾನವೀಯ ವರ್ತನೆಗೆ ಸಾಕ್ಷಿಯಾಗಿದೆ, ಅವರು ನಿಜಕ್ಕೂ ಮನುಷ್ಯರಲ್ಲ, ಅಂತಹ ನೀಚ ಮೃಗಗಳನ್ನು ಸದೆಬಡಿಯಲು ಕೇಂದ್ರ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂತಹ ಘಟನೆಗಳು ಮರುಕಳಿಸದಂತೆ ಎಚ್ಚರವಹಿಸಬೇಕು ಎಂದು ಮನವಿ ಮಾಡಿದರು.

ಇಂತಹ ಉಗ್ರರನ್ನು ಪೋಷಿಸುತ್ತಿರುವ ಪಾಕಿಸ್ತಾನಕ್ಕೆ ಭಾರತ ಈಗಾಗಲೇ ತಕ್ಕ ರಾಜತಾಂತ್ರಿಕ ಉತ್ತರ ನೀಡಿದ್ದು, ಮುಂದೆಯೂ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಈ ಘಟನೆಗೆ ಕಾರಣರಾದ ನೀಚ ಉಗ್ರಗಾಮಿಗಳನ್ನು ಹುಡುಕಿ ಗುಂಡಿಕ್ಕಿ ಕೊಲ್ಲುವ ಮೂಲಕ ಭಾರತದ ಶಕ್ತಿ ಏನೆಂಬುದನ್ನು ವಿಶ್ವಕ್ಕೆ ತೋರಿಸಬೇಕಾಗಿದೆ ಎಂದ ಅವರು, ಕೇಂದ್ರ ಸರ್ಕಾರದ ನೇತೃತ್ವದಲ್ಲಿ ಇಡೀ ದೇಶವೇ ಹುತಾತ್ಮರಾದವರ ಕುಟುಂಬಗಳ ಜತೆಗಿದೆ ಎಂದರು.

ಕೇಂದ್ರಸರ್ಕಾರ ಭಾರತೀಯ ಸೇನೆಗೆ ಪೂರ್ಣ ಅಧಿಕಾರ ನೀಡಿ ಇಂತಹ ದೇಶದ್ರೋಹಿಳನ್ನು ಮಟ್ಟಹಾಕಬೇಕು ಎಂದು ಒತ್ತಾಯಿಸಿದರು. ಈ ದಾಳಿಯಲ್ಲಿ ಕರ್ನಾಟಕದ ನಮ್ಮ ಸಹೋದರರೂ ಬಲಿಯಾಗಿದ್ದಾರೆ, ಕಾಶ್ಮೀರದಲ್ಲಿ ಇತ್ತೀಚಿನ ದಿನಗಳಲ್ಲಿ ಭಯೋತ್ಪಾದಕ ಕೃತ್ಯಗಳಿಗೆ ಅವಕಾಶ ಇರಲಿಲ್ಲ, ಕೇಂದ್ರ ಸರ್ಕಾರದ ದಿಟ್ಟ ಕ್ರಮದಿಂದ 370ನೇ ವಿಧಿಯನ್ನು ತೆಗೆದು ಹಾಕಿ ಕಾಶ್ಮೀರ ಭಾರತದ ಅವಿಭಾಜ್ಯ ಭಾಗ ಎಂದು ಇಡೀ ವಿಶ್ವಕ್ಕೆ ತೋರಿಸಿಕೊಟ್ಟಿರುವುದು ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ವಕೀಲರ ಸಂಘದ ಅಧ್ಯಕ್ಷ ಎಂ.ಮುನೇಗೌಡ, ಕಾರ್ಯದರ್ಶಿ ಬೈರಾರೆಡ್ಡಿ, ಉಪಾಧ್ಯಕ್ಷ ರವೀಂದ್ರ ಬಾಬು, ಖಜಾಂಚಿ ನವೀನ್, ಕೆ.ವಿ.ಶಂಕರಪ್ಪ, ಬಿಸಪ್ಪಗೌಡ, ಹಿರಿಯ ವಕೀಲರಾದ ರಾಮಚಂದ್ರಪ್ಪ. ಮನ್ಮಥರೆಡ್ಡಿ, ವಾಸುದೇವಮೂರ್ತಿ, ರಾಮಲಿಂಗೇಗೌಡ, ಪ್ರಶಾಂತ್, ಮಾಗೇರಿ ನಾರಾಯಣಸ್ವಾಮಿ, ಸತೀಶ್, ಮಾಜಿ ಅಧ್ಯಕ್ಷರಾದ ಸಿ.ರಾಮಕೃಷ್ಣ, ಟಿ.ಎಂ.ಶಿವಣ್ಣ, ವಿಜಯಕುಮಾರ್, ಟಿ.ಆರ್.ಜಯರಾಂ, ಶ್ರೀನಿವಾಸ್, ಸಿ.ವಿ.ಜಯರಾಂ, ಮಲ್ಲಿಕಾರ್ಜುನಾ, ದೇವರಾಜ್, ನಾರಾಯಣಗೌಡ, ಶ್ಯಾಂ, ಎ.ಲಕ್ಷ್ಮೀನಾರಾಯಣ, ನಾರಾಯಣಸ್ವಾಮಿ, ರಾಜ್‌ಕುಮಾರ್, ನಾಗರಾಜ್, ಸಂತೊಷ್, ಚಂದ್ರಮೌಳಿ, ವೆಂಕಟೇಶ್, ಎಂ.ವಿ.ರತ್ನಮ್ಮ, ಚೌಡೇಗೌಡ, ನಳಿನಿ, ಉಮಾ ಮತ್ತಿತರರಿದ್ದರು.

# ಎಟಿಎಂ ದರೋಡೆ: ಇಬ್ಬರು ಆರೋಪಿಗಳಿಗೆ ಗುಂಡೇಟು ಓರ್ವ ಪಿ.ಎಸ್.ಐ ಹಾಗೂ ಮೂವರು ಪೇದೆಗಳಿಗೆ ಗಾಯ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.26: ನಗರದ ಕಾ-ಕಡೆ ಚೌಕ ಸಮೀಪದ ಎಟಿಎಂ ದರೋಡೆ ಮಾಡಿ ಪರಾರಿಯಾಗಿದ್ದ ಹರಿಯಾಣ ಮೂಲದ ಇಬ್ಬರನ್ನು ಪೊಲೀಸರು ಗುಂಡು ಹೊಡೆದು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ತಸ್ಲೀಂ ಮತ್ತು ಶರೀಫ್ ಬಂಧಿತರು. ಕಲಬುರಗಿ ಹೊರವಲಯದ ಬೇಲೂರ್ ಕ್ರಾಸ್ ಬಳಿ ಆರೋಪಿಗಳು ಇರುವ ಕುರಿತು ಮಾಹಿತಿ ಸಂಗ್ರಹಿಸಿದ್ದ ಸಬ್ ಅರ್ಬನ್ ಠಾಣೆಯ ಸಿಪಿಐ ಸಂತೋಷ್ ತಟ್ಟೆಪಲ್ಲಿ ಹಾಗೂ ಪಿ.ಎಸ್.ಐ ಬಸವರಾಜ ಆರೋಪಿಗಳನ್ನು ಶರಣಾಗುವಂತೆ ಸೂಚಿಸಿದಾಗ ಬದಲಿಗೆ ಇಬ್ಬರ ಮೇಲೂ ಆರೋಪಿಗಳು ಚಾಕುವಿನಿಂದ ಹಲ್ಲೆ ನಡೆಸಲು ಮುಂದಾಗಿದ್ದಾರೆ. ಹೀಗಾಗಿ ಸ್ವರಕ್ಷಣೆಯ ದೃಷ್ಟಿಯಿಂದ ಆರೋಪಿಗಳ ಮೇಲೆ ಗುಂಡು ಹಾರಿಸಲಾಗಿದೆ. ಅವರೊಂದಿಗೆ ಕಾರಿನಲ್ಲಿದ್ದ ಇತರ ಇಬ್ಬರನ್ನು ಸಹ ಬಂಧಿಸಲಾಗಿದೆ ಎಂದು ನಗರ ಪೊಲೀಸ್ ಕಮಿಷನರ್ ಶರಣಪ್ಪ ಡಗೆ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯಾದ್ಯಂತ ಎಟಿಎಂ ದರೋಡೆಯನ್ನೇ ವೃತ್ತಿಯಾಗಿಸಿಕೊಂಡಿದ್ದ ಈ ಇಬ್ಬರೂ ಇತರ ಸಹಚರರೊಂದಿಗೆ ಏ.9ರಂದು ಗ್ಯಾಸ್ ಕಟರ್ ಬಳಸಿ ಮಧ್ಯರಾತ್ರಿ ಕಾಕಡೆ ಚೌಕ ಸಮೀಪದ ಎಸ್.ಬಿ.ಐ ಎಟಿಎಂ ದರೋಡೆ ನಡೆಸಿದ್ದರು

ಬೇಲೂರು ಕ್ರಾಸ್ ಬಳಿ ಆರೋಪಿಗಳ ಚಲನವಲನದ ಕುರಿತು ಮಾಹಿತಿ ಸಂಗ್ರಹಿಸಿದ ಪೊಲೀಸರು ಅವರನ್ನು ಬಂಧಿಸಲು ತೆರಳಿದ್ದ ವೇಳೆ ಚಾಕುವಿನಿಂದ ಪೊಲೀಸರ ಮೇಲೆ ಹಲ್ಲೆ ನಡೆಸಲು ಮುಂದಾಗಿದ್ದಾರೆ. ಈ ವೇಳೆ ಪಿ.ಎಸ್.ಐ ಬಸವರಾಜ ಹಾಗೂ ಮೂವರು ಪೇದೆಗಳು ಗಾಯಗೊಂಡಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ದರೋಡೆ ನಡೆಸುವ ವೇಳೆ ಎಟಿಎಂ ಮುಂಭಾಗದಿಂದ ಐ20 ಬಿಳಿಬಣ್ಣದ ಕಾರು ಹಾದು ಹೋಗಿದ್ದನ್ನು ಪೊಲೀಸರು ತನಿಖೆ ವೇಳೆ ಪತ್ತೆ ಹಚ್ಚಿದ್ದರು. ಈ ಸುಳಿವು ಆಧರಿಸಿ ಆರೋಪಿಗಳ ಬಂಧನಕ್ಕೆ ಜಾಲ ಬೀಸಲಾಗಿತ್ತು ಎಂದರು.

ಗಾಯಗೊಂಡಿರುವ ಆರೋಪಿಗಳಾದ ಶರೀಫ್ ಹಾಗೂ ತಸ್ಲೀಂನನ್ನು ಜಿಮ್ಸ್ ಟ್ರಾಮಾ ಕೇರ್ ಸೆಂಟರ್ ಗೆ ದಾಖಲಿಸಲಾಗಿದೆ. ಈ ಪೈಕಿ ತಸ್ಲೀಂ ವಿರುದ್ಧ ಬೇರೆ ಬೇರೆ ಠಾಣೆಗಳಲ್ಲಿ ಎಂಟು ಹಾಗೂ ಶರೀಫ್ ವಿರುದ್ಧ ಮೂರು ಪ್ರಕರಣಗಳು ದಾಖಲಾಗಿವೆ.

# ಕಾಂಗ್ರೆಸ್ ಒಂದು ಸುಡುವ ಮನೆ ಎಚ್ಚರ !ಬಾಬಾಸಾಹೇಬರು ಹೀಗೇಕೆ ಹೇಳಿದರು ?: ವಿಚಾರಗೋಷ್ಠಿ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.26-ಭಾರತೀಯ ಜನತಾ ಪಾರ್ಟಿ ಜಿಲ್ಲಾ ಘಟಕದ ವತಿಯಿಂದ ಪಕ್ಷದ ಕಚೇರಿಯಲ್ಲಿ ಇಂದು "ಕಾಂಗ್ರೆಸ್ ಒಂದು ಸುಡುವ ಮನೆ ಎಚ್ಚರ! ಬಾಬಾಸಾಹೇಬರು ಹೀಗೇಕೆ ಹೇಳಿದರು ?" ಎಂಬ ವಿಷಯ ಕುರಿತು ವಿಚಾರಗೋಷ್ಠಿ ಆಯೋಜಿಸಲಾಗಿತ್ತು.

ಮಾಜಿ ಸಚಿವ ಹಾಗೂ ಪಕ್ಷದ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ವಿಚಾರಗೋಷ್ಠಿಯಲ್ಲಿ ಮಾತನಾಡಿದರು. ಪಕ್ಷದ ಎಸ್.ಸಿ.ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ್ ಕಾರಜೋಳ, ಜಿಲ್ಲಾ ಅಧ್ಯಕ್ಷ ಅಶೋಕ ಬಗಲಿ, ಜಿಲ್ಲಾ ನಗರ ಘಟಕದ ಅಧ್ಯಕ್ಷ ಚಂದು ಪಾಟೀಲ, ಶಾಸಕರಾದ ಬಸವರಾಜ ಮತ್ತಿಮೂಡ, ಡಾ. ಅವಿನಾಶ ಜಾಧವ್, ಮುಖಂಡರಾದ ಬಸವರಾಜ ಬೆಣ್ಣೂರಕರ್, ಶಿವಯೋಗಿ ನಾಗನಳ್ಳಿ, ಉಮೇಶ್ ಪಾಟೀಲ, ಅವ್ವಣ್ಣ ಮ್ಯಾಕೇರಿ, ರಾಘವೇಂದ್ರ ಕುಲಕರ್ಣಿ, ಧರ್ಮಣ್ಣಾ ಇಟಗಾ, ಸಂತೋಷ ಹಾದಿಮನಿ, ಶರಣಪ್ಪ ತಳವಾರ, ವಿಜಯಲಕ್ಷ್ಮೀ ಗೊಬ್ಬೂರಕರ್, ಅಂಬಾರಾಯ ಅಷ್ಟಗಿ, ಆನಂದ ಪಾಟೀಲ, ಮಹೇಶ್ ಪೂಜಾರಿ, ವೀರು ಪಾಟೀಲ, ಅಶೋಕ ಬಬಲಾದ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಜನರ ದಾಹ ತಿರಿಸಲು ಪಟ್ಟಣದಲ್ಲಿ ನೀರಿನ ಅರವಟ್ಟಿಗೆಗಳಿಗೆ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ.26:ಎಲ್ಲಾಜೀವಿಗಳಿಗು ಅವುಗಳ ಉಳಿವಿಗಾಗಿ ನೀರು ಬೇಕು. ನೀರು ಮಾನವನಿಗೆ ದೇವರು ನೀಡಿದ ಅತ್ಯುತ್ತಮ ಕೊಡುಗೆಯಾಗಿದೆ ಆದುದರಿಂದ ಬೇಸಿಗೆಯಲ್ಲಿ ಜನರ ನೀರಿನ ಬವಣೆ ನೀಗಿಸಲು ನೀರಿನ ಅರವಟಿಗೆ ಆರಂಬಿಸಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಭಾರತಿ ದಂಡೋತಿ ಯವರು ತಿಳಿಸಿದರು. ಜಿಲ್ಲೆಯ ಗುರುಮಠಕಲ್ ಪಟ್ಟಣದಲ್ಲಿ ಪುರಸಭೆವತಿಯಿಂದ ಕನಕ ವೃತ್ತ ಮತ್ತು ಎ ಪಿ ಎಂ ಸಿ ಆವರಣದ ಪಕ್ಕದಲ್ಲಿ ಶುದ್ಧ ಕುಡಿಯುವ ನೀರಿನ ಅರವಟಿಗೆ ಕೇಂದ್ರಗಳ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಪಟ್ಟಣದ ಸುತ್ತಮುತ್ತಲಿನ ಗ್ರಾಮಗಳ ಜನರು ತಮ್ಮ ದಿನನಿತ್ಯದ ಕೆಲಸಗಳಿಗಾಗಿ ಬರುತ್ತಿದ್ದು ಕುಡಿಯುವ ನೀರಿಗಾಗಿ ಪರದಾಟ ಹಾಗದಂತೆ ಜನರ ದಾಹ ತೀರಿಸಲು ನೀರಿನ ಅರವಟಿಗೆ ಆರಂಭಿಸಲಾಗಿದೆ. ನೀರು ಇದ್ದರೆ ಮಾತ್ರ ನಾಳೆ ಅನ್ನುವ ಸೂಕ್ತಿಯಂತೆ. ನಾವು ನೀರಿಲ್ಲದೆ ಬದುಕಲು ಸಾಧ್ಯವಿಲ್ಲ ದಿನನಿತ್ಯದ ಬದುಕಿಗೆ ನೀರು ಬೇಕು ಆದುದರಿಂದ ನೀರನ್ನು ಹಿತವಾಗಿ, ಮಿತವಾಗಿ ಬಳಸಿ ಸಾರ್ವಜನಿಕರು ಇದರ ಸದುಪಯೋಗ ಪಡೆಯ ಬೇಕು ಎಂದರು. ಕುಡಿಯುವ ನೀರಿನ ಅರವಟಿಗೆಯನ್ನು ಪುರಸಭೆ ಅಧ್ಯಕ್ಷ ರೇಣುಕಾ ಪಡಿಗೆ ಉದ್ಘಾಟಿಸಿ ಚಾಲನೆ ನೀಡಿದರು. ಈವೇಳೆ ರವೀಂದ್ರ ರೆಡ್ಡಿ, ಚಂದುಲಾಲ್ ಚೌದ್ರಿ, ಪಯಾಜ್ ಅಹ್ಮದ್, ಅಂಭಾದಾಸ್ ಜೀತ್ರೆ, ಡಿ ಎಸ್ ಎಸ್ ತಾಲೂಕ ಘಟಕದ ಅಧ್ಯಕ್ಷ ಲಾಲಪ್ಪ ತಲಾರಿ, ಪುರಸಭೆ ಸಿಬ್ಬಂದಿ ಪರಶುರಾಮ, ಅಶೋಕ ಗೌಡ, ಶ್ರೀ ನಿವಾಸ, ನರಸಿಂಹಲು ಸೇರಿದಂತೆ ಇತರರಿದ್ದರು.

# ಯುವತಿ ಕಾಣೆ ಪತ್ತೆಗೆ ಪೊಲೀಸರ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು;ಇಲ್ಲಿನ ಪಶ್ಚಿಮ ಪೊಲೀಸ್ ಠಾಣೆ ವ್ಯಾಪ್ತಿಯ ನಿವಾಸಿಯಾದ ತನಿಷ ತಂದೆ ಕಿರಣ್ ಸೋನ (18) ಎಂಬ ಯುವತಿಯು ಡಿಪ್ಲೊಮಾ ಅಂತಿಮ ವರ್ಷದಲ್ಲಿ ವಿದ್ಯಾಬ್ಯಾಸ ಮಾಡುತ್ತಿದ್ದು, ಏಪ್ರಿಲ್ 4ರ ಬೆಳಿಗ್ಗೆ 10ಗಂಟೆಗೆ ಕಾಲೇಜಿಗೆ ಹೋಗಿ ಬರುವುದಾಗಿ ಹೇಳಿ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಪಶ್ಚಿಮ ಪೊಲೀಸ್ ಠಾಣೆಯಲ್ಲಿ 39/2025 ಕಲಂ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.


# ಜನರ ದಾಹ ತಿರಿಸಲು ಪಟ್ಟಣದಲ್ಲಿ ನೀರಿನ ಅರವಟ್ಟಿಗೆಗಳಿಗೆ ಚಾಲನೆ





ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ.26:ಎಲ್ಲಾಜೀವಿಗಳಿಗು ಅವುಗಳ ಉಳಿವಿಗಾಗಿ ನೀರು ಬೇಕು. ನೀರು ಮಾನವನಿಗೆ ದೇವರು ನೀಡಿದ ಅತ್ಯುತ್ತಮ ಕೊಡುಗೆಯಾಗಿದೆ ಆದುದರಿಂದ ಬೇಸಿಗೆಯಲ್ಲಿ ಜನರ ನೀರಿನ ಬವಣೆ ನೀಗಿಸಲು ನೀರಿನ ಅರವಟಿಗೆ ಆರಂಬಿಸಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಭಾರತಿ ದಂಡೋತಿ ಯವರು ತಿಳಿಸಿದರು. ಜಿಲ್ಲೆಯ ಗುರುಮಠಕಲ್ ಪಟ್ಟಣದಲ್ಲಿ ಪುರಸಭೆವತಿಯಿಂದ ಕನಕ ವೃತ್ತ ಮತ್ತು ಎ ಪಿ ಎಂ ಸಿ ಆವರಣದ ಪಕ್ಕದಲ್ಲಿ ಶುದ್ಧ ಕುಡಿಯುವ ನೀರಿನ ಅರವಟಿಗೆ ಕೇಂದ್ರಗಳ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಪಟ್ಟಣದ ಸುತ್ತಮುತ್ತಲಿನ ಗ್ರಾಮಗಳ ಜನರು ತಮ್ಮ ದಿನನಿತ್ಯದ ಕೆಲಸಗಳಿಗಾಗಿ ಬರುತ್ತಿದ್ದು ಕುಡಿಯುವ ನೀರಿಗಾಗಿ ಪರದಾಟ ಹಾಗದಂತೆ ಜನರ ದಾಹ ತೀರಿಸಲು ನೀರಿನ ಅರವಟಿಗೆ ಆರಂಭಿಸಲಾಗಿದೆ. ನೀರು ಇದ್ದರೆ ಮಾತ್ರನಾಳೆ ಅನ್ನುವ ಸೂಕ್ತಿಯಂತೆ. ನಾವು ನೀರಿಲ್ಲದೆ ಬದುಕಲು ಸಾಧ್ಯವಿಲ್ಲ ದಿನನಿತ್ಯದ ಬದು-ಕಿಗೆ ನೀರು ಬೇಕು ಆದುದರಿಂದ ನೀರನ್ನು ಹಿತವಾಗಿ, ಮಿತವಾಗಿ ಬಳಸಿ ಸಾರ್ವಜನಿಕರು ಇದರ ಸದುಪಯೋಗ ಪಡೆಯ ಬೇಕು ಎಂದರು. ಕುಡಿಯುವ ನೀರಿನ ಅರವಟಿಗೆಯನ್ನು ಪುರಸಭೆ ಅಧ್ಯಕ್ಷ ರೇಣುಕಾ ಪಡಿಗೆ ಉದ್ಘಾಟಿಸಿ ಚಾಲನೆ ನೀಡಿದರು. ಈವೇಳೆ ರವೀಂದ್ರರೆಡ್ಡಿ, ಚಂದುಲಾಲ್ ಚೌದ್ರಿ, ಪಯಾಜ್ ಅಹ್ಮದ್, ಅಂಭಾದಾಸ್ ಜೀತ್ರೆ, ಡಿ ಎಸ್ ಎಸ್ ತಾಲೂಕ ಘಟಕದ ಅಧ್ಯಕ್ಷ ಲಾಲಪ್ಪ ತಲಾರಿ, ಪುರಸಭೆ ಸಿಬ್ಬಂದಿ ಪರಶುರಾಮ, ಅಶೋಕ ಗೌಡ, ಶ್ರೀ ನಿವಾಸ, ನರಸಿಂಹಲು ಸೇರಿದಂತೆ ಇತರರಿದ್ದರು.

# ಏಳನೇ ಸುತ್ತಿನ ಕಾಲುಬಾಯಿಜ್ವರ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ : ಏ.26: ಜಾನುವಾರು ಕಂದಮ್ಮ ದೇಶದ ಸಂಪತ್ತು, ಅದನ್ನು ಉಳಿಸಿ ಬೆಳೆಸಲು ಸಾಂಕ್ರಾಮಿಕ ರೋಗಗಳಲ್ಲಿ ಒಂದಾದ ಕಾಲುಬಾಯಿಜ್ವರ ರೋಗವನ್ನು ತಡೆಗಟ್ಟಲು ತಪ್ಪದೇ ಲಸಿಕೆ ಹಾಕಿಸಬೇಕು ಹಾಗೂ ಜೊತೆಗೆ ಎಲ್ಎಸ್ಎಲ್ ಲಸಿಕೆಯನ್ನು ಕೊಡಲಾಗುತ್ತಿದ್ದು ಈ ಲಸಿಕೆಯನ್ನು ಹಾಕಿಸಿಕೊಳ್ಳಬೇಕೆಂದು ಬೀದರ ನಗರಸಭೆ ನಾಮನಿರ್ದೇಶಿತ ಸದಸ್ಯರಾದ ಗಣೇಶ ಭೋಸ್ಲೆ ತಿಳಿಸಿದರು. ಅವರು ಶನಿವಾರದಂದು ಶ್ರೀ ಲಕ್ಷ್ಮಿ ??ೀ ಸತ್ಯನಾರಾಯಣ ಗೋಶಾಲೆ ಬೀದರದಲ್ಲಿ ಹಮ್ಮಿಕೊಂಡಿದ್ದ 7ನೇ ಸುತ್ತಿನ ಕಾಲುಬಾಯಿಜ್ವರ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

7ನೇ ಸುತ್ತಿನ ಕಾಲುಬಾಯಿಜ್ವರ ಲಸಿಕಾ ಕಾರ್ಯಕ್ರಮವು ಏ.26 ರಿಂದ ಜೂನ್.9 ರವರೆಗೆ ನಡೆ-ಯುತ್ತಿದ್ದು, ತಪ್ಪದೇ ಜಾನುವಾರುಗಳಿಗೆ ಲಸಿಕೆಯನ್ನು ಹಾಕಿಸಿಕೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಡಾ.ನರಸಪ್ಪ ಉಪನಿರ್ದೇಶಕರು, ಬೀದರ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ.ನರಸಪ್ಪ ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಸುನೀಲ ಗೌಳಿ, ಡಾ. ಶಿವಶರಣ ಯಲಗೋಡ, ಕೆವಿಎ ಅಧ್ಯಕ್ಷರು, ಡಾ.ಓಂಕಾರಪಾಟೀಲ, ಡಾ.ನೀಲಕಂಠ,

ಡಾ.ಶ್ರೀಕಾಂತ ಬಿರಾದಾರ, ಡಾ.ವಿಶ್ವನಾಥ ಸ್ವಾಮಿ, ಡಾ.ಮಿರ್ಜಾ ಮುಬಿದ್ದಿನ್ ಬೇಗ್, ಡಾ.ದೀಪಕ ಬಿರಾದಾರ, ಡಾ.ಜಗದೀಶ ಬಿರಾದಾರ, ಡಾ.ಸಂಧ್ಯಾರಾಣಿ ಹಾಗೂ ಸದಸ್ಯರುಗಳಾದ ಉಮೇಶ ಸಿರ್ಸೆ, ದಯಾನಂದ, ಸುನೀಲಕುಮಾರ,

ಜಗನ್ನಾತ, ಸೋಮನಾತ, ಹಸನಮೊಹ್ಮದ, ಇಲಿಯಾಸ್, ಸೈಯ್ಯದ ಆರೀಫ್ ಹಾಗೂ ಲಕ್ಷ್ಮೀ ನಾರಾಯಣ ಟ್ರಸ್ಟ್ ಗೋಶಾಲೆಯ ಸಂತೋಷ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪಹಲ್ಗಾಮ್ ಘಟನೆ : ಕಾಂಗ್ರೆಸ್ ನಿಂದ ಮೇಣದ ಬತ್ತಿ ಹಚ್ಚಿ ಮೌನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಏ.26: ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ 26 ಜನರ ನರಮೇದ ಖಂಡಿಸಿ ಎಐಸಿಸಿ ಸೂಚನೆ ಮೆರೆಗೆ ನಗರದಲ್ಲಿ ಶುಕ್ರವಾರ ಸಂಜೆ ಜಿಲ್ಲಾ ಕಾಂಗ್ರೆಸ್ ಘಟಕದಿಂದ ಮೇಣದ ಬತ್ತಿ ಹಚ್ಚುವ ಮೂಲಕ ಮೌನಾಚರಣೆ ನಡೆಸಲಾಯಿತು. ಇಲ್ಲಿನ ಗಾಂಧಿ ಚೌಕ್ ನಲ್ಲಿ ಜಿಲ್ಲಾಧ್ಯಕ್ಷ ಬಸರಡ್ಡಿ ಅನಪುರ, ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ನೇತೃತ್ವದಲ್ಲಿ ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಸೇರಿ ಮೇಣದ ಬತ್ತಿ ಹಚ್ಚಿ ಮೃತರ ಆತ್ಮಕ್ಕೆ ಶಾಂತಿ ಕೋರಿದರು.

ಈ ವೇಳೆ ಮಾತನಾಡಿದ ಶಾಸಕ ಪಾಟೀಲ್, ಪಹಲ್ಗಾಮ್ ನಲ್ಲಿ ಉಗ್ರರು 26 ಜನರನ್ನು ಕೊಂದಿದ್ದು, ಅಕ್ಷಮ್ಯ ಅಪರಾಧ. ಇಂತಹವರನ್ನು ಸುಮ್ಮನ್ನೆ ಬೀಡಬಾರದು, ಈಗಾಗಲೇ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ಈ ವಿಷಯದಲ್ಲಿ ಸರ್ಕಾರದ ಜೊತೆ ಇರುವುದಾಗಿ ಹೇಳಿಕೆ ನೀಡುವ ಮೂಲಕ ನಾವೆಲ್ಲ ಭಾರತೀಯರು ಒಂದೇ ಎಂಬ ಸಂದೇಶ ಸಾರಿದ್ದಾರೆ ಎಂದರು.

ಜಿಲ್ಲಾಧ್ಯಕ್ಷ ಬಸರಡ್ಡಿ ಅನಪುರ ಮಾತನಾಡಿದರು.

ಈ ವೇಳೆ ಚಿದಾನದಪ್ಪ ಕಾಳಬೆಳಗುಂದಿ, ವಿನಾಯಕ ಮಾಲಿ ಪಾಟೀಲ, ಬಿಮಣ್ಣ ಮೇಟಿ, ರಾಜಾಮುಲನದ್ದೀನ್ ಜಮಾದಾರ್, ಅಬ್ದುಲ್ ರೆಹಮಾನ್ ಕಿಲ್ಲನಕೇರ, ಲಕ್ಷ್ಮಣ ರಾಠೋಡ್, ಮರಿಯಪ್ಪ ಬಿಳಹಾರ್, ಬಸ್ಸುಗೌಡ ಬಿಳಹಾರ್, ಮಲ್ಲಿಕಾರ್ಜುನ ಈಟೆ, ಮಂಜುಳಾ ಗೂಳಿ, ರಾಘವೇಂದ್ರಮಾನಸಗಲ್, ಚನ್ನಕೇಶವ ಬಾಣತಿಹಾಳ, ಶಹಬಜ್ ಜಾಗಿದಾರ್, ಹನುಮಂತ ನಾಯಕ ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕೊಪ್ಪಳ ಜಿಲ್ಲಾ ಕಾಂಗ್ರೆಸ್ ಮೂಲಕ ಮೇಣಬತ್ತಿ ಹಚ್ಚಿ ಶ್ರದ್ಧಾಂಜಲಿ



ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :ಏ.26: ನಗರದ ಕೇಂದ್ರ ಬಸ್ ನಿಲ್ದಾಣದ ಕನಕ ವೃತ್ತದ ಮೂಲಕ ಅಶೋಕ ವೃತ್ತದವರೆಗೆ ಮೆರವಣಿಗೆ ನಡೆಸಿ ಕೊಪ್ಪಳ ಜಿಲ್ಲಾ ಕಾಂಗ್ರೆಸ್ ಮೂಲಕ ಶೋಕಾಚರಣೆ ಮಾಡಿದರು. ಜಿಲ್ಲಾ ಕಾಂಗ್ರೆಸ್ನ ಅಧ್ಯಕ್ಷರಾದ ಅಮರೇಗೌಡ ಬಯ್ಯಾಪುರ ನೇತೃತ್ವದಲ್ಲಿ ಮೆರವಣಿಗೆ ಮೂಲಕ ದೇಶದ ಐಕ್ಯತೆ ಭ್ರಾತೃತ್ವ ಮತ್ತು ಭಯೋತ್ಪಾದನೆ ನಿರ್ಮೂಲನೆಗೆ ಒತ್ತಾಯಿಸಿ ಘೋಷಣೆ ಕೂಗಿದರು ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧ್ಯಕ್ಷ, ಕೇಂದ್ರದಲ್ಲಿ ಇರುವ ಪಕ್ಷ ಲೋಪಗಳನ್ನು ಸರಿಪಡಿಸಿಕೊಳ್ಳಬೇಕು, ಪಕ್ಷ ಯಾವುದೇ ಇದ್ದರೂ ಅದಕ್ಕೆ ಇಂತಹ ದೇಶದ ಭದ್ರತೆ ವಿಚಾರವಾಗಿ ಸಹಕಾರ ನೀಡಲಾಗುತ್ತದೆ. ಧರ್ಮವನ್ನು ಎಳೆದು ತರುವ ಅಥವಾ ರಾಜಕೀಯ ಬೆರೆಸುವ ಕೆಲಸ ಮಾಡಬಾರದು ಎಂದರು. ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ್, ಸದಸ್ಯರಾದ ಮುತ್ತುರಾಜ್ ಕುಷ್ಟಗಿ, ಗುರುರಾಜ್ ಹಲಗೇರಿ, ಅಜಿಮ್ ಅತ್ತಾರ್, ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೃಷ್ಣಾ ಇಟ್ಟಂಗಿ, ಕಾಂಗ್ರೆಸ್ ಮುಖಂಡರಾದ ಅಜ್ಜಪ್ಪ ಸ್ವಾಮಿ, ಜ್ಯೋತಿ ಎಂ. ಗೊಂಡಬಾಳ, ಕಿಶೋರಿ ಬೂದನೂರ, ಪದ್ಮಾ ಕಂಬಳಿ, ಸವಿತಾ ಗೋರಂಟ್ಲಿ, ರೇಷ್ಮಾ ಖಾಜಾವಲಿ, ಗಾಳೆಪ್ಪ ಪೂಜಾರ, ಅಶೋಕ ಗೋರಂಟ್ಲಿ, ಸುರೇಶ ದಾಸರಡ್ಡಿ ಅನೇಕರಿದ್ದರು.

# ಕಾಂಗ್ರೆಸ್ ಸರ್ಕಾರಕ್ಕೆ ಹೈಕೋರ್ಟ್ ಛೀಮಾರಿ



ಬೆಂಗಳೂರು,ಏ.26:ಡಿಜಿಟಲ್ ಮೀಟರ್ ಹೆಸರಲ್ಲಿ ಬಡವರನ್ನು ಹಿಂಡುತ್ತಿದ್ದ ಕಾಂಗ್ರೆಸ್ ಸರ್ಕಾರಕ್ಕೆ ಹೈಕೋರ್ಟ್ ಛೀಮಾರಿ ಹಾಕಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಹೇಳಿದರು. ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಸ್ಮಾರ್ಟ್ ವಿದ್ಯುತ್ ಮೀಟರ್ ಅಳವಡಿಕೆ ಕಡ್ಡಾಯಗೊಳಿಸಿ ಬರೋಬ್ಬರಿ 10 ಸಾವಿರ ರೂ. ನಿಗದಿಪಡಿಸಿದ್ದ ಸರ್ಕಾರದ ನಿರ್ಧಾರಕ್ಕೆ ನ್ಯಾಯಾಲಯ ಛೀಮಾರಿ ಹಾಕಿ ತಡೆಯಾಜ್ಞೆ ನೀಡಿದೆ ಎಂದಿದ್ದಾರೆ. ಸ್ಮಾರ್ಟ್ ಮೀಟರ್ ಬೆಲೆ 2 ಸಾವಿರ ರೂ ಇದ್ದುದ್ದನ್ನು 10 ಸಾವಿರಕ್ಕೆ ಏರಿಸಿ ಜನಸಾಮಾನ್ಯರನ್ನು ಸುಲಿಗೆ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ಉಚಿತ ವಿದ್ಯುತ್ ಕೊಡಿ ಎಂದು ಯಾರಾದರೂ ಕೇಳಿದ್ದರಾ. ಬಡವರ ಸ್ಥಿತಿ ಏನಾಗಬೇಕು ಎಂದು ಉಚ್ಚ ನ್ಯಾಯಾಲಯ ಮಂಗಳಾರತಿ ಎತ್ತಿದೆ. ಇನ್ನಾದರೂ ಈ ಸರ್ಕಾರ ಜನಪೀಡಕ ನಿರ್ಧಾರಗಳನ್ನು ಕೈಬಿಟ್ಟು ಜನಪರ ಕಾರ್ಯಕ್ರಮಗಳಿಗೆ ಮುಂದಾಗಲಿ ಎಂದು ವಿಜಯೇಂದ್ರ ಆಗ್ರಹಿಸಿದ್ದಾರೆ. ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಜ್ಯೋತಿಯ ಮೂಲಕ 200 ಯೂನಿಟ್‌ವರೆಗೆ ಎಲ್ಲರಿಗೂ ಉಚಿತ ವಿದ್ಯುತ್ ನೀಡುತ್ತೇವೆ ಎಂದು ಅವಾಸ್ತವಿಕ ಗ್ಯಾರಂಟಿ ನೀಡಿ ಅದಕ್ಕೂ ಹಲವು ಷರತ್ತುಗಳನ್ನು ವಿಧಿಸಲಾಗಿತ್ತು. ಆದರೆ ಗ್ಯಾರಂಟಿ ಅನುಷ್ಠಾನದ ಬಳಿಕ ಇಂಧನ ಇಲಾಖೆ ದಿವಾಳಿ ಹಂಚಿಗೆ ಸಾಗಿದ ಬೆನ್ನಲ್ಲೆ ಗ್ರಾಹಕರ ಮೇಲೆ ಹೊರೆ ಹಾಕಿ ದಿನದಿಂದ ದಿನಕ್ಕೆ ವಿದ್ಯುತ್ ದರ ಏರಿಸುತ್ತಲೇ ಇದ್ದ ಈ ಸರ್ಕಾರ ಇದೀಗ ಸ್ಮಾರ್ಟ್ ಮೀಟರ್ ಅಳವಡಿಕೆ ಕಡ್ಡಾಯಗೊಳಿಸಿ ಬರೋಬ್ಬರಿ 10 ಸಾವಿರ ರೂ. ನಿಗದಿಪಡಿಸಿದ ನಿರ್ಧಾರಕ್ಕೆ ನ್ಯಾಯಾಲಯ ಛೀಮಾರಿ ಹಾಕಿ ತಡೆಯಾಜ್ಞೆ ನೀಡಿದೆ ಎಂದು ವಿಜಯೇಂದ್ರ ಹೇಳಿದ್ದಾರೆ.

# ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಕಾಯಕ ಮಾಸಾಚರಣೆಯ ಅರಿವು ಮೂಡಿಸಿ:ಡಾ.ಗಿರೀಶ ಬದೋಲೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಏ.26:ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಹೆಚ್ಚು ಕೂಲಿ ಕಾರರಿಗೆ ಕೆಲಸ ನೀಡುವ ಉದ್ದೇಶದಿಂದ ಏಪ್ರಿಲ್. 30 ರಿಂದ ಮೇ. 31 ರವರೆಗೆ "ಕಾಯಕ ಮಾಸಾಚಾರಣೆ ಹಮ್ಮಿಕೊಳ್ಳಲಾಗಿರುವುದರಿಂದ ಏಪ್ರಿಲ್.28 ಮತ್ತು 29 ರಂದು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಗಳಲ್ಲಿ ವಿಶೇಷ ಅಭಿಯಾನ ಕೈಗೊಂಡು ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಕಾಯಕ ಮಾಸಾಚರಣೆಯ ಅರಿವು ಮೂಡಿಸಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರು ಕೆಲಸಕ್ಕೆ ಬರುವಂತೆ ಪ್ರೇರೆಪಿಸಬೇಕೆಂದು ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ ತಿಳಿಸಿದ್ದಾರೆ.

ಏಪ್ರೀಲ 30 ರಂದು ಕಾಯಕ ತತ್ವದ ಪ್ರತಿಪಾದಕರಾದ ವಿಶ್ವಗುರು ಬಸವಣ್ಣನವರ ಜಯಂತಿ ದಿನದಂದು ಎಲ್ಲಾ ಗ್ರಾಮ ಪಂಚಾಯತಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರಿಗೆ ಕೆಲಸ ನೀಡುವ ಮೂಲಕ ಕಾಯಕ ಮಾಸಾಚರಣೆಯನ್ನು ಪ್ರಾರಂಭಿಸುವುದು, ಮತ್ತು ಕೂಲಿಕಾರರೊಂದಿಗೆ ಕಾಮಗಾರಿಗಳ ಸ್ಥಳಗಳಲ್ಲಿ ಬಸವ ಜಯಂಯನ್ನು ಆಚರಿಸಬೇಕೆಂದರು.

ಮಹಾತ್ಮಾ ಗಾಂಧಿ ನರೇಗಾ ಯೋಜನೆಯು ಗ್ರಾಮೀಣ ಪ್ರದೇಶದ ಪ.ಜಾತಿ/ಪ.ಪಂ/ಅತಿ ಸಣ್ಣ ರೈತರು/ ಮಹಿಳೆಯರು ಸೇರಿದಂತೆ ಗ್ರಾಮೀಣ ಪ್ರದೇಶದ ದುಡಿಯುವ ವರ್ಗ ಹಾಗೂ ದುರ್ಬಲ ವರ್ಗಗಳಿಗೆ ಒಂದು ಆರ್ಥಿಕ ವರ್ಷದಲ್ಲಿ 100 ದಿನಗಳ ಕೂಲಿ ಕೆಲಸ ನೀಡುವ ಮೂಲಕ ಗ್ರಾಮೀಣ ಬಡ ಕೂಲಿಕಾರರ ಬದುಕುಗಳಿಗೆ ಆಸರೆಯಾಗುವ ಮಹತ್ವದ ಸರ್ಕಾರಿ ಯೋಜನೆಯಾಗಿದ್ದು, ಬೀದರ ಜಿಲ್ಲೆಯಲ್ಲಿ ಸಾಕಷ್ಟು ಸಂಖ್ಯೆಯ ಬಡಕೂಲಿಕಾರರು ಇದ್ದು, ಜಿಲ್ಲೆಯ ಕೂಲಿಕಾರರು ಬೇರೆ ರಾಜ್ಯಗಳಿಗೆ ಕೂಲಿ ಆರಸಿ ವಲಸೆ ಹೋಗುವುದನ್ನು ತಡೆಗಟ್ಟಿ ಅವರವರ ಗ್ರಾಮಗಳಲ್ಲಿಯೇ ಮಹಾತ್ಮಾಗಾಂಧಿ ನರೇಗಾ ಯೋಜನೆಯಡಿ ಕೂಲಿ ಕೆಲಸ ನೀಡುವ ಮೂಲಕ ಅವರನ್ನು ಅವರ ಬದುಕುಗಳಿಗೆ ಆಸರೆ ಆಗಬಹುದು ಈಗ ಬೇಸಿಗೆ ಕಾಲವು ಆರಂಭವಾಗಿದ್ದು, ಬಡವರು, ರೈತರು ಮತ್ತು ಮಹಿಳೆಯರು ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳದೆ ಖಾಲಿಯಿರುವುದರಿಂದ ಅವರುಗಳಿಗೆ ಕೂಲಿ ಕೆಲಸ ನೀಡಬೇಕಾಗಿರುತ್ತದೆಂದರು..

ತಾಲ್ಲೂಕುಗಳ IEC ಸಮಾಲೋಚಕರು ಮತ್ತು ಗ್ರಾಮ ಪಂಚಾಯತಿಗಳ ಡಿ.ಇ.ಓ.ಗಳು ಮತ್ತು ಗ್ರಾಮ ಕಾಯಕ ಮಿತ್ರರು ಪಂಚಾಯತ ಪ್ರದೇಶದ ವ್ಯಾಪ್ತಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರು ಕೆಲಸಕ್ಕೆ ಬರುವಂತೆ ಪ್ರೇರೇಪಿಸುವುದು. ಹಾಗೂ ತಾಲೂಕಾ IEC ಗಳು ಪ್ರತಿ ಗುರುವಾರ ಕಡ್ಡಾಯವಾಗಿ ರೋಜಗಾರ ದಿನಾಚಾರಣೆಯನ್ನು ಚಟುವಟಿಕೆಗಳನ್ನು ಕೈಗೊಳ್ಳಬೇಕು ಹಾಗೂ ಕೂಲಿಕಾರರಿಗೆ ಹೊಸ ಉದ್ಯೋಗ ಚೀಟಿಗಳನ್ನು ನೀಡಬೇಕು. ಗ್ರಾಮ ಪಂಚಾಯತಿಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಖಿಂಇ ಗಳು ಮತ್ತು ಟಿಸಿ ಖಿಅ ಗಳು ಪ್ರತಿ ಗ್ರಾಮ ಪಂಚಾಯತಗಳಲ್ಲಿ ಕನಿಷ್ಠ 500 ಜನ ಕೂಲಿಕಾರರಿಗೆ ಕೆಲಸ ನೀಡುವಂತಹ ಕೆರೆ ಹೂಳೆತ್ತುವ, ನಾಲಾ ಹೂಳೆತ್ತುವ ಹಾಗು ಅಅಖಿ ಕಾಮಗಾರಿಗಳಂತಹ ಕಾಮಗಾರಿಗಳ ಹೆಚ್ಚು ಸಂಖ್ಯೆ NMR ಗಳನ್ನು ಸೃಜಿಸುವುದು. ಹಾಗು ಒಂದು NMR ಮುಕ್ತಾಯಗೊಂಡ ಕೂಡಲೇ ಮತ್ತೊಂದು ಓಒಖ ಕಾಮಗಾರಿ ಪ್ರಾರಂಭವಾಗುವಂತೆ ನೋಡಿಕೊಳ್ಳಬೇಕು, ಯಾವುದೇ ಕಾರಣಕ್ಕೂ ಓಒಖ ಮುಕ್ತಾಯಗೊಂಡಿದೆ. ಮತ್ತೊಂದು NMR ತೆಗೆಯತ್ತೇವೆ ಎಂದು ಹೇಳುತ್ತಾ ಕೂಲಿಕಾರರ ಕೆಲಸವನ್ನು ನಿರಾಕರಿಸಬಾರದೆಂದರು.

ಸಹಾಯಕ ನಿರ್ದೇಶಕರು (U.G) ಇವರುಗಳು ನಿಯತವಾಗಿ ಮೇಲ್ವಿಚಾರಣೆ ಮಾಡಿ ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಗಳಲ್ಲಿ ಕೆಲಸ ನೀಡಲಾಗುತ್ತಿದೆ ಎನ್ನುವುದನ್ನು ಖಚಿತ ಪಡಿಸಕೊಳ್ಳಬೇಕು. ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲಿಂದ ಮೇಲೆ ಕಾಮಗಾರಿಗಳು ನಡೆಯುತ್ತಿರುವ ಸ್ಥಳಗಳಿಗೆ ಭೇಟಿ ನೀಡಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರಿಗೆ ಕೆಲಸ ನೀಡಲು ಅಗತ್ಯವಾದ ಕ್ರಮಗಳನ್ನು ಕೈಗೊಳ್ಳುವುದು. ಕಾಮಗಾರಿಗಳ ಸ್ಥಳಗಳಲ್ಲಿ ಕೂಲಿಕಾರರಿಗೆ ನೆರಳು ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗು ಪ್ರಥಮ ಚಿಕಿತ್ಸೆ ಪೆಟ್ಟಿಗೆ ಸೇರಿದಂತೆ ಕೂಲಿಕಾರರ ಆರೋಗ್ಯ ತಪಾಶಣಾ ಶಿಬಿರಗಳನ್ನು ಏಪರ್ಡಿಸಬೇಕು.

ಯಾವುದೇ ಗ್ರಾಮ ಪಂಚಾಯತಯಲ್ಲಿ ಕೂಲಿಕಾರರಿಗೆ ಕೆಲಸ ನೀಡದೆ ಇದ್ದರೆ ಅಂತಹ ಪಂಚಾಯತ ಅಭಿವೃದ್ಧಿ ಅಧಿಕಾರಿ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದೆಂದು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

# ಮಾಧ್ಯಮಗಳು ಸೇನಾ ಕಾರ್ಯಾಚರಣೆಯ ನೇರ ಪ್ರಸಾರ ಮಾಡದಂತೆ ಕೇಂದ್ರದಿಂದ ಮಾರ್ಗಸೂಚಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.26: ರಾಷ್ಟ್ರೀಯ ಭದ್ರತೆಯ ಹಿತದೃಷ್ಟಿಯಿಂದ ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಗಳು ಮತ್ತು ಭದ್ರತಾ ಪಡೆಗಳ ಚಲನವಲನಗಳ ನೇರ ಪ್ರಸಾರವನ್ನು ಮಾಡದಂತೆ ಮಾಧ್ಯಮಗಳಿಗೆ ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಶನಿವಾರ ಮಾರ್ಗಸೂಚಿಯನ್ನು ಹೊರಡಿಸಿದೆ.

ರಾಷ್ಟ್ರೀಯ ಭದ್ರತೆಯನ್ನು ಕಾಪಾಡುವಲ್ಲಿ ಮಾಧ್ಯಮಗಳು, ಡಿಜಿಟಲ್ ವೇದಿಕೆಗಳು ಮತ್ತು ವ್ಯಕ್ತಿಗಳ ಪಾತ್ರ ಮಹತ್ವದ್ದಾಗಿದೆ. ರಕ್ಷಣಾ ಕಾರ್ಯಾಚರಣೆಗಳು ಅಥವಾ ಭದ್ರತಾ ಪಡೆಗಳ ಚಲನವಲನಕ್ಕೆ ಸಂಬಂಧಿಸಿದಂತೆ ಮೂಲಗಳನ್ನು ಆಧಾರಿಸಿದ ವರದಿಯನ್ನು ತಡೆಯುವಂತೆ ಮಾರ್ಗಸೂಚಿಯಲ್ಲಿ ಹೇಳಲಾಗಿದೆ.

ಸೂಕ್ಷ್ಮಮಾಹಿತಿಯ ಬಹಿರಂಗ ಪ್ರತಿಕೂಲ ಅಂಶಗಳಿಗೆ ನೆರವಾಗುತ್ತದೆ ಮತ್ತು ಕಾರ್ಯಾಚರಣೆಯ ಪರಿಣಾಮಕಾರಿತ್ವ, ಭದ್ರತಾ ಸಿಬ್ಬಂದಿಯ ಸುರಕ್ಷತೆಗೆ ಅಪಾಯವನ್ನುಂಟುಮಾಡುತ್ತದೆ ಎಂದು ಹೇಳಿದೆ. ಹಿಂದಿನ ಘಟನೆಗಳ ಹಿನ್ನೆಲೆಯಲ್ಲಿ ಜವಾಬ್ದಾರಿಯುತ ವರದಿಯ ಪ್ರಾಮುಖ್ಯತೆಯನ್ನು ಸಚಿವಾಲಯ ಪ್ರಮುಖವಾಗಿ ಪ್ರಸ್ತಾಪಿಸಿದೆ.

ಕಾರ್ಗಿಲ್ ಯುದ್ಧ, ಮುಂಬೈ ಭಯೋತ್ಪಾದಕ

ದಾಳಿ (26/11) ಕಂದಹಾರ್ ಅಪಹರಣದಂತಹ ಘಟನೆಗಳ ಸಮಯದಲ್ಲಿ ಅನಿಯಂತ್ರಿತ ಪ್ರಸಾರವು ರಾಷ್ಟ್ರೀಯ ಹಿತಾಸಕ್ತಿಗಳ ಮೇಲೆ ಪ್ರತಿಕೂಲ ಪರಿಣಾಮಗಳನ್ನು ಉಂಟುಮಾಡಿತು. ಕೇಬಲ್ ಟೆಲಿವಿಷನ್ ನೆಟ್‌ವರ್ಕ್ ತಿದ್ದುಪಡಿ ನಿಯಮಗಳು ಭದ್ರತಾ ಪಡೆಗಳ ಯಾವುದೇ ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಯ ನೇರ ಪ್ರಸಾರವನ್ನು ಮಾಡಬಾರದು ಎಂದು ಹೇಳುತ್ತದೆ ಎಂದು ಮಾರ್ಗಸೂಚಿಯಲ್ಲಿ ಹೇಳಲಾಗಿದೆ.

# ಉಗ್ರರ ಕೃತ್ಯಕ್ಕೂ ನಮಗೂ ಸಂಬಂಧವಿಲ್ಲ ; 'ಅಂತಾರಾಷ್ಟ್ರೀಯ ತನಿಖೆ'ಗೆ ಒತ್ತಾಯಿಸಿದ ಪಾಕ್



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.26: ಪಹಲ್ಗಾಮ್ ಭಯೋತ್ಪಾದಕ ದಾಳಿ ಹಿನ್ನೆಲೆಯಲ್ಲಿ ಪಾಕಿಸ್ತಾನ ವಿರುದ್ಧ ಭಾರತ ಹಲವು ಕ್ರಮಗಳನ್ನು ಕೈಗೊಂಡಿದ್ದು, ಪರಿಣಾಮ ನೆರೆರಾಷ್ಟ್ರ ಪತರುಗಟ್ಟುವಂತಾಗಿದೆ. ಇದರ ಬೆನ್ನಲ್ಲೇ ದಾಳಿಯಲ್ಲಿನ ತನ್ನ ಪಾತ್ರವನ್ನು ಪಾಕಿಸ್ತಾನ ನಿರಾಕರಿಸಿದ್ದು, ಅಂತರಾಷ್ಟ್ರೀಯ ತನಿಖೆಗೆ ಆಗ್ರಹಿಸಿದೆ.

ಖಾಸಗಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಮುಹಮ್ಮದ್ ಆಸಿಫ್, ಪಹಲ್ಗಾಮ್ ದಾಳಿ ಬಗ್ಗೆ ಅಂತಾರಾಷ್ಟ್ರೀಯ ತನಿಖೆ ಅಗತ್ಯ ಎಂದು ಹೇಳಿದ್ದಾರೆ. ಜೊತೆಗೆ ಅಂತರರಾಷ್ಟ್ರೀಯ ತನಿಖಾಧಿಕಾರಿಗಳು ನಡೆಸುವ ಯಾವುದೇ ತನಿಖೆಗೆ ಇಸ್ಲಾಮಾಬಾದ್ ಸಹಕರಿಸಲು ಸಿದ್ಧವಾಗಿದೆ ಎಂದು ಹೇಳಿದ್ದಾರೆ.

ನಾವು ಭಾರತಕ್ಕೆ ಹೆದರುತ್ತಿಲ್ಲ, ಒಂದು ವೇಳೆ ಅವರು ದಾಳಿ ನಡೆಸಿದರೆ, ಅದಕ್ಕೆ ದಿಟ್ಟ ಉತ್ತರವನ್ನು ನಾವು ನೀಡುತ್ತೇವೆ. ಕಾಶ್ಮೀರದಲ್ಲಿ ನಡೆದ ಉಗ್ರರ ಕೃತ್ಯಕ್ಕೂ ಪಾಕಿಸ್ತಾನಕ್ಕೂ ಸಂಬಂಧವೇ ಇಲ್ಲ, ಬದಲಿಗೆ ಇದು ಭಾರತ ಸೃಷ್ಟಿಸಿದ ನಾಟಕ ಎಂದು ಆರೋಪಿಸಿದ್ದಾರೆ.


ಘಟನೆ ನಡೆದ ಕೂಡಲೇ ದೆಹಲಿಯಿಂದ ಬಂದ ಪ್ರತಿಕ್ರಿಯೆಗಳು ನಮಗೆ ಆಶ್ಚರ್ಯವನ್ನು ತರಲಿಲ್ಲ. ಏಕೆಂದರೆ ಇದನ್ನು ನಾವು ಮೊದಲೇ ನಿರೀಕ್ಷಿಸಿದ್ದೆವು. ಉಗ್ರ ಕೃತ್ಯ ಎಂದ ಕೂಡಲೇ ನಾವು ಇದನ್ನು ಖಂಡಿಸಿದ್ದೇವೆ. ಭಯೋತ್ಪಾದನೆಯಿಂದ ವಿಶ್ವದಲ್ಲಿ ಅತಿಹೆಚ್ಚು ತೊಂದರೆಗೆ ಒಳಗಾದ ದೇಶವೆಂದರೆ ಅದು ಪಾಕಿಸ್ತಾನ, ದಶಕಗಳಿಂದ ನಾವು ಈ ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ ಎಂದು ತಿಳಿದ್ದಾರೆ.

ವಿಶ್ವದ ಇತರ ಯಾವುದೇ ದೇಶಗಳು, ಪಾಕಿಸ್ತಾನ ಅನುಭವಿಸಿದ್ದಷ್ಟು ಸಾವುನೋವುಗಳನ್ನು ಅನುಭವಿಸಲಿಲ್ಲ. ಹಾಗಾಗಿ ಉಗ್ರ ಕೃತ್ಯದಿಂದಾಗುವ ನೋವುಗಳನ್ನು ಅನುಭವಿಸುವ ಅನುಭವವನ್ನು ನಾವು ಹೊಂದಿದ್ದೇವೆ. ನಮ್ಮಲ್ಲಿ ನೆಲೆಕಂಡಿದ್ದ ಉಗ್ರರರನ್ನು ಅಮೆರಿಕಾ ಕೂಡಾ ಪ್ರಾಕ್ಸಿಯಾಗಿ ಬಳಸಿಕೊಂಡಿತು. ಪುಲ್ವಾಮಾದ ಘಟನೆಗೂ ನಮ್ಮ ಮೇಲೆ ಗೂಬೆ ಕೂರಿಸಲಾಯಿತು, ಭಾರತದ ಮಿಲಿಟರಿಗಳು ನಮ್ಮ ದೇಶದಲ್ಲಿ ದಾಳಿ ಮಾಡಿದವು. ಆ ವೇಳೆ ಅಲ್ಲಿನ ಅಧಿಕಾರಿಯೊಬ್ಬರನ್ನು ನಮ್ಮ ಸೇನೆ ವಶಕ್ಕೆ ಪಡೆದುಕೊಂಡಿತು. ಆದರೆ, ನಾವು ಸೌಹಾರ್ದತೆಯ ದೃಷ್ಟಿಯಿಂದ ಅವರನ್ನು ಬಿಟ್ಟು ಕಳುಹಿಸಿದೆವು. ಈಗ ಮತ್ತೆ ನಮ್ಮ ಮೇಲೆ ಆರೋಪವನ್ನು ಮಾಡುತ್ತಿದ್ದಾರೆಂದು ಆರೋಪಿಸಿದ್ದಾರೆ.

ಇದೇ ವೇಳೆ ಸಂಯಮದಿಂದ ವರ್ತಿಸುವಂತೆ ಕರೆ ನೀಡಿರುವ ಆಸೀಫ್, ನಾವು ಯುದ್ಧವನ್ನು ಬಯಸುವುದಿಲ್ಲ. ಈ ಯುದ್ಧವು ಭುಗಿಲೆದ್ದರೆ ಈ ಪ್ರದೇಶಕ್ಕೆ ವಿಪತ್ತು ಉಂಟಾಗಬಹುದು ಎಂದು ಹೇಳಿದ್ದಾರೆ.

ಲಷ್ಕರ್-ಇ-ತೊಯ್ಬಾ ಉಗ್ರ ಸಂಘಟನೆ ಕುರಿತು ಮಾತನಾಡಿರುವ ಅವರು, ಪಾಕಿಸ್ತಾನದಲ್ಲಿ ಎ???ಟು ಉಗ್ರ ಸಂಘಟನೆ ಸಂಪೂರ್ಣವಾಗಿ ನಿಷ್ಕ್ರಿಯವಾಗಿದೆ. ಆ ಸಂಘಟನೆಯ ಉಗ್ರರ ಉಪಸ್ಥಿತಿ ಪಾಕಿಸ್ತಾನದಲ್ಲಿಲ್ಲ. ಅವರು ಮುಗಿದ ಅಧ್ಯಾಯ. ಆ ಸಂಘಟನೆಯ ಕೆಲ ಸದಸ್ಯರು ಇಂದಿಗೂ ಗೃಹಬಂಧನದಲ್ಲಿದ್ದಾರೆಂದು ಹೇಳಿದ್ದಾರೆ. ಇದೇ ವೇಳೆ ನಮ್ಮ ದೇಶ ಭಾರತದಲ್ಲಿನ ಪ್ರತ್ಯೇಕತಾವಾದಿಗಳ ಹೋರಾಟಕ್ಕೆ ಬೆಂಬಲ ನೀಡುವುದಿಲ್ಲ ಎಂದೂ ತಿಳಿಸಿದ್ದಾರೆ.

# ಕ್ರೈಸ್ತ ಧರ್ಮಗುರು ಪೋಪ್ ಫ್ರಾನ್ಸಿಸ್‌ಗೆ ಶೋಕಸಾಗರದ ವಿದಾಯ



ಮಲ್ಲಮ್ಮ ನುಡಿ ವಾರ್ತೆ

ವ್ಯಾಟಿಕನ್:ಏ.26:ಸೋಮವಾರ ನಿಧನರಾದ ರೋಮನ್ ಕ್ಯಾಥೋಲಿಕ್‌ನ ಧರ್ಮಗುರು ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ಸೇಂಟ್ ಪೀಟರ್ಸ್ ಬೆಸಿಲಿಕಾದಿಂದ 4 ಕಿ.ಮೀ. ದೂರದಲ್ಲಿರುವ ರೋಮ್‌ನ ಬೆಸಿಲಿಕಾ ಡಿ ಸಾಂಟಾ ಮಾರಿಯಾ ಮ್ಯಾಗಿಯೋರ್‌ನಲ್ಲಿ ವಿಶ್ವನಾಯಕರ ಸಮ್ಮುಖದಲ್ಲಿ ನಡೆದಿದೆ.

ಅಂತ್ಯಕ್ರಿಯೆಗೂ ಮುನ್ನ ಪೋಪ್ ಫ್ರಾನ್ಸಿಸ್ ಅವರ ಶವಪೆಟ್ಟಿಗೆಯನ್ನು ವ್ಯಾಟಿಕನ್ ಸಿಟಿಯಲ್ಲಿ ಸಾರ್ವಜನಿಕ ದರ್ಶನಕ್ಕೆ ಇಡಲಾಗಿತ್ತು. ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು, ಅಮೆರಿಕ ಅಧ್ಯಕ್ಷ ಟ್ರಂಪ್ ಸೇರಿ ಸುಮಾರು 160 ದೇಶಗಳ ಗಣ್ಯರು ಅಂತಿಮ ದರ್ಶನ ಪಡೆದರು. ಸುಮಾರು ಎರಡೂವರೆ ಲಕ್ಷ ಜನರು ಅಂತಿಮ ನಮನ ಸಲ್ಲಿಸಲಿದ್ದಾರೆ.

ರೋಮನ್ ಕ್ಯಾಥೋಲಿಕ್ ಚರ್ಚ್‌ನ ಮೊದಲ ಲ್ಯಾಟಿನ್ ಅಮೆರಿಕದ ಧರ್ಮಗುರುಗಳಾದ ಪೋಪ್ ಅನಾರೋಗ್ಯದ ಕಾರಣ ಸತತ ಮೂರನೇ ವರ್ಷ ವಾರ್ಷಿಕ ಗುಡ್ ಫ್ರೈಡೇ ಮೆರವಣಿಗೆಯಲ್ಲಿ ಹಾಜರಾಗಿರಲಿಲ್ಲ. ಭಾನುವಾರ ಬೆಳಿಗ್ಗೆ ಅಮೆರಿಕದ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಅವರೊಂದಿಗಿನ ಖಾಸಗಿ ಸಭೆಯಲ್ಲಿ ಪೋಪ್ ಕಾಣಿಸಿಕೊಂಡಿದ್ದರು. ವೈದ್ಯರು ಪೋಪ್ ಫ್ರಾನ್ಸಿಸ್ ಅವರಲ್ಲಿ ವಿಶ್ರಾಂತಿಯಲ್ಲಿರಬೇಕೆಂದು ಸೂಚಿಸಿದ್ದರೂ ಈಸ್ಟರ್ ಭಾನುವಾರದಂದು ಭಕ್ತರಿಗೆ ದರ್ಶನ ನೀಡಿದ್ದರು

# ಮರಳು ದಕ್ಕಾದಲ್ಲಿ ಮೃತಪಟ್ಟ ಯುವಕನ ಸಾವಿಗೆ ಕಾರಣವಾದ ಆರೋಪಿ ಬಂಧನ

ಕಲಬುರಗಿ,ಏ.26:ಮಾಡಬೂಳ ಪೊಲೀಸ್ ಠಾಣೆ ವ್ಯಾಪ್ತಿಯ ಬಾಗೋಡಿ ಸೀಮಾಂತರದ ಹಫೀಸ್ ರಂಜೋಳ ಅವರ ಮರಳು ದಕ್ಕಾದಲ್ಲಿ ಮೃತಪಟ್ಟ ಬೆಳಗುಂಪಾ ಗ್ರಾಮದ ಶ್ರೀಧರ್ ತಂದೆ ಅಮೃತ ನವಲಾಕ್ ಸಾವಿಗೆ ಕಾರಣನಾದ ಆರೋಪಿಯನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಮೃತ ಶ್ರೀಧರ್ ತಾಯಿ ಚೆನ್ನಮ್ಮ ಅವರು ನೀಡಿದ ದೂರಿನ ಅನ್ವಯ ಮಾಡಬೂಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಕಗ್ಗಂಟಾದ ಈ ಪ್ರಕರಣವನ್ನು ಭೇದಿಸಲು ಹೆಚ್ಚುವರಿ ಎಸ್‌ಪಿ ಮಹೇಶ ಮೇಘಣ್ಣನವರ್, ಶಹಾಬಾದ ಡಿಎಸ್‌ಪಿ ಶಂಕರಗೌಡ ಪಾಟೀಲ ಅವರ ಮಾರ್ಗದರ್ಶನದಲ್ಲಿ ಕಾಳಗಿ ಸಿಪಿಐ ಜಗದೇವಪ್ಪ ಪಾಳಾ, ಮಾಡಬೂಳ ಪಿಎಸ್‌ಐ ಶೀಲಾದೇವಿ, ಎಎಸ್‌ಐ ಗುಂಡಪ್ಪ, ಆರ್‌ಎಸ್‌ಐ ಉಪಳಪ್ಪ, ಎಪಿಸಿ ಮಂಜುನಾಥ, ಸಿಬ್ಬಂದಿಗಳಾದ ವೀರಶೆಟ್ಟಿ, ನಂದಕುಮಾರ, ಕಮಲಾಕರ್, ಮಾಳಗೊಂಡ, ಪ್ರಶಾಂತ, ಅರುಣ, ಕೃಷ್ಣಾ , ಸಂಗಣ್ಣ, ಚಂದ್ರಶೇಖರ, ರಮೇಶ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು. ಈ ತಂಡ ಬೆಳಗುಂಪಾ ಗ್ರಾಮದ ಈಶಪ್ಪ ಅಲಿಯಾಸ್ ವಿಶ್ವನಾಥ ಅಲಿಯಾಸ್ ವಿಶ್ವರಾಧ್ಯ ತಂದೆ ರುದ್ರಪ್ಪ ವಿಶ್ವಕರ್ಮ (32) ಎಂಬಾತನನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದಾಗ ಸತ್ಯ ಬಯಲಿಗೆ ಬಂದಿದೆ. ಈಶಪ್ಪ ಅಲಿಯಾಸ್ ವಿಶ್ವನಾಥ ಬೆಳಗುಂಪಾ ಗ್ರಾಮದಲ್ಲಿ ಮದ್ಯ ಸಿಗದೇ ಇರುವುದರಿಂದ ಮದ್ಯ ಸೇವಿಸಲು ಬೈಕ್ ಮೇಲೆ ಬೆಳಗುಂಪಾ ಗ್ರಾಮದಿಂದ ಇವಣಿ ಗ್ರಾಮಕ್ಕೆ ತೆರಳಿ ಅಲ್ಲಿ ಮದ್ಯ ಸೇವಿಸಿದ್ದು, ಈ ವೇಳೆ ಶ್ರೀಧರ್ ಸಹ ಮದ್ಯ ಸೇವಿಸಿ ಕುಳಿತಿದ್ದನ್ನು ನೋಡಿ ಇಬ್ಬರು ಸೇರಿ ಚುಡುವಾ (ಮಂಡಕ್ಕಿ) ತಿಂದಿದ್ದಾರೆ. ನಂತರ ವಿಶ್ವನಾಥ ಬೈಕ್ ಮೇಲೆ ಬೆಳಗುಂಪಾ ಗ್ರಾಮಕ್ಕೆ ಹೋಗಬೇಕೆಂದಿದ್ದಾಗ ಗ್ರಾಮಸ್ಥರು ಶ್ರೀಧರನನ್ನು ನೋಡಿ ಈತನು ನಿಮ್ಮೂರಿನವನೇ ಆಗಿದ್ದಾನೆ ಆತನಿಗೆ ನಶೆಯಾಗಿದ್ದು ಕರೆದು-ಕೊಂಡು ಹೋಗಿ ಎಂದಿದ್ದಾರೆ. ಅದಕ್ಕಾಗಿ ವಿಶ್ವನಾಥ ಶ್ರೀಧರನನ್ನು ಬೈಕ್ ಹಿಂದುಗಡೆ ಕೂರಿಸಿಕೊಂಡು ಬೆಳಗುಂಪಾ ಕಡೆಗೆ ಹೋಗುತ್ತಿದ್ದಾಗ ಶ್ರೀಧರ್ ಮತ್ತೆ ಮದ್ಯ ಸೇವಿಸಲು ಇಚ್ಛೆಸಿದ್ದಾನೆ. ಆ ನಂತರ ಇಬ್ಬರು ಸೇರಿ ಮದ್ಯ ಸೇವಿಸಿದ್ದಾರೆ. ನೀರು ಖಾಲಿಯಾಗಿದ್ದರಿಂದ ಇಬ್ಬರು ಸೇರಿ ಮರಳು ದಕ್ಕಾದ ತಗ್ಗಿನಲ್ಲಿ ನೀರು ಇದೆ ಎಂದು ಅಲ್ಲಿಗೆ ಹೋಗಿ ಮತ್ತೆ ಮದ್ಯ ಸೇವಿಸಿದ್ದಾರೆ. ಆಗ ವಿಶ್ವನಾಥ ಮದ್ಯದ ಅಮಲಿನಲ್ಲಿ ಒಂದು ವರ್ಷದ ಹಿಂದೆ ಮಹಿಳೆಯೊಬ್ಬರ ವಿಷಯದಲ್ಲಿ ನಡೆದ ಜಗಳದ ವಿಷಯ ತೆಗೆದು ಶ್ರೀಧರಗೆ ಬೈಯ್ದಿದ್ದಾನೆ. ಶ್ರೀಧರ್ ಸಹ ಮರಳಿ ಬೈಯ್ದಿದಕ್ಕೆ ವಿಶ್ವನಾಥ ಶ್ರೀಧರ್ ಎಡ ಮೆಲಕಿಗೆ ಜೋರಾಗಿ ಹೊಡೆದಿದ್ದರಿಂದ ಶ್ರೀಧರ್ ಮೃತಪಟ್ಟಿದ್ದಾನೆ. ಬಳಿಕ ವಿಶ್ವನಾಥ ಶ್ರೀಧರ್ ಕೈಯಲ್ಲಿದ್ದ ಬೆಳ್ಳಿ ಖಡೆ, ಮೊಬೈಲ್ ತೆಗೆದುಕೊಂಡು ಶವವನ್ನು ಕೈಗಳಿಂದ ನೀರಿನ ತಗ್ಗಿಗೆ ನೂಕಿ ಬೈಕ್ ಮೇಲೆ ಗ್ರಾಮಕ್ಕೆ ಹೋಗಿದ್ದಾನೆ. ಮೊಬೈಲ್, ಕೈಖಡೆ ತನ್ನ ಬಳಿಯೇ ಇಟ್ಟುಕೊಂಡರೆ ಇಂದಲ್ಲ ನಾಳೆ ಸಿಕ್ಕಿಬೀಳಬಹುದು ಎಂದು ವಿಶ್ವನಾಥ ಅವುಗಳನ್ನು ಶ್ರೀಧರ್ ಸಹೋದರನ ಕೈಗೆ ಒಪ್ಪಿಸಿ ನಿಮ್ಮ ತಮ್ಮನಿಗೆ ನಶೆಯಾಗಿದ್ದರಿಂದ ಇವಣಿ ಅಡ್ಡದಾರಿಯಲ್ಲಿಯೇ ಬಿಟ್ಟಿದ್ದೇನೆ ಎಂದು ಸುಳ್ಳು ಹೇಳಿದ್ದಾನೆ. ಇದನ್ನು ನಂಬಿ ಮೃತನ ಮನೆಯವರು ಶ್ರೀಧರನನ್ನು ಎಲ್ಲಾ ಕಡೆ ಹುಡುಕಾಡಿ ಶವ ದೊ-ರೆತ ನಂತರ ಶ್ರೀಧರ್ ಆಕಸ್ಮಿಕವಾಗಿ ನೀರಿನಲ್ಲಿ ಬಿದ್ದು ಮೃತಪಟ್ಟ ಬಗ್ಗೆ ದೂರು ಸಲ್ಲಿಸಿದ್ದರು. ಪ್ರಕರಣದ ಬೆನ್ನು ಹತ್ತಿದ ಪೊಲೀಸರು ಮೃತನ ಹಿನ್ನೆಲೆ, ಆರೋಪಿ ಹಿನ್ನೆಲೆ ಸೇರಿದಂತೆ ಎಲ್ಲಾ ಆಯಾಮಗಳಿಂದ ತನಿಖೆ ನಡೆಸಿ ಸತ್ಯಾಂಶ ಬಯಲಿಗೆ ಎಳೆದಿದ್ದಾರೆ. ವಿಚಾರಣೆ ನಂತರ ಆರೋಪಿ ಈಶಪ್ಪ ಅಲಿಯಾಸ್ ವಿಶ್ವನಾಥನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.